ಸಂಪುಟ: 21, ಸಂಚಿಕೆ: 144, ಪುಟಗಳು: 8, ಭಾನುವಾರ, 3 ಮಾರ್ಚ್ 2024 RNI NO. KARKAN/2002/08054
epaper: www.sanjemugilu.com



ನೇಣು ಸಾರಥ್ಯದಲ್ಲಿ...

ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

**ಸುಭಾಷಿತ**

ಸ್ವಲ್ಪ ಉಳ್ಳವನು ಬಡವನಲ್ಲ;
ಇನ್ನೂ ಬೇಕೆನ್ನುವವನು ಬಡವ

। ಸೆಬೇಕಾ

## ಪಂಚಾಂಗ

(ಭಾನುವಾರ 3, ಮಾರ್ಚ್ -2024)

- ಸಂವತ್ಸರ- ಶೋಭಕೃತ್, ಋತು-ಶಿಶಿರ
- ಅಯನ-ಉತ್ತರಾಯಣ, ಮಾಸ- ಮಾಘ
- ಪಕ್ಷ- ಕೃಷ್ಣ, ತಿಥಿ- ದ್ವಾದಶಿ
- ನಕ್ಷತ್ರ- ಹುಬ್ಬಾ
- **ರಾಹುಕಾಲ:** 04:59 PM 06 : 30 PM
- **ಗುಳಿಕಕಾಲ:** 03:28 PM04 : 59 PM
- **ಯಮಗಂಡಕಾಲ:** 12:27 PM 01 : 58 PM

## ಸಂಕ್ಷಿಪ್ತ ಸುದ್ದಿ

### ಮೋದಿ ಮತ್ತೆ ಪ್ರಧಾನಿ ಆಗ್ಬೇಕು, ಅದಕ್ಕಾಗಿ ಬದ್ಧ



**ಬೆಂಗಳೂರು:** ಲೋಕಸಭಾ ಚುನಾವಣೆ ಹೊಸ್ತಿಲಲ್ಲಿ ಮಾಜಿ ಸಚಿವ ಸೋಮಣ್ಣ, ಮಾಜಿ ಸಿಎಂ ಯಡಿಯೂರಪ್ಪ ಅವರನ್ನು ಭೇಟಿಯಾಗಿದ್ದಾರೆ. ಸುಮಾರು ನಾಲ್ಕು ವರ್ಷಗಳ ಬಳಿಕ ಅವರು ಬಿಎಸ್‌ವೈ ಅವರನ್ನು ಭೇಟಿಯಾಗಿದ್ದು ಭಾರಿ ಕುತೂಹಲಕ್ಕೆ ಕಾರಣವಾಗಿದೆ. ಬಿಎಸ್‌ವೈ ಭೇಟಿ ಬಳಿಕ ಸುದ್ದಿಗಾರರೊಂದಿಗೆ ಮಾತಾಡಿದ ಅವರು, ಟಿಕೆಟ್ ಬಗ್ಗೆ ಯಾವುದೇ ಚರ್ಚೆ ಮಾಡಿಲ್ಲ. ಮೋದಿ ಮತ್ತೊಮ್ಮೆ ಪ್ರಧಾನಿಯಾಗಬೇಕು ಎಂಬುದು ದೇಶದ ಜನರ ಅಭಿಪ್ರಾಯ. ಈ ನಿಟ್ಟಿನಲ್ಲಿ ಎಲ್ಲರೂ ಒಟ್ಟಾಗಿ ಕೆಲಸ ಮಾಡುತ್ತೇವೆ. ಎಲ್ಲವೂ ರಾಷ್ಟ್ರದ ಅಭಿವೃದ್ಧಿಗಾಗಿ ಎಂದು ಅವರು ಹೇಳಿದ್ದಾರೆ. ಕರ್ನಾಟಕದ ಕೆಲವೊಂದು ಕಹಿ ಘಟನೆ ನೋಡಿದರೆ, ಮೋದಿ ಮತ್ತೊಮ್ಮೆ ಪ್ರಧಾನಿಯಾಗುವ ಅಗತ್ಯದ ಬಗ್ಗೆ ಮಾತುಕತೆ ನಡೆದಿದೆ. ಪುಟ 2

### ಪಾಕಿಸ್ತಾನದಲ್ಲಿ ಭಾರತದ ಮೋಸ್ಟ್ ವಾಂಟೆಡ್ ಉಗ್ರನ ಹತ್ಯೆ



**ನವದೆಹಲಿ:** ಭಾರತದ ಮೋಸ್ಟ್ ವೆಂಟೆಡ್ ಉಗ್ರ ಶೇಖ್ ಜಮೀಲ್-ಉರ್-ರೆಹಮಾನ್ ಪಾಕಿಸ್ತಾನದಲ್ಲಿ ನಿಗೂಢವಾಗಿ ಕೊಲೆಯಾಗಿದ್ದಾನೆ ಎನ್ನುವ ಮಾಹಿತಿ ಲಭ್ಯವಾಗಿದೆ. ಪಾಕಿಸ್ತಾನ ಮೂಲದ ಭಯೋತ್ಪಾದಕ ಕಮಾಂಡರ್ ಖೈಬರ್ ಪಖ್ತುಂಖ್ವಾದ ಅಬೋಟಾಬಾದ್‌ನಲ್ಲಿ ಶವವಾಗಿ ಪತ್ತೆಯಾಗಿದ್ದಾನೆ. ಯುನೈಟೆಡ್ ಜಿಹಾದ್ ಕೌನ್ಸಿಲ್‌ನ ಸ್ವಯಂ-ಘೋಷಿತ ಪ್ರಧಾನ ಕಾರ್ಯದರ್ಶಿ ರೆಹಮಾನ್ ಜಮ್ಮು ಮತ್ತು ಕಾಶ್ಮೀರದ ಪುಲ್ವಾಮಾ ಜಿಲ್ಲೆಗೆ ಸೇರಿದವನು. ಶೇಖ್ ಜಮೀಲ್-ಉರ್-ರೆಹಮಾನ್ ಯಾರು ಶೇಖ್ ಜಮೀಲ್-ಉರ್-ರೆಹಮಾನ್ ಮೂಲತಃ ಪುಲ್ವಾಮಾದವನು, ಪುಟ 2

## ಬೆಂಗಳೂರು ಬಾಂಬ್ ಸ್ಫೋಟ ಬೆನ್ನಲ್ಲೇ ದೆಹಲಿಯಲ್ಲಿ ಹೈ ಅಲರ್ಟ್



**ನವದೆಹಲಿ:** ಬೆಂಗಳೂರಿನ ಜನಪ್ರಿಯ ಕೆಫೆಯೊಂದರಲ್ಲಿ ಶುಕ್ರವಾರ ಸಂಭವಿಸಿದ ಬಾಂಬ್ ಸ್ಫೋಟ ಪ್ರಕರಣವು ದೇಶಾದ್ಯಂತ ಆತಂಕ ಮೂಡಿಸಿದೆ. ಪ್ರಕರಣ ಭಯೋತ್ಪಾದಕ ಚಟುವಟಿಕೆಯ ಅನುಮಾನ ಹುಟ್ಟುಹಾಕಿದೆ. ಈ ಹಿನ್ನೆಲೆಯಲ್ಲಿ ದೆಹಲಿಯಲ್ಲೂ ಪೊಲೀಸರು ಹೈ ಅಲರ್ಟ್ ಆಗಿದ್ದಾರೆ.

ದೆಹಲಿಯಲ್ಲಿ ಪೊಲೀಸರು ಭದ್ರತೆ ಹೆಚ್ಚಿಸಿದ್ದಾರೆ. ಜನನಿಬಿಡ ಪ್ರದೇಶಗಳಲ್ಲಿ, ವಿಶೇಷವಾಗಿ ದೆಹಲಿಯ ಮಾರುಕಟ್ಟೆಗಳಲ್ಲಿ ಜಾಗರೂಕತೆಯನ್ನು ಹೆಚ್ಚಿಸಲು ಜಿಲ್ಲಾ ಪೊಲೀಸ್ ಮುಖ್ಯಸ್ಥರಿಗೆ ಸೂಚಿಸಲಾಗಿದೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಯಾವುದೇ ಅನುಮಾನಾಸ್ಪದ ಚಟುವಟಿಕೆ ಕಂಡುಬಂದಲ್ಲಿ ಮಾರುಕಟ್ಟೆ ಸಂಘಗಳು ಜಾಗರೂಕರಾಗಿರಲು ಮತ್ತು ತಮ್ಮ ಸ್ಥಳೀಯ ಪೊಲೀಸ್ ಠಾಣೆಗಳನ್ನು ಸಂಪರ್ಕಿಸಲು ಸೂಚಿಸಲಾಗಿದೆ ಎಂದು ಹಿರಿಯ ಪೊಲೀಸ್ ಅಧಿಕಾರಿ ತಿಳಿಸಿದ್ದಾರೆ.

ಆವರಣದಲ್ಲಿ ಅಳವಡಿಸಿರುವ ಸಿಸಿಟಿವಿ ಕ್ಯಾಮೆರಾಗಳು ಕಾರ್ಯನಿರ್ವಹಿಸುವಂತೆ ಸಂಘ ಸಂಸ್ಥೆಗಳಿಗೆ ಸೂಚಿಸಲಾಗಿದೆ. ಪುಟ 2

### ಬೆಂಗಳೂರಿನಲ್ಲಿ ಆರ್‌ಎಸ್‌ಎಸ್ ಮುಖಂಡನ ಹತ್ಯೆ

## ಮೋಸ್ಟ್ ವಾಂಟೆಡ್ ಗ್ಯಾಂಗ್‌ಸ್ಟರ್ ದಕ್ಷಿಣ ಆಫ್ರಿಕಾದಲ್ಲಿ ಅರೆಸ್ಟ್



**ನವದೆಹಲಿ/ಕೇಪ್‌ಟೌನ್:** ಮಹತ್ವದ ಬೆಳವಣಿಗೆಯೊಂದರಲ್ಲಿ ರಾಷ್ಟ್ರೀಯ ತನಿಖಾ ದಳ ಮೋಸ್ಟ್ ವಾಂಟೆಡ್ ದರೋಡೆಕೋರರಲ್ಲಿ ಒಬ್ಬನಾದ ಮೊಹಮ್ಮದ್ ಗೌಸ್ ನಿಯಾಜಿನನ್ನ ದಕ್ಷಿಣ ಆಫ್ರಿಕಾದಲ್ಲಿ ಯಶಸ್ವಿಯಾಗಿ ಬಂಧಿಸಿದೆ. ಎನ್‌ಐಎ ಏಜೆನ್ಸಿಯು ನಿಯಾಜಿಯ ಪತ್ತೆಗಾಗಿ 5 ಲಕ್ಷ ರೂ.ಗಳ ಬಹುಮಾನ ಘೋಷಣೆ ಮಾಡಿತ್ತು ಎಂದು ಉನ್ನತ ಮೂಲಗಳು ತಿಳಿಸಿವೆ.

ನಿಷೇಧಿತ ಸಂಘಟನೆ ಪಾಪ್ಯುಲರ್ ಫ್ರಂಟ್ ಆಫ್ ಇಂಡಿಯಾದ ನಾಯಕ ಮೊಹಮ್ಮದ್ ಗೌಸ್ ನಿಯಾಜಿ, 2016ರಲ್ಲಿ ಬೆಂಗಳೂರಿನಲ್ಲಿ ಆರ್‌ಎಸ್‌ಎಸ್ ಮುಖಂಡ ರುದ್ರೇಶ್ ಎಂಬಾತನನ್ನ ಹತ್ಯೆಗೈದಿದ್ದ. ಘಟನೆ ನಂತರ ದೇಶದಿಂದ ಪಲಾಯನ ಮಾಡಿದ್ದ ನಿಯಾಜಿ, ವಿವಿಧ ದೇಶಗಳಲ್ಲಿ ತಲೆ ಮರೆಸಿಕೊಂಡಿದ್ದ ಎಂದು ಎನ್‌ಐಎ ಮೂಲಗಳು ಹೇಳಿವೆ.

ರುದ್ರೇಶ್‌ನನ್ನ ಹತ್ಯೆಗೈದಿದ್ದ ನಿಯಾಜಿ ವಿವಿಧ ದೇಶಗಳಲ್ಲಿ ತಲೆ ಮರೆಸಿಕೊಂಡಿದ್ದ. ತನಿಖೆಯ ಮುಂದಾಳತ್ವ ವಹಿಸಿದ್ದ ಗುಜರಾತ್ ಭಯೋತ್ಪಾದನಾ ನಿಗ್ರಹ ದಳ ನಿಯಾಜಿಯ ಚಲನವಲನಗಳ ಮೇಲೆ ಹದ್ದಿನ ಕಣ್ಣಿಟ್ಟಿತ್ತು. ಕೊನೆಗೆ ಆತ ದಕ್ಷಿಣ ಆಫ್ರಿಕಾದಲ್ಲಿ ನೆಲೆಸಿರುವ ಬಗ್ಗೆ ಸುಳಿವು ಸಿಕ್ಕಿತು. ಕೂಡಲೇ ಈ ಮಾಹಿತಿಯನ್ನು ಕೇಂದ್ರದ ಭದ್ರತಾ ಏಜೆನ್ಸಿಗೆ ರವಾನಿಸಿತು. ನಂತರ ಎನ್‌ಐಎ ದಕ್ಷಿಣ ಆಫ್ರಿಕಾದ ಅಧಿಕಾರಿಗಳೊಂದಿಗೆ ಸಂಪರ್ಕ ಸಾಧಿಸಿ, ಆರೋಪಿಯನ್ನು ಬಂಧಿಸುವಲ್ಲಿ ಯಶಸ್ವಿಯಾಯಿತು. ಪುಟ 2

### ಮೊದಲ ಪಟ್ಟಿಯಲ್ಲಿ 33 ಹಾಲಿ ಸಂಸದರನ್ನು

## ಕೈಬಿಟ್ಟ ಬಿಜೆಪಿ




**ನವದೆಹಲಿ:** ಮುಂಬರುವ ಲೋಕಸಭೆ ಚುನಾವಣೆಗೆ 195 ಅಭ್ಯರ್ಥಿಗಳ ಹೆಸರುಗಳೊಂದಿಗೆ ಬಿಜೆಪಿ ತನ್ನ ಮೊದಲ ಪಟ್ಟಿಯನ್ನು ಶನಿವಾರ ಬಿಡುಗಡೆ ಮಾಡಿದ್ದು, 33 ಹಾಲಿ ಸಂಸದರನ್ನು ಹೊಸ ಮುಖಗಳೊಂದಿಗೆ ಬದಲಾಯಿಸಿದೆ. ಪಟ್ಟಿಯಲ್ಲಿ ಬಿಜೆಪಿ ಅಸ್ಸಾಂನ 11 ಲೋಕಸಭಾ ಸ್ಥಾನಗಳಿಗೆ ತನ್ನ ಅಭ್ಯರ್ಥಿಗಳನ್ನು ಘೋಷಿಸಿದೆ. ಅವರಲ್ಲಿ ಆರು ಅಭ್ಯರ್ಥಿಗಳು ಹಾಲಿ ಸಂಸದರಾಗಿದ್ದರೆ ಉಳಿದ ಐವರು ಹೊಸ ಮುಖಗಳು. 2019 ರ ಸಾರ್ವತ್ರಿಕ ಚುನಾವಣೆಯಲ್ಲಿ ರಾಜದೀಪ್ ರಾಯ್ ಅವರು ಗೆದ್ದ ಸಿಲ್ಚಾರ್ ಲೋಕಸಭಾ ಕ್ಷೇತ್ರದಿಂದ ಪರಿಮಲ್ ಸುಕ್ಲಬೈಧ್ಯ ಅವರನ್ನು ಪಕ್ಷವು ಕಣಕ್ಕಿಳಿಸಿದೆ.

ಪ್ರಸ್ತುತ ಬಿಜೆಪಿ ಸಂಸದ ಹೋರೆನ್ ಸಿಂಗ್ ಬೇ ಹೊಂದಿರುವ ಸ್ವಾಯತ್ತ ಜಿಲ್ಲೆ ಸ್ಥಾನದಿಂದ ಪಕ್ಷದ ಅಭ್ಯರ್ಥಿ ಅಮರ್ ಸಿಂಗ್ ಟಿಸ್ಸೊ ಸ್ಪರ್ಧಿಸಲಿದ್ದಾರೆ. ಬಿಜುಲಿ ಕಲಿತಾ ಮೇಧಿ ಅವರು ರಾಣಿ ಓಜಾ ಅವರ ಹಿಡಿತದಲ್ಲಿರುವ ಗೌಹಾಟಿ ಲೋಕಸಭಾ ಕ್ಷೇತ್ರದಿಂದ ಸ್ಪರ್ಧಿಸಲಿದ್ದಾರೆ. 2019 ರಲ್ಲಿ ಪಲ್ಲಬ್ ಲೋಚನ್ ದಾಸ್ ಗೆದ್ದಿದ್ದ ತೇಜ್‌ಪುರ ಲೋಕಸಭಾ ಕ್ಷೇತ್ರದಿಂದ ರಂಜಿತ್ ದತ್ತಾ ಸ್ಪರ್ಧಿಸಲಿದ್ದಾರೆ.

ಹಾಲಿ ಸಂಸದ ರಾಮೇಶ್ವರ್ ತೇಲಿ ಅವರನ್ನು ಕೈಬಿಟ್ಟಿರುವ ಬಿಜೆಪಿ ದಿಬ್ರುಗಢ ಕ್ಷೇತ್ರದಿಂದ ಕೇಂದ್ರ ಸಚಿವ ಸರ್ಬಾನಂದ್ ಸೋನೊವಾಲ್ ಅವರನ್ನು ಅಭ್ಯರ್ಥಿಯನ್ನಾಗಿ ಹೆಸರಿಸಿದೆ.

ಛತ್ತೀಸ್‌ಗಢದ 11 ಸ್ಥಾನಗಳಿಗೆ ಬಿಜೆಪಿ ಅಭ್ಯರ್ಥಿಗಳ ಪಟ್ಟಿಯಲ್ಲಿ ನಾಲ್ಕು ಮುಖಗಳು ಹೊಸದಾಗಿವೆ. ಜಾಂಜ್‌ಗೀರ್ ಚಂಪಾ (ಎಸ್‌ಸಿ) ಕ್ಷೇತ್ರದಿಂದ ಹಾಲಿ ಸಂಸದ ಗುಹರಾಮ್ ಅಜ್ಗಲ್ಲಿ ಬದಲಿಗೆ ಪಕ್ಷದ ಅಭ್ಯರ್ಥಿ ಕಮಲೇಶ್ ಜಂಗ್ಡೆ ಅವರು ಚುನಾವಣೆಗೆ ಸ್ಪರ್ಧಿಸಲಿದ್ದಾರೆ. ರಾಯ್‌ಪುರದಿಂದ ಬಿಜೆಪಿಯ ಹಿರಿಯ ನಾಯಕ ಬ್ರಿಜ್ ಮೋಹನ್ ಅಗರವಾಲ್ ಕಣಕ್ಕೆ ಇಳಿಯಲಿದ್ದಾರೆಯೇ ಹೊರತು 2019ರಲ್ಲಿ ಗೆದ್ದಿರುವ ಸುನಿಲ್ ಕುಮಾರ್ ಸೋನಿ ಅಲ್ಲ.

ರಾಜ್ಯದ ಮಹಾಸಮುಂಡ್ ಕ್ಷೇತ್ರದಿಂದ, ಹಾಲಿ ಸಂಸದ ಚುನ್ನಿ ಲಾಲ್ ಸಾಹು ಬದಲಿಗೆ ಬಿಜೆಪಿ ಅಭ್ಯರ್ಥಿ ರೂಪ್ ಕುಮಾರಿ ಚೌಧರಿ ಲೋಕಸಭೆ ಚುನಾವಣೆಯಲ್ಲಿ ಸ್ಪರ್ಧಿಸಲಿದ್ದಾರೆ. ಕಂಕೇರ್ ಸ್ಥಾನಕ್ಕೆ ಹಾಲಿ ಸಂಸದ ಮೋಹನ್ ಮಾಂಡವಿ ಬದಲಿಗೆ ಬಿಜೆಪಿ ನಾಮನಿರ್ದೇಶಿತ ಭೋಜರಾಜ್ ನಾಗ್ ಅವರನ್ನು ನೇಮಿಸಲಾಯಿತು.

ದೆಹಲಿಯ ಲೋಕಸಭಾ ಸ್ಥಾನಗಳಿಗೆ ಬಿಜೆಪಿ ಐದು ಅಭ್ಯರ್ಥಿಗಳನ್ನು ಹೆಸರಿಸಿದೆ, ಅವರಲ್ಲಿ ನಾಲ್ವರು ಹಾಲಿ ಸಂಸದರನ್ನು ಬದಲಿಸಿದ್ದಾರೆ. ಎರಡು ಅವಧಿಯ ಸಂಸದ ಮತ್ತು ಮಾಜಿ ಕೇಂದ್ರ ಸಚಿವ ಹರ್ಷವರ್ಧನ್ ಅವರನ್ನು ಕೈಬಿಟ್ಟು ಚಾಂದನಿ ಚೌಕ್ ಲೋಕಸಭಾ ಕ್ಷೇತ್ರದಿಂದ ಪ್ರವೀಣ್ ಖಂಡೇಲ್ವಾಲ್ ಅವರನ್ನು ಅಭ್ಯರ್ಥಿಯನ್ನಾಗಿ ಪಕ್ಷವು ಹೆಸರಿಸಿದೆ.

ಪಶ್ಚಿಮ ದೆಹಲಿ ಸ್ಥಾನಕ್ಕೆ ಬಿಜೆಪಿ ಎರಡು ಅವಧಿಯ ಸಂಸದ ಪರ್ವೇಶ್ ಸಾಹಿಬ್ ಸಿಂಗ್ ವರ್ಮಾ ಬದಲಿಗೆ ಕಮಲಜೀತ್ ಸೆಹ್ರಾವತ್ ಅವರನ್ನು ನೇಮಿಸಿತು. ಬಿಜೆಪಿಯ ದಿವಂಗತ ಸುಷ್ಮಾ ಸ್ವರಾಜ್ ಅವರ ಪುತ್ರಿ ಬಾನ್ಸುರಿ ಸ್ವರಾಜ್ ಅವರನ್ನು ನವದೆಹಲಿ ಲೋಕಸಭಾ ಕ್ಷೇತ್ರದ ಅಭ್ಯರ್ಥಿಯನ್ನಾಗಿ ಅದು ಹೆಸರಿಸಿದೆ, ಪ್ರಸ್ತುತ ಕೇಂದ್ರ ಸಚಿವೆ ಮೀನಾಕ್ಷಿ ಲೇಖಿ ಅವರು ಹೊಂದಿದ್ದಾರೆ.

ದಕ್ಷಿಣ ದೆಹಲಿಯಿಂದ ಬಿಜೆಪಿ ತನ್ನ ಅಭ್ಯರ್ಥಿಯಾಗಿ ರಾಮವೀರ್ ಸಿಂಗ್ ಬಿಧುರಿಯನ್ನು ಹೆಸರಿಸಿದ್ದು, ರಮೇಶ್ ಬಿಧುರಿ ಅವರನ್ನು ಕೈಬಿಟ್ಟಿದೆ. ಪುಟ 2

### ಮಧ್ಯಪ್ರದೇಶದಲ್ಲಿ ಪ್ರಜ್ಞಾ ಠಾಕೂರ್ ಟಿಕೆಟ್ ಕಡಿತ , ಶಿವರಾಜ್‌ಸಿಂಗ್‌ಗೆ

## ಟಿಕೆಟ್



**ಮಧ್ಯಪ್ರದೇಶ:** ಬಿಜೆಪಿ ಕಾಂಗ್ರೆಸ್‌ಗಿಂತ ಮೊದಲೇ ಲೋಕಸಭಾ ಚುನಾವಣೆಗೆ 195 ಅಭ್ಯರ್ಥಿಗಳ ಮೊದಲ ಪಟ್ಟಿಯನ್ನು ಘೋಷಿಸಿದೆ. ಅದರಲ್ಲಿ ಮಧ್ಯಪ್ರದೇಶದ ಬಗ್ಗೆ ಮಾತನಾಡುವುದಾದರೆ ಮಧ್ಯಪ್ರದೇಶದಲ್ಲಿ ಬಿಜೆಪಿ 29 ಸ್ಥಾನಗಳ ಪೈಕಿ 24 ಸ್ಥಾನಗಳಿಗೆ ಅಭ್ಯರ್ಥಿಗಳ ಹೆಸರನ್ನು ಪ್ರಕಟಿಸಿದೆ. ಮಾರ್ಚ್ 6 ರಂದು ಬಿಜೆಪಿಯ ಎರಡನೇ ಪಟ್ಟಿ ಕೂಡ ಬಿಡುಗಡೆಯಾಗಬಹುದು ಎಂದು ಹೇಳಲಾಗುತ್ತಿದೆ.

ಅದರಲ್ಲಿ ಉಳಿದ ಅಭ್ಯರ್ಥಿಗಳ ಹೆಸರು ಕೂಡ ಪ್ರಕಟವಾಗಲಿದೆ. ಬಿಜೆಪಿ 6 ಹಾಲಿ ಸಂಸದರ ಟಿಕೆಟ್ ರದ್ದು ಮಾಡಿದೆ. ಇವುಗಳಲ್ಲಿ ಭೋಪಾಲ್ ಸಂಸದೆ ಪ್ರಜ್ಞಾ ಸಿಂಗ್ ಠಾಕೂರ್ ಕೂಡ ಸೇರಿದ್ದಾರೆ. ಭಾರತೀಯ ಜನತಾ ಪಕ್ಷದ ಅಭ್ಯರ್ಥಿಗಳ ಮೊದಲ ಪಟ್ಟಿಯಲ್ಲಿ ಗ್ವಾಲಿಯರ್‌ನಿಂದ ವಿವೇಕ್ ಶೆಜ್ವಾಲ್ಕರ್ ಟಿಕೆಟ್ ಕಡಿತಗೊಂಡಿದ್ದರೆ, ಗುಣದಿಂದ ಕೆಪಿ ಯಾದವ್ ಅವರಿಗೆ ಟಿಕೆಟ್ ಸಿಗಲಿಲ್ಲ. ಪುಟ 2

### ವಿಧಾನಸೌಧದಲ್ಲಿ ಪಾಕಿಸ್ತಾನ ಪರ ಘೋಷಣೆ, ರಾಮೇಶ್ವರಂ ಕೆಫೆ ಬಾಂಬ್ ಬ್ಲಾಸ್ಟ್ ಸಿಲ್ಲಿ ಅಟೆಂಪ್ಟ್

## ಸಚಿವ ಶರಣಪ್ರಕಾಶ ವಿರುದ್ಧ ಬಿಜೆಪಿ ಆಕ್ರೋಶ



**ಕಲಬುರಗಿ:** ವಿಧಾನಸೌಧದಲ್ಲಿ ಪಾಕಿಸ್ತಾನ ಪರ ಘೋಷಣೆ ಕೂಗಿದ ವಿಚಾರ ಮತ್ತು ಬೆಂಗಳೂರಿನ ರಾಮೇಶ್ವರಂ ಕೆಫೆಯಲ್ಲಿ ಸಂಭವಿಸಿದ್ದ ಬಾಂಬ್ ಸ್ಫೋಟ ಪ್ರಕರಣಗಳ ಕುರಿತಾಗಿ ವೈದ್ಯಕೀಯ ಶಿಕ್ಷಣ ಸಚಿವ ಶರಣಪ್ರಕಾಶ್ ಪಾಟೀಲ್ ಲಘುವಾಗಿ ಮಾತನಾಡಿದ್ದಾರೆ. ರಾಜ್ಯದಲ್ಲಿನ ಶಾಂತಿ-ಸುವ್ಯವಸ್ಥೆ ಕದಡಲು ಈ ರೀತಿ ಕೆಲಸ ಮಾಡುತ್ತಿದ್ದಾರೆ. ಇದಕ್ಕೆ ನಮ್ಮ ಸರ್ಕಾರ ಸೊಪ್ಪು ಹಾಕಲ್ಲ, ಇಂತಹ ಸಿಲ್ಲಿ ಅಟೆಂಪ್ಟ್ ಗಳಿಂದ ಸರ್ಕಾರ ವಿಚಲಿತವಾಗುವುದಿಲ್ಲ ಎಂದು ವಿವಾದಾತ್ಮಕ ಹೇಳಿಕೆ ನೀಡಿದ್ದಾರೆ.

ಕಲಬುರಗಿಯಲ್ಲಿಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ರಾಜ್ಯದಲ್ಲಿ ಇವಾವುದಕ್ಕೂ ಆಸ್ಪದವಿಲ್ಲ. ನಮ್ಮ ಸರ್ಕಾರದ ಉದ್ದೇಶ ರಾಜ್ಯದ ಯೋಗಕ್ಷೇಮ, ಶಾಂತಿ-ಸುವ್ಯವಸ್ಥೆ ಮತ್ತು ಅಭಿವೃದ್ಧಿ ಇದು ಒಂದೇ ಗುರಿ ಎಂದರು. ಪುಟ 2

### ಪೊಲೀಸರಿಗೆ ಯಾಮಾರಿಸಲು ಶರ್ಟ್, ಪ್ಯಾಂಟ್ ಬದಲಿಸಿ ಹೋದ

## ಶಂಕಿತ ಉಗ್ರ

**ಬೆಂಗಳೂರು:** ರಾಮೇಶ್ವರಂ ಕೆಫೆ ಬ್ಲಾಸ್ಟ್ ಪ್ರಕರಣಕ್ಕೆ ಸಂಬಂಧಿಸಿದಂತೆ ಪೊಲೀಸರಿಗೆ ಯಾಮಾರಿಸಲು ಆರೋಪಿ ಮಾಸ್ಟರ್ ಪ್ಲಾನ್ ಮಾಡಿದ್ದಾನೆ. ಕೆಫೆಯಲ್ಲಿ ಬಾಂಬ್ ಇಟ್ಟ ಬಳಿಕ ಆರೋಪಿ ಶರ್ಟ್ ಮತ್ತು ಮತ್ತು ಪ್ಯಾಂಟ್ ಬದಲಿಸಿ ಹೋಗಿರುವ ವಿಚಾರ ಪೊಲೀಸ್ ತನಿಖೆಯಲ್ಲಿ ಬೆಳಕಿಗೆ ಬಂದಿದೆ.



ದಾರಿ ಮಧ್ಯೆ ಆರೋಪಿ ಬಟ್ಟೆ ಬದಲಿಸಿ ಹೋಗಿರುವ ಬಗ್ಗೆ ತನಿಖಾಧಿಕಾರಿಗಳಿಗೆ ಮಾಹಿತಿ ದೊರೆತಿದ್ದು, ಶರ್ಟ್ ಮೇಲೆ ಶರ್ಟ್, ಪ್ಯಾಂಟ್ ಮೇಲೆ ಪ್ಯಾಂಟ್ ಹಾಕಿಕೊಂಡು ಮುಂದೆ ಹೋಗಿರುವ ಬಗ್ಗೆ ತನಿಖಾಧಿಕಾರಿಗಳಿಗೆ ಸಾಕ್ಷ್ಯ ಸಿಕ್ಕಿದೆ. ಅಲ್ಲದೇ 3-4 ಬಸ್ ಬದಲಿಸಿ ಪ್ರಯಾಣ ಮಾಡಿರುವ ಬಗ್ಗೆ ಪೊಲೀಸರು ಅನುಮಾನ ವ್ಯಕ್ತಪಡಿಸಿದ್ದಾರೆ. ರಾಜ್ಯದ ಗಡಿ ಬಿಟ್ಟು ಹೊರರಾಜ್ಯಕ್ಕೆ ಎಸ್ಕೇಪ್ ಆಗಿರುವ ಬಗ್ಗೆ ಶಂಕಿಸಿದ್ದು, ಸಿಸಿಬಿ, ಪೊಲೀಸ್ ಇಲಾಖೆಯ 200ಕ್ಕೂ ಹೆಚ್ಚು ಅಧಿಕಾರಿಗಳಿಂದ ತಲಾಶ್ ನಡೆಸಲಾಗುತ್ತಿದೆ. ಪುಟ 2

## ಖರ್ಗೆಗೆ ಗಡ್ಕರಿ ಲೀಗಲ್ ನೋಟಿಸ್

**ನವದೆಹಲಿ:** ಕೇಂದ್ರ ಸಾರಿಗೆ ಸಚಿವ ನಿತಿನ್ ಗಡ್ಕರಿ ಅವರು ತನ್ನ ಹೇಳಿಕೆಯನ್ನು ತಿರುಚಿ ಸಾಮಾಜಿಕ ಜಾಲತಾಣದಲ್ಲಿ ವಿಡಿಯೋ ಪ್ರಕಟಿಸಿದ್ದಕ್ಕೆ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮತ್ತು ಪಕ್ಷದ ಪ್ರಧಾನ ಕಾರ್ಯದರ್ಶಿ ಜೈರಾಮ್ ರಮೇಶ್ ಅವರಿಗೆ ಲೀಗಲ್ ನೋಟಿಸ್ ಕಳುಹಿಸಿ ಮೂರು ದಿನಗಳ ಒಳಗಡೆ ಜನತೆ ಮುಂದೆ ಕ್ಷಮೆ ಕೇಳುವಂತೆ ಡೆಡ್‌ಲೈನ್ ನೀಡಿದ್ದಾರೆ.





ಮಲ್ಲಿಕಾರ್ಜುನ ಖರ್ಗೆ ಮತ್ತು ಜೈರಾಮ್ ರಮೇಶ್ ಅವರು ತಮ್ಮ ಸಂದರ್ಶನದ ತಿರುಚಿದ ವಿಡಿಯೋ ಅಪ್ಲೋಡ್ ಮಾಡಿ ಉದ್ದೇಶಪೂರ್ವಕವಾಗಿ ನನಗೆ ಮತ್ತು ಬಿಜೆಪಿಯ ಇಮೇಜ್‌ಗೆ ಅಪಖ್ಯಾತಿ ತಂದಿದಿದ್ದಾರೆ ಎಂದು ಗಡ್ಕರಿ ದೂರಿದ್ದಾರೆ.

ಲೀಗಲ್ ನೋಟಿಸ್ ಸ್ವೀಕರಿಸಿದ 24 ಗಂಟೆಗಳ ಒಳಗೆ ಪೋಸ್ಟ್ ಅನ್ನು ಅಳಿಸುವಂತೆ ಮತ್ತು ಮೂರು ದಿನಗಳಲ್ಲಿ ಲಿಖಿತವಾಗಿ ಕ್ಷಮೆಯಾಚಿಸಬೇಕು ಎಂದು ಸೂಚಿಸಿದ್ದಾರೆ. ಪುಟ 2

## ಕೃಷಿ ಇಲಾಖೆಯಲ್ಲಿ ಉದ್ಯೋಗಕ್ಕೆ ಕಾಯ್ತಿದ್ದವರಿಗೆ ಗುಡ್ ನ್ಯೂಸ್



**ಬೆಂಗಳೂರು:** ನಮ್ಮ ಇಲಾಖೆಯಲ್ಲಿ ನೇಮಕಾತಿ ಒಂದು ಸಮಸ್ಯೆ ಇತ್ತು, ಇದೀಗ 750 ಜನರ ನೇಮಕಾತಿಗೆ ಅನುಮೋದನೆ ಕೊಟ್ಟಾಗಿದೆ ಎಂದು ಕೃಷಿ ಸಚಿವ ಚೆಲುವರಾಯಸ್ವಾಮಿ ಹೇಳಿದರು.

ಬೆಂಗಳೂರಿನಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 'ಎರಡ್ಮೂರು ಸಭೆ ಮಾಡಿದ್ದೇವೂ, ಇವತ್ತು ಕೂಡ ಇಲಾಖೆಯ ಅಧಿಕಾರಿಗಳ ಜೊತೆಯು ಸಭೆ ಮಾಡಿದ್ದೇವೆ. 100 ಕೃಷಿ ಅಧಿಕಾರಿಗಳು ಹಾಗೂ 650 ಸಹಾಯಕ ಕೃಷಿ ಅಧಿಕಾರಿಗಳನ್ನ ನೇಮಕಾತಿ ಮಾಡಿಕೊಳ್ಳಲು ತೀರ್ಮಾನಿಸಿದ್ದೇವೆ. ಈಗಾಗಲೇ ನೇಮಕಾತಿ ಮಾಡಿಕೊಳ್ಳಲು ಆರ್ಥಿಕ ಇಲಾಖೆಯಿಂದಲೂ ಅನುಮೋದನೆ ಕೊಡಲಾಗಿದೆ. ಜೊತೆಗೆ 582 ಹುದ್ದೆಗಳಿಗೆ ಮುಂಬಡ್ತಿ ಕೊಟ್ಟಿದ್ದು, ಈ ಮೂಲಕ ಅಧಿಕಾರಿಗಳಿಗೆ ಉತ್ಸಾಹ ತುಂಬಲು ಈ ಕ್ರಮ ಕೈಗೊಳ್ಳಲಾಗಿದೆ ಎಂದರು.

200 ಕೋಟಿ ವೆಚ್ಚದಲ್ಲಿ 10 ಸಾವಿರ ಕೃಷಿ ಹೊಂಡ

ಇನ್ನು 223 ತಾಲೂಕುಗಳನ್ನ ಬರಗಾಲ ಎಂದು ಘೋಷಣೆ ಮಾಡಿದಾಗ ರೈತರಿಗೆ ಕೃಷಿ ಇಲಾಖೆ ಸಹಾಯ ಮಾಡಲು ನಿಂತಿದೆ. 200 ಕೋಟಿ ವೆಚ್ಚದಲ್ಲಿ 10 ಸಾವಿರ ಕೃಷಿ ಹೊಂಡ ಮಾಡಿದ್ದೇವೆ. ಕೃಷಿಯಲ್ಲಿ ಯಾಂತ್ರಿಕತೆಯನ್ನು ಪ್ರೋತ್ಸಾಹಿಸಲು 63, 785 ಫಲಾನುಭವಿಗಳಿಗೆ 284.92 ಕೋಟಿ ರೂ. ಸಹಾಯಧನ ಕೊಟ್ಟಿದ್ದೇವೆ. ರೈತರಿಗೆ ಯಂತ್ರೋಪಕರಣ ಪಡೆದುಕೊಳ್ಳಲು ಸರ್ಕಾರ ಮುಂದಾಗಿದ್ದು, 100 ಹೈಟೆಕ್ ಹಾರ್ವೆಸ್ಟರ್ ಹಬ್‌ಗೆ 50 ಕೋಟಿಗಳ ಅನುದಾನ ಒದಗಿಸಲಾಗಿದೆ. ನಾನು ಮತ್ತು ಕೃಷ್ಣ ಬೈರೇಗೌಡರು ದೆಹಲಿಗೆ ಹೋಗಿ ಅಧಿಕಾರಿಗಳು, ಮಂತ್ರಿಗಳನ್ನ ಭೇಟಿ ಮಾಡಿದ್ದೇವೆ. ಇನ್ನು ನಮಗೆ ಕೇಂದ್ರದಿಂದ ಪ್ರತಿಫಲ ಸಿಕ್ಕಿಲ್ಲ, ಆದ್ದರಿಂದ ರೈತರಿಗೆ ಬೆಳೆ ವಿಮೆಗೆ ಹೆಚ್ಚಿನ ಒತ್ತು ಕೊಟ್ಟಿದ್ದೇವೆ. ಪುಟ 2

### 7 ತಿಂಗಳ ಬಳಿಕ ಮಹಿಳಾ ಆಯೋಗಕ್ಕೆ ಅಧ್ಯಕ್ಷರ ನೇಮಕ

## ಮಹಿಳೆಯರ ಪರದಾಟ!



**ಬೆಂಗಳೂರು:** ರಾಜ್ಯದಲ್ಲಿ ವಿವಿಧ ಸ್ವರೂಪದ ಮಹಿಳಾ ದೌರ್ಜನ್ಯ ಪ್ರಕರಣಗಳು ಕಳೆದ 7 ತಿಂಗಳಿನಿಂದ ಹೆಚ್ಚುತ್ತಿದೆ. ಒಂದಲ್ಲ ಒಂದು ರೀತಿಯಲ್ಲಿ ಮಹಿಳೆಯರು ದೌರ್ಜನ್ಯಕ್ಕೆ ಬಲಿಯಾಗ್ತೀದ್ದಾರೆ. ಆದರೆ ರಾಜ್ಯದಲ್ಲಿ ಕಳೆದ ಏಳು ತಿಂಗಳಿನಿಂದ ಮಹಿಳಾ ಅಧ್ಯಕ್ಷರ ನೇಮಕಾತಿ ಮಾಡದ ಹಿನ್ನಲೆ ದೌರ್ಜನ್ಯಕ್ಕೆ ಒಳಗಾದ ಮಹಿಳೆಯರ ಪರದಾಟ ಶುರುವಾಗಿದೆ. ಪುಟ 2

## ರಾಘವ ಚೈತನ್ಯ ರಥಯಾತ್ರೆಗೆ ಷರತ್ತು ಬದ್ಧ ಅನುಮತಿ ನೀಡಿದ ಹೈಕೋರ್ಟ್



**ಕಲಬುರಗಿ:** ರಾಘವ ಚೈತನ್ಯ ರಥಯಾತ್ರೆಗೆ ಷರತ್ತು ಬದ್ಧ ಅನುಮತಿ ನೀಡಿ ಕಲಬುರಗಿ ಹೈಕೋರ್ಟ್ ಪೀಠ ಅನುಮತಿ ನೀಡಿದೆ. ಶಿವರಾತ್ರಿಯಂದು ಕಲಬುರಗಿ ಜಿಲ್ಲೆ ಆಳಂದ ಪಟ್ಟಣದಲ್ಲಿ ನಡೆಯಲಿರುವ ರಥಯಾತ್ರೆಗೆ ಅನುಮತಿ ಕೋರಿ ಹಿಂದೂ ಮುಖಂಡರು ಅರ್ಜಿ ಸಲ್ಲಿಸಿದ್ದರು. ಸದ್ಯ ಲಾಡ್ಲೆ ಮಶಾಕ್ ದರ್ಗಾ ವಿವಾದ ಹಿನ್ನೆಲೆ ಷರತ್ತು ಬದ್ಧ ಅನುಮತಿ ನೀಡಲಾಗಿದೆ.

ರಥಯಾತ್ರೆ ವೇಳೆ ಡಿಜೆ, ಟ್ರಾಫಿಕ್ ನಿಯಮ ಉಲ್ಲಂಘಿಸುವಂತಿಲ್ಲ. ಅನ್ಯ ಸಮುದಾಯದ ವಿರುದ್ಧ ಯಾರೂ ಘೋಷಣೆ ಕೂಗುವಂತಿಲ್ಲ. ವಿವಾದಿತ ಸ್ಥಳದ ಕಡೆ ರಾಘವ ಚೈತನ್ಯ ರಥಯಾತ್ರೆ ಹೋಗುವಂತಿಲ್ಲ. ಸೂರ್ಯಾಸ್ತದ ನಂತರ ರಥಯಾತ್ರೆ ಮಾಡದಂತೆ ಕೋರ್ಟ್ ಷರತ್ತು ಬದ್ಧ ಅನುಮತಿ ನೀಡಿದೆ. ಕಳೆದ ಬಾರಿ ಲಾಡ್ಲೆ ಮಶಾಕ್ ದರ್ಗಾದಲ್ಲಿ ಶಿವರಾತ್ರಿ ದಿನ ಗಲಾಟೆ ನಡೆದಿತ್ತು.

ಶಿವಲಿಂಗ ಪೂಜೆಗೆ ತೆರಳಿದ ಸಮಯದಲ್ಲಿ ದೊಡ್ಡ ಗಲಾಟೆಯಾಗಿತ್ತು. ಹೀಗಾಗಿ ಈ ಬಾರಿ ಈ ಅನಾಹುತ ತಡೆಯಲು ಷರತ್ತು ಬದ್ಧ ಅನುಮತಿ ನೀಡಲಾಗಿದೆ. ಪುಟ 2

# ಅಂಬೇಡ್ಕರ್‌ನ್ನು ಓದುವುದು ಮಾನವೀಯತೆ ಅಧ್ಯಯನ ಮಾಡಿದಂತೆ

**ಮೈಸೂರು:** ಡಾ.ಬಿ.ಆರ್.ಅಂಬೇಡ್ಕರ್ ಅವರನ್ನು ಓದುವುದು ಹೊಸ ದೇಶಕ್ಕೆ ಪ್ರವೇಶದಂತೆ ಹಾಗೂ ಮಾನವೀಯತೆಯನ್ನು ಅಧ್ಯಯನ ಮಾಡುತ್ತಿದ್ದಂತೆ ಎಂದು ಸಮಾಜ ಕಲ್ಯಾಣ ಹಾಗೂ ಮೈಸೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಹೆಚ್.ಸಿ.ಮಹದೇವಪ್ಪ ಅವರು ತಿಳಿಸಿದರು.

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಡಾ.ಬಿ.ಆರ್.ಅಂಬೇಡ್ಕರ್ ಅಧ್ಯಯನ ಮತ್ತು ಸಂಶೋಧನ ಕೇಂದ್ರ, ವತಿಯಿಂದ ಘಟಿಕೋತ್ಸವ ಭವನದಲ್ಲಿ ಆಯೋಜಿಸಿದ್ದ ಡಾ.ಬಿ.ಆರ್.ಅಂಬೇಡ್ಕರ್ ಅವರ ಅಭಿವೃದ್ಧಿ ದೃಷ್ಟಿಕೋನ ಮತ್ತು ಸಮಕಾಲಿನ ಜಗತ್ತು ವಿಷಯ ಕುರಿತ ಎರಡು ದಿನಗಳ ಅಂತಾರಾಷ್ಟ್ರೀಯ ಕಾರ್ಯಾಗಾರಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಬಾಬಾ ಸಾಹೇಬರು ದೇಶಕಟ್ಟಲು, ಜನರನ್ನು ಬೆಸೆಯಲು, ಸಾಂಸ್ಕೃತಿಕವಾದ ಬದುಕಿನ ನಿರೂಪಣೆಗೆ ನೀಡಿರುವ ಸತ್ವಭರಿತ ಅನೇಕ ಕೊಡುಗೆಯ ಬಗ್ಗೆ ಎಲ್ಲರೂ ಚಿಂತನೆ ಮಾಡಬೇಕಿದೆ. ಅಸಮಾನತೆಯನ್ನು ತೊಡೆದು ಸಮಸಮಾಜದ ಸಾಧನೆಯ ಗುರಿಯ ಕಡೆಗೆ ಹೆಜ್ಜೆ ಇಡಬೇಕಿದೆ ಎಂದು ಹೇಳಿದರು.

ಸಂವಿಧಾನ ಕುರಿತು ಜನರಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ. ಅದರಂತೆ ವಿಶ್ವವಿದ್ಯಾಲಯಗಳಲ್ಲಿ ಸಂವಿಧಾನ ಕುರಿತು



ಸಮಗ್ರವಾದ ಅಧ್ಯಯನ ನಡೆಸಬೇಕಿದೆ. ಪ್ರಾಧ್ಯಾಪಕರು ವಿದ್ಯಾರ್ಥಿಗಳಿಗೆ ಸಂವಿಧಾನದ ಆಶಯಗಳನ್ನು ಬಿತ್ತಬೇಕಿದೆ. ಈ ಮೂಲಕ ಅಂಬೇಡ್ಕರ್ ಅವರ ಕನಸಾದ ಸಮೃದ್ಧ ಭಾರತದ ನಿರ್ಮಾಣಕ್ಕೆ ಪ್ರತಿಯೊಬ್ಬರೂ ಕೈಜೋಡಿಸಬೇಕಿದೆ ಎಂದು ಕರೆ ನೀಡಿದರು. ಮಾಧ್ಯಮಗಳ ನಿಲುವು ವೈಚಾರಿಕತೆ, ವೈಜ್ಞಾನಿಕ ನಿಲುವುಗಳನ್ನು ಬಲಪಡಿಸುವಂತೆ ಕಾರ್ಯನಿರ್ವಹಿಸಬೇಕಿದೆ.

ಸತಿಸಹಗಮನ ಪದ್ಧತಿ ಪಾಲಿಸಿದವರು ಇಂದು ಸಂವಿಧಾನದ ಮೇಲೆ ಸವಾರಿ ಮಾಡುತ್ತಿದ್ದಾರೆ. ಸಾಮಾಜಿಕ ಹಾಗೂ ಆರ್ಥಿಕ ಸಮಾನತೆವಿಲ್ಲದೆ ಸ್ವಾತಂತ್ರ್ಯಕ್ಕೆ ಅರ್ಥವಿಲ್ಲ. ಭಾರತದ ಎಲ್ಲಾ ಜನರನ್ನು ಸಂರಕ್ಷಣೆ ಮಾಡುವ ಸಂವಿಧಾನವನ್ನು ಬಾಬಾ ಸಾಹೇಬರು ನೀಡಿದ್ದಾರೆ. ನಮಗೆ, ನಮ್ಮ ಮಕ್ಕಳಿಗೆ, ಮಹಿಳೆಯರಿಗೆ, ರೈತರಿಗೆ, ಕಾರ್ಮಿಕರಿಗೆ ನೆಮ್ಮದಿ ಬದುಕು ಸಂವಿಧಾನದ ಸಮರ್ಪಕ ಜಾರಿಯಲ್ಲಿದೆ ಎಂದು ತಿಳಿಸಿದರು.

ಉನ್ನತ ಶಿಕ್ಷಣ ಸಚಿವರಾದ ಡಾ.ಎಂ.ಸಿ.ಸುಧಾಕರ್ ಅವರು ಮಾತನಾಡಿ, ಶಿಕ್ಷಣವು ಸುಲಭವಾಗಿ ಕೈಗೆಟುಕದ ಸಂದರ್ಭದಲ್ಲಿ ಶೋಷಿತ ಸಮುದಾಯದ ವ್ಯಕ್ತಿ ವರ್ಣಭೇದ, ಜಾತಿಭೇದದ ನಡುವೆ ಸ್ವಾತಂತ್ರ್ಯ ಪೂರ್ವದಲ್ಲಿ ವಿದೇಶದಲ್ಲಿ ಉನ್ನತ ಪದವಿ ಪಡೆದವರು ಡಾ.ಬಿ.ಆರ್.ಅಂಬೇಡ್ಕರ್. ಈ ದೇಶದ ಜಾತಿ ಪದ್ಧತಿ, ಅಸ್ಪೃಶ್ಯತೆ ತೊಲಗಿಸಲು ಅವರು ನೀಡಿರುವ ಸಂವಿಧಾನ ಪ್ರಪಂಚಕ್ಕೆ ಮಾದರಿಯಾಗಿದೆ ಎಂದರು. ಅಂಬೇಡ್ಕರ್ ಅವರು ಸಂವಿಧಾನ ಕರ್ತೃ ಮಾತ್ರವಲ್ಲ, ಆರ್ಥಿಕ ತಜ್ಞ, ಶಿಕ್ಷಣ ತಜ್ಞ, ಸಾಮಾಜಿಕ ಚಿಂತಕ, ಕ್ರಾಂತಿಕಾರಿ ನಾಯಕ, ತತ್ವಜ್ಞಾನಿ ಹಾಗೂ ಮಾನವತಾವಾದಿ. ಈ ನಿಟ್ಟಿನಲ್ಲಿ 21ನೇ ಶತಮಾನದಲ್ಲಿ ಬಾಬಾ ಸಾಹೇಬರ ದೂರದೃಷ್ಟಿತ್ವದ ಅಭಿವೃದ್ಧಿ ವಿಚಾರಗಳು ಹೇಗೆ ಪ್ರತಿಧ್ವನಿಸುತ್ತಿದೆ ಎಂಬುದನ್ನು ಚಿಂತಿಸಬೇಕಿದೆ ಎಂದರು. ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ.ಶರಣಪ್ಪ ವಿ.ಹಲಸೆ, ಕುಲಸಚಿವ ಪ್ರೊ.ಕೆ.ಎಲ್.ಎನ್.ಮೂರ್ತಿ, ಪರೀಕ್ಷಾಂಗ ಕುಲಸಚಿವ ಪ್ರೊ.ಪ್ರವೀಣ್, ಪ್ರೊ. ಎನ್.ಲಕ್ಷ್ಮಿ, ಡಾ.ಶಿವಕುಮಾರಸ್ವಾಮಿ, ವ್ಯವಸ್ಥಾಪನ ಮಂಡಳಿ ಸದಸ್ಯ ಬಿ.ಜಿ.ಪಾಟೀಲ್, ಬಾಲಕ ತೇಜಸ್ವ ಚಕ್ರವರ್ತಿ ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು.

# ಜನರ ಸಮಸ್ಯೆಗಳಿಗೆ ಧ್ವನಿಯಾಗಿದ್ದ ಪ. ಮಲ್ಲೇಶ್

## ಮುಖ್ಯಮಂತ್ರಿ ಸಿದ್ದರಾಮಯ್ಯ ● 6000 ಗ್ರಾಮ ಪಂಚಾಯಿತಿ ತಲುಪಿದ ಸಂವಿಧಾನ ಜಾಗೃತಿ ರಥ

**ಮೈಸೂರು:** ಜನರ ಸಮಸ್ಯೆಗಳಿಗೆ ಧ್ವನಿಯಾಗಿದ್ದ ಮಲ್ಲೇಶ್, ಸದಾ ಜನರ ನಡುವೆಯೇ ಇದ್ದರುಮಲ್ಲೇಶ್ ಅವರು ಬಿಟ್ಟಿರುವ ಹೋರಾಟವನ್ನು ಮತ್ತೆ ಮುಂದುವರೆಸಿದರೆ ಅದೇ ಅವರಿಗೆ ಸಲ್ಲಿಸುವ ನಿಜ ಗೌರವ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಮೈಸೂರಿನ ಪ್ರಗತಿಪರ ಸಂಘಟನೆಗಳ ಒಕ್ಕೂಟ ಇವರ ವತಿಯಿಂದ ಮೈಸೂರಿನ ಕಲಾ ಮಂದಿರದಲ್ಲಿ ಆಯೋಜಿಸಲಾಗಿದ್ದ ಶ್ರೀ ಪ. ಮಲ್ಲೇಶ್ 90 ಭಾರತ ಜನತಂತ್ರದ ಸಮಕಾಲಿನ ತಲ್ಲಣಗಳು ರಾಷ್ಟ್ರೀಯ ವಿಚಾರ ಸಂಕಿರಣ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಇತ್ತೀಚಿಗೆ ದಿನಗಳಲ್ಲಿ ನಾಯಕತ್ವದ ಚಳುವಳಿಯ ಕೊಡುವವರಿಲ್ಲ. ಮಲ್ಲೇಶ್ ಅವರು ಇಲ್ಲದಿದ್ದರೆ ಮೈಸೂರಿನಲ್ಲಿ ಚಳುವಳಿನೇ ನಡೆಯುವುದಿಲ್ಲ ಎನ್ನುವ ಹಾಗಾಗಿದೆ ಎಂದರು.

ಸಂವಿಧಾನ ಜಾಗೃತಿ 6000 ಗ್ರಾಮ ಪಂಚಾಯಿತಿ ಗಳನ್ನು ತಲುಪಿದೆ : ಭಾರತದ ಸಂವಿಧಾನ ಜಾರಿಯಾಗಿ 75 ನೇ ವರ್ಷದಲ್ಲಿದ್ದೇವೆ. ಇದು ಅಮೃತ ವರ್ಷವಾಗಿರುವುದರಿಂದ ರಾಜ್ಯ ಸರ್ಕಾರ 2024 ಜನವರಿ 26 ರಿಂದ ರಾಜ್ಯದಲ್ಲಿ ಸಂವಿಧಾನ ಜಾಗೃತಿ ಜಾಥಾ ಏರ್ಪಾಡು ಮಾಡಲಾಗಿದೆ. ಫೆಬ್ರವರಿ 23 ರವರೆಗೆ ರಾಜ್ಯದ 31 ಜಿಲ್ಲೆಗಳಲ್ಲಿ 6000 ಗ್ರಾಮ ಪಂಚಾಯಿತಿ ಗಳನ್ನು ತಲುಪಿದೆ. 24 ಮತ್ತು 25 ರಂದು ನಡೆದ ಬೃಹತ್ ಸಮಾವೇಶದಲ್ಲಿ 50 ಸಾವಿರ ಜನ ಪಾಲ್ಗೊಂಡಿದ್ದರು. ದೇಶದಲ್ಲಿ ಪ್ರಜಾಪ್ರಭುತ್ವಕ್ಕೆ ಧಕ್ಕೆ ಬಂದಿದೆ. ಸಂವಿಧಾನಕ್ಕೆ ರಕ್ಷಣೆ ಇಲ್ಲದಿರುವ ಪರಿಸ್ಥಿತಿ ನಿರ್ಮಾಣ ವಾಗುತ್ತಿದೆ. ಪ್ರಜಾಸತ್ತೆಯನ್ನು ಹಾಗೂ ಸಂವಿಧಾನವನ್ನು ಉಳಿಸಿಕೊಳ್ಳಬೇಕಾಗಿರುವುದು ಪ್ರತಿ ಭಾರತೀಯನ ಕರ್ತವ್ಯ. ಸಂವಿಧಾನ ಮತ್ತು ಪ್ರಜಾಪ್ರಭುತ್ವ ಉಳಿಸಲು ನಾವು ಮತ್ತೊಂದು ಸ್ವಾತಂತ್ರ್ಯ ಹೋರಾಟವನ್ನೇ ಮಾಡಬೇಕಾಗುತ್ತದೆ ಎಂದು ಭಾಷಣಕಾರರು ಅಭಿಪ್ರಾಯ ಪಟ್ಟಿದ್ದಾರೆ



ಎಂದು ಮುಖ್ಯಮಂತ್ರಿಗಳು ತಿಳಿಸಿದರು.

**ರಾಜಕೀಯ ಪ್ರಜಾಪ್ರಭುತ್ವ ಸಾಮಾಜಿಕ ಪ್ರಜಾಪ್ರಭುತ್ವದ ತಳಹದಿಯ ಮೇಲೆ ನಿಲ್ಲಬೇಕು** : ವೈರುಧ್ಯತೆ ಇರುವ ಸಮಾಜಕ್ಕೆ ನಾವು ಕಾಲಿಡುತ್ತಿದ್ದೇವೆ. ಸಮಾಜದಲ್ಲಿ ಆರ್ಥಿಕ, ಸಾಮಾಜಿಕ ಅಸಮಾನತೆ ಇದ್ದು, ರಾಜಕೀಯ ಸ್ವಾತಂತ್ರ್ಯ ದೊರೆತಿದೆ.

ರಾಜಕೀಯ ಪ್ರಜಾಪ್ರಭುತ್ವದಲ್ಲಿ ಒಂದು ಮತ ಒಂದು ಮೌಲ್ಯವಿದ್ದಂತೆ ಸಾಮಾಜಿಕ ಹಾಗೂ ಆರ್ಥಿಕವಾಗಿ ಇಲ್ಲ. ನಮ್ಮಲ್ಲಿ ಅಸಮಾನತೆ ಇದೆ. ಎಲ್ಲಿಯವರೆಗೆ ರಾಜಕೀಯ ಪ್ರಜಾಪ್ರಭುತ್ವ ಸಾಮಾಜಿಕ ಪ್ರಜಾಪ್ರಭುತ್ವದ ತಳಹದಿಯ ಮೇಲೆ ನಿಲ್ಲುವುದಿಲ್ಲವೋ ಅಲ್ಲಿಯವರೆಗೆ ರಾಜಕೀಯ ಪ್ರಜಾಪ್ರಭುತ್ವ ಸಾರ್ಥಕವಾಗುವುದಿಲ್ಲ ಎಂದರು.

ಸಂವಿಧಾನದಲ್ಲಿ ಹೇಳಿರುವ ಸ್ವಾತಂತ್ರ್ಯ, ಸಮಾನತೆ , ಭ್ರಾತೃತ್ವ ವನ್ನು ಒಂದರಿಂದ ಮತ್ತೊಂದನ್ನು ಬೇರ್ಪಡಿಸಲು ಸಾಧ್ಯವಿಲ್ಲ. ಸಾಮಾಜಿಕ, ಆರ್ಥಿಕ ಸಮಾನತೆ ಇರಬೇಕು. ಜಾತಿ ವ್ಯವಸ್ಥೆಯ ಕಾರಣಕ್ಕಾಗಿ ಸಾಮಾಜಿಕ, ಆರ್ಥಿಕ ಅಸಮಾನತೆ ನಿರ್ಮಾಣವಾಗಿದೆ ಎಂದರು.

ನಡವಳಿಕೆ ಗಮನಿಸಿ : ನರೇಂದ್ರ ಮೋದಿಯವರು ಸಬ್ ಕಾ ಸಾಥ್ ಸಬ್ ಕಾ ವಿಕಾಸ್ ಎನ್ನುತ್ತಾರೆ. ನಮ್ಮ ಶಾಸಕ ಬಸನಗೌಡ ಯತ್ನಾಳ್, ಟೋಪಿ ಹಾಕಿದವರು, ಗಡ್ಡ ಬಿಟ್ಟವರು ಹಾಗೂ ಬುರ್ಖಾ ಹಾಕಿದವರು ಕಚೇರಿಗೆ ಬರಬೇಡಿ ಎನ್ನುತ್ತಾರೆ. ನಮ್ಮ ನಡವಳಿಕೆ ಹೇಗಿದೆ ಎಂದು ಗಮನಿಸಬೇಕು. ವಿಮರ್ಶೆ ಮಾಡುವ ಶಕ್ತಿ ಇಲ್ಲದಿದ್ದರೆ ಹೀಗಾಗುತ್ತದೆ ಎಂದರು.

ವಿದ್ಯಾವಂತರು ಅನೇಕರಿಗೆ ಸಂವಿಧಾನದ ಪೀಠಿಕೆ ಏನು ಹೇಳುತ್ತದೆ ಎಂದು ಗೊತ್ತಿಲ್ಲ. ಸಂವಿಧಾನದ ರೀತಿಯಲ್ಲಿ ನಡೆದುಕೊಳ್ಳುವವ ಕೈಯಲ್ಲಿ ಸಂವಿಧಾನವಿದ್ದರೆ ಅದು ಶ್ರೇಷ್ಠ ಸಂವಿಧಾನವಾಗುತ್ತದೆ ಎಂದು ಅಂಬೇಡ್ಕರ್ ಹೇಳಿದ್ದರು ಎಂದರು. ಸಂವಿಧಾನದ ಬಗ್ಗೆ ನಂಬಿಕೆ, ಗೌರವ ಇಲ್ಲದಿದ್ದವರ ಕೈಯಲ್ಲಿ ಅದು ಉಳಿಯುವುದಿಲ್ಲ. ಇದು ನಮ್ಮ ಮುಂದಿರುವ ಸವಾಲು ಎಂದರು. ಕಾರ್ಯಾಂಗ, ನ್ಯಾಯಾಂಗ, ಶಾಸಕಾಂಗ ವನ್ನೇ ದುರ್ಬಲಗೊಳಿಸಿದರೆ ಸಂವಿಧಾನ ಹೇಗೆ ಶಕ್ತಿ ಯುತವಾಗಿರಲು ಸಾಧ್ಯ?

**ಜನರನ್ನು ದಾರಿತಪ್ಪಿಸಬಾರದು:** ಹಿಂದುತ್ವ ಮೃದು ಮತ್ತು ಕಟುವಾಗಿರಲು ಸಾಧ್ಯವಿಲ್ಲ ಎಂದು ಅಡ್ಡಗೋಡೆಯ ಮೇಲೆ ದೀಪವಿಟ್ಟು ಜನರನ್ನು ದಾರಿತಪ್ಪಿಸಬಾರದು. ಸಂವಿಧಾನಕ್ಕೆ ಬೆದರಿಕೆ ಇದೆ ಎನ್ನುವುದು ನಿಜ ಎಂದರು.

# ಪೊಲೀಸ್ ಆರೋಗ್ಯ ಕೇಂದ್ರ ಉದ್ಘಾಟನೆ

**ಮೈಸೂರು:** ನಗರದ ಜಲಪುರಿಯಲ್ಲಿ ನಿರ್ಮಾಣವಾಗಿರುವ ಪೊಲೀಸ್ ಆರೋಗ್ಯ ಕೇಂದ್ರವನ್ನು ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಉದ್ಘಾಟಿಸಿದರು.

ಪೊಲೀಸ್ ಆರೋಗ್ಯ ಕೇಂದ್ರ ರೂ.2 ಕೋಟಿ ವೆಚ್ಚದಲ್ಲಿ ನಿರ್ಮಾಣಗೊಂಡಿದ್ದು, 6 ಹಾಸಿಗೆಗಳಿರಲಿವೆ ಈ ಕೇಂದ್ರ, ಈ ಹಿಂದೆ ಹಳೇ ಪೊಲೀಸ್ ವಸತಿಗೃಹದಲ್ಲಿ ಕಾರ್ಯನಿರ್ವಹಿಸುತಿತ್ತು.

ಪೊಲೀಸ್ ಇಲಾಖೆಯ ಅಧಿಕಾರಿ ಸಿಬ್ಬಂದಿಗಳಿಗೆ ಸೇವೆ ನೀಡುವ ಕೇಂದ್ರದಲ್ಲಿ ಬೆಳಗಿನಿಂದ ಸಂಜೆವರಗೆ ಸೇವೆ ಲಭ್ಯವಿರಲಿದ್ದು, ಇಬ್ಬರು ಮೆಡಿಕಲ್ ಆಫೀಸರ್, ಫಾರ್ಮಾಸಿಸ್ಟ್, ಮೈನರ್ ಆಪರೇಷನ್ ಥಿಯೇಟರ್, ಕಿರಿಯ ಆರೋಗ್ಯ ಸಹಾಯಕರು ಇರಲಿದ್ದು, ಲ್ಯಾಬೊರೇಟರಿ, ಪಿಸಿಯೋಥೆರಪಿ ಸೇವೆ ದೊರೆಯಲಿದೆ.

ಪೊಲೀಸ್ ಸಿಬ್ಬಂದಿಗಳಿಗೆ ವಾರ್ಷಿಕ ತಪಾಸಣೆಯನ್ನು ಖಾಸಗಿ ಆಸ್ಪತ್ರೆಗಳಲ್ಲಿ ನಡೆಸಲಾಗುತಿತ್ತು, ಇನ್ನು ಮುಂದೆ ಪೊಲೀಸ್ ಆರೋಗ್ಯ ಕೇಂದ್ರದಲ್ಲಿ ವಾರ್ಷಿಕ ಆರೋಗ್ಯ ತಪಾಸಣೆ ಮಾಡಲಾಗುವುದು.

ಪೊಲೀಸ್ ಸಿಬ್ಬಂದಿಗಳು ಒತ್ತಡದಲ್ಲಿ ಕಾರ್ಯ ನಿರ್ವಹಿಸುವುದರಿಂದ ಅವರಿಗೆ ಡಯಟ್ ಕೌನ್ಸಿಲಿಂಗ್ ಸೇರಿದಂತೆ ವಿವಿಧ ಕೌನ್ಸಿಲಿಂಗ್ ಸೇವೆಗಳನ್ನು ಇಲಾಖೆಯಲ್ಲಿರುವ ಸೈಕಾಲಜಿಸ್ಟ್ ಅವರಿಂದ ಕೊಡಿಸಲಾಗುವುದೆಂದು ಆರೋಗ್ಯ ಕೇಂದ್ರದ ಮುಖ್ಯಸ್ಥರಾದ ಡಾ.ವೆಂಕಟೇಶ್ ತಿಳಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರಾದ ಹೆಚ್.ಸಿ.ಮಹದೇವಪ್ಪ, ಶಾಸಕರಾದ ತನ್ವೀರ್ ಸೇಠ್, ಮಂಜೇಗೌಡ, ಪ್ರಾದೇಶಿಕ ಆಯುಕ್ತರಾದ ಪ್ರಕಾಶ್, ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ, ಪೊಲೀಸ್ ವರಿಷ್ಠಾಧಿಕಾರಿ ಸೀಮಾ ಲಾಟ್ಕರ್ ಇದ್ದರು.



# ಅಸಮಾನತೆ ಇರುವವರೆಗೆ ಸ್ವಾತಂತ್ರ್ಯ ಯಶಸ್ವಿಯಾಗುವುದಿಲ್ಲ

**ಮೈಸೂರು:** ಎಲ್ಲಿಯವರೆಗೆ ಅಸಮಾನತೆ ಇರುತ್ತದೆಯೋ ಅಲ್ಲಿಯವರೆಗೆ ಸ್ವಾತಂತ್ರ್ಯ ಯಶಸ್ವಿಯಾಗುವುದಿಲ್ಲ ಎಂದು ಹೇಳಲಾಗುವುದಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಿಪ್ರಾಯ ವ್ಯಕ್ತಪಡಿಸಿದರು. ಪ್ರಗತಿಪರ ಸಂಘಟನೆಗಳ ಒಕ್ಕೂಟ ಇವರ ವತಿಯಿಂದ ಮೈಸೂರಿನ ಕಲಾ ಮಂದಿರದಲ್ಲಿ ಆಯೋಜಿಸಲಾಗಿದ್ದ ಶ್ರೀ ಪ. ಮಲ್ಲೇಶ್ 90 ಭಾರತ ಜನತಂತ್ರದ ಸಮಕಾಲಿನ ತಲ್ಲಣಗಳು ರಾಷ್ಟ್ರೀಯ ವಿಚಾರ ಸಂಕಿರಣ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಮನು ಸ್ಮೃತಿಯಿಂದ ಶೂದ್ರರು ಅಕ್ಷರ ಸಂಸ್ಕೃತಿಯಿಂದ ವಂಚಿತರಾದರು. ಚಾತುರ್ವರ್ಣ ವ್ಯವಸ್ಥೆಯಲ್ಲಿ ಮೊದಲ ಮೂರು ವರ್ಗಗಳಿಗೆ ವಿದ್ಯೆಗೆ ಅವಕಾಶವಿತ್ತು ಎಂದರು. ಕಾಯಕ ಜೀವಿಗಳಿಗೆ ವಿದ್ಯೆ, ಆಸ್ತಿ ಇರುವಂತಿರಲಿಲ್ಲ. ಜಾತಿ ವ್ಯವಸ್ಥೆಯ ಕಾರಣದಿಂದಲೇ ಅಸಮಾನತೆ ಸೃಷ್ಟಿಯಾಗಿ ಕೇವಲ ಕೈಯಲ್ಲಿ ಆಸ್ತಿ ಕೇಂದ್ರೀಕರಿಸಿ ವಿದ್ಯೆಯಿಂದ ವಂಚಿತರಾದರು. ಎಲ್ಲಿಯವರೆಗೆ ಅಸಮಾನತೆ ಇರುತ್ತದೆಯೋ ಅಲ್ಲಿಯವರೆಗೆ ಸ್ವಾತಂತ್ರ್ಯ ಯಶಸ್ವಿಯಾಗುವುದಿಲ್ಲ ಎಂದು ಹೇಳಲಾಗುವುದಿಲ್ಲ ಎಂದರು. ಚಲನೆಯಿಲ್ಲದ ಜಾತಿವ್ಯವಸ್ಥೆ ತೊಲಗಲು ಸಮಾನತೆ ಬರಬೇಕು : ಚಲನೆಯಿಲ್ಲದ ಜಾತಿವ್ಯವಸ್ಥೆ ನಮ್ಮ ಸಮಾಜದಲ್ಲಿದೆ. ಜಾತಿವ್ಯವಸ್ಥೆಯನ್ನು ವರ್ಚಸ್ ಆಗಿದ್ದು, ಶ್ರೇಣಿ, ಕನಿಷ್ಠವೆಂಬ ವ್ಯವಸ್ಥೆಯಿತ್ತು. ನಿಜವಾದ ವ್ಯವಸ್ಥೆಗೆ ಜೀವ ಬರಬೇಕಾದರೆ ಆರ್ಥಿಕ, ಸಾಮಾಜಿಕ ಸಮಾನತೆ ಬರಬೇಕು. ಬಸವಾದಿ ಶರಣರು ಗಾಂಧಿ ಅಂಬೇಡ್ಕರ್ ರು ಸಮಾಜದಲ್ಲಿ ಬದಲಾವಣೆ ತರಲು ಶ್ರಮಿಸಿದರು. ಕಾಯಕ ಮತ್ತು ದಾಸೋಹ ತತ್ವವನ್ನು ಬಸವಾದಿ ಶರಣರು ಪ್ರತಿಪಾದಿಸಿದರು. ಉತ್ಪಾದಿಸಿದ ಸಂಪತ್ತನ್ನು ಎಲ್ಲರೂ ಸಮನಾಗಿ ಹಂಚಿಕೊಳ್ಳಬೇಕೆಂದು ಅನುಭವ ಮಂಟಪದಲ್ಲಿ ತಿಳಿಸಿದ್ದರು. ಬಸವಾದಿ ಶರಣರ ಕಾಲದಲ್ಲಿ ಮಹಿಳೆಯರಿಗೂ, ದುರ್ಬಲವರ್ಗದವರಿಗೂ ಶಿಕ್ಷಣ ಸೇರಿದಂತೆ ಎಲ್ಲ ರಂಗದಲ್ಲಿಯೂ ಸಮಾನ ಅವಕಾಶಗಳನ್ನು ನೀಡಲಾಗಿತ್ತು. ತಳಸಮುದಾಯಗಳು ಮುಖ್ಯವಾಹಿನಿಗೆ ಬರಬೇಕು.850 ವರ್ಷಗಳ ಹಿಂದೆ ಸಮಾನತೆಯ ತತ್ವ ಇಂದಿಗೂ ಸಮರ್ಪಕವಾಗಿ ಪಾಲನೆಯಾಗುತ್ತಿಲ್ಲ, ಬಸವಾದಿ ಶರಣರು ಕರ್ಮಸಿದ್ಧಾಂತವನ್ನು ಅಲ್ಲಗಳೆದಿದ್ದರು. ಅದ್ದರಿಂದ ವೈಚಾರಿಕ ಹಾಗೂ ವೈಜ್ಞಾನಿಕ ಶಿಕ್ಷಣವನ್ನು ಎಲ್ಲರೂ ಪಡೆಯಬೇಕು. ಇತಿಹಾಸ ತಿಳಿದವರು ಮಾತ್ರ ಭವಿಷ್ಯ ಬರೆಯಲು ಸಾಧ್ಯ ಎಂದು ಡಾ.ಅಂಬೇಡ್ಕರ್ ತಿಳಿಸಿದ್ದಾರೆ ಎಂದರು.

# ಪರೀಕ್ಷೆ ಬರೆಯಲು ಹೊರಟ ಗೆಳೆಯನಿಗೆ ಫ್ಲೆಕ್ಸ್ ಹಾಕಿ ಶುಭಾಶಯ

**ಚಾಮರಾಜನಗರ:** ಪಿಯುಸಿ ವಾರ್ಷಿಕ ಪರೀಕ್ಷೆಯ ಮೊದಲ ದಿನ ಕನ್ನಡ ಪರೀಕ್ಷೆ ಬರೆಯಲು ಹೊರಟ ಗೆಳಯನಿಗೆ ಕಾಲೆಳೆಯುವ ರೀತಿಯಲ್ಲಿ ಶುಭಾಶಯ ಕೋರುವ ಫ್ಲೆಕ್ಸ್ ನಗರದಲ್ಲಿ ಶುಕ್ರವಾರ ಕಂಡು ಬಂದಿದ್ದು, ಎಲ್ಲರ ಗಮನ ಸೆಳೆಯಿತು. ಚಾಮರಾಜನಗರದ ಬಿ.ರಾಚಯ್ಯ ಜೋಡಿ ರಸ್ತೆಯಲ್ಲಿ ಫ್ಲೆಕ್ಸ್ ಅಳವಡಿಸಲಾಗಿತ್ತು. ಪರೀಕ್ಷೆ ಬರೆಯಲು ಹೊರಟ ಅಭ್ಯರ್ಥಿಯ ಸ್ನೇಹಿತರು ಫ್ಲೆಕ್ಸ್ ಅಳವಡಿಸಿದ್ದಾರೆ ಎನ್ನಲಾಗಿದೆ. 'ಸತತ 4ನೇ ಬಾರಿ ಕನ್ನಡ ಪರೀಕ್ಷೆ ಬರೆಯುತ್ತಿರುವ ಶ್ರೀಯುತ ಜೀವನ ರವರಿಗೆ ಶುಭಾಶಯಗಳು' ಎಂದು ಫ್ಲೆಕ್ಸ್‌ನಲ್ಲಿ ಬರೆಯಲಾಗಿದೆ. ಸ್ನೇಹಿತನ ಫೋಟೊ ಹಾಕಿ, ಇತ್ತೀಚೆಗೆ ಟ್ರೆಂಡ್ ಆಗಿರುವ 'ಬೆಳ್ಳುಳ್ಳಿ ಕಬಾಬ್' ಎಂಬ ಶೀರ್ಷಿಕೆ ನೀಡಲಾಗಿದೆ. 'ನಮ್ ಮನ್ಸು ನಮ್ಗೆ ಒಳ್ಳೆದ್ ಮಾಡಿದ್ರೆ, ದೇವ್ರು ಈ ಎಕ್ಸಾಮ್ ಎಲ್ಲಾ ಏನಿಕ್ಕೆ' ಎಂಬ ಒಕ್ಕಣೆಯೂ ಫ್ಲೆಕ್ಸ್‌ನಲ್ಲಿದೆ. ಸಾಮಾಜಿಕ ಜಾಲತಾಣಗಳಲ್ಲಿ ಈ ಫ್ಲೆಕ್ಸ್ ಫೋಟೊ ಹರಿದಾಡುತ್ತಿದೆ.




# ದಲ್ಲಾಲರು ರೈತರಿಂದ ಕಮೀಷನ್ ಪಡೆದರೆ ಪರವಾನಿಗೆ ರದ್ದು

**ಚಿಂತಾಮಣಿ:** ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯಿಂದ ಪರವಾನಿಗೆ ಪಡೆದು ತರಕಾರಿ, ಟೊಮ್ಯಾಟೋ, ದವಸಧಾನ್ಯ ಉತ್ಪನ್ನಗಳ ವ್ಯಾಪಾರ ವಹಿವಾಟು ವ್ಯವಹರಿಸುತ್ತಿರುವ ಎಲ್ಲಾದಲ್ಲಾಲರಿಗೆ ತಿಳಿಯಪಡಿಸುವುದೇನೆಂದರೆ, ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಅಭಿವೃದ್ಧಿ) 1966 ರ ಕಲಂ 78ರನ್ವಯ ಕಮೀಷನ್ ಏಜೆಂಟರು ಉಪವಿಧಿಗಳಲ್ಲಿ ನಿರ್ಧಿಷ್ಟಪಡಿಸಿದಂತೆ ಅಧಿಸೂಚಿತ ಕೃಷಿ ಉತ್ಪನ್ನ ಮಾರಾಟ ಮಾಡಿರುವ ಬೆಲೆಯ ಶೇ.2 ಹಾಗೂ ಹಣ್ಣು, ಟಮ್ಯೋಟೋ, ತರಕಾರಿಗಳ ಉತ್ಪನ್ನಕ್ಕೆ ಶೇ.5 ರಷ್ಟು ಮೀರದ ಧರದಲ್ಲಿ ಖರೀದಿದಾರರಿಂದ ಮಾತ್ರ ಕಮೀಷನ್ ಪಡೆಯತಕ್ಕದ್ದು. ದಲ್ಲಾಲರು ರೈತರಿಂದ ಕಮೀಷನ್ ಪಡೆದ ಬಗ್ಗೆ, ಬಿಳಿ ಚೀಟಿ ನೀಡಿದ ಬಗ್ಗೆ ಸಮಿತಿಗೆ ದೂರುಗಳು ಸ್ವೀಕೃತವಾದಲ್ಲಿ ಕಾಯಿದೆ ಕಲಂ 78 ಹಾಗೂ 79ರ ಉಲ್ಲಂಘನೆಗಾಗಿ ಸಮಿತಿಯಿಂದ ನೀಡಿರುವ ಪರವಾನಿಗೆಯನ್ನು ರದ್ದುಪಡಿಸಲಾಗುವುದೆಂದು ಚಿಂತಾಮಣಿ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕನ್ನಡ ಗೀತೋತ್ಸವ ಪ್ರತಿಭಾ ಪುರಸ್ಕೃತರು

**ಮೈಸೂರು:** ಮಹಾರತ್ನಟ್ರಸ್ಟ್‌ನ ವತಿಯಿಂದ ನಡೆದ ರಾಜ್ಯ ಮಟ್ಟದ ಕನ್ನಡ ಗೀತೋತ್ಸವ ಕಾರ್ಯಕ್ರಮದಲ್ಲಿ ಕುಮಾರಿ ಎನ್. ಚಿನ್ಮಯಿ, ಶ್ರೀಮತಿ ಸುಪ್ರಿಯಎಂ.ಎಸ್, ಶ್ರೀಯಶಸ್, ಕುಮಾರಿ ನಾಗಮಣಿ.ವೈ ಅವರನ್ನು ಅವರ ಸಂಗೀತ ಪ್ರತಿಭೆಯನ್ನು ಗುರುತಿಸಿ ಟ್ರಸ್ಟ್‌ನ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು.

# ಸ್ಪರ್ಧಾಳುಗಳಲ್ಲಿ ಕ್ರೀಡಾ ಸ್ಫೂರ್ತಿಯಿರಲಿ

**ರಾಮನಗರ:** ಪ್ರತಿವರ್ಷದಂತೆ ಜಿಲ್ಲಾ ಮಟ್ಟದ ಕ್ರೀಡಾಕೂಟ ರಾಮನಗರದಲ್ಲಿ ನಡೆಯುತ್ತಿದ್ದು, ಸರ್ಕಾರ ವರ್ಷಕ್ಕೊಮ್ಮೆ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳನ್ನು ಆಯೋಜಿಸುವ ಮೂಲಕ ಸರ್ಕಾರಿ ನೌಕರರ ಕೆಲಸದ ಒತ್ತಡದ ನಿವಾರಣೆಗೆ ಸಹಕಾರಿಯಾಗಿದೆ ಎಂದು ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷರಾದ ಕೆ. ಸತೀಶ್ ಅವರು ತಿಳಿಸಿದರು.

ಅವರು ಇಂದು ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ರಾಮನಗರ ಜಿಲ್ಲಾ ಶಾಖೆ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಸರ್ಕಾರಿ ನೌಕರರ ಜಿಲ್ಲಾ ಮಟ್ಟದ ಕ್ರೀಡಾಕೂಟವನ್ನು ಉದ್ಘಾಟಿಸಿ ಮಾತನಾಡಿದರು.

ಬೆಂಗಳೂರಿನಲ್ಲಿ ನಡೆದ ಸಮ್ಮೇಳನಕ್ಕೆ ಜಿಲ್ಲೆಯಿಂದ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿ ಮಾಡಿದ್ದೀರಿ, ಲೋಕಸಭಾ ಚುನಾವಣೆಗೂ ಮುನ್ನಾ 7ನೇ ವೇತನ ಆಯೋಗದ ನಮ್ಮ ಬೇಡಿಕೆ ಈಡೇರಲಿದೆ. ಸರ್ಕಾರಿ ನೌಕರರನ್ನು ಬೀದಿಗಿಳಿಸದೆ ಸರ್ಕಾರ ನೌಕರರ ಬೇಡಿಕೆಗಳಾದ 7ನೇ ವೇತನ, ಓಪಿಎಸ್ ಹಾಗೂ ಆರೋಗ್ಯ ಸಂಜೀವಿನಿ ಕಾರ್ಯಕ್ರಮ ಗಳನ್ನು ಅನುಷ್ಠಾನ ಮಾಡಲಿದೆ ಎಂಬ ವಿಶ್ವಾಸವಿದೆ ಎಂದು ಹೇಳಿದರು.

ತಾಲೂಕು ಮಟ್ಟದಲ್ಲಿ ಆಯ್ಕೆಯಾಗಿ ಜಿಲ್ಲಾ ಮಟ್ಟಕ್ಕೆ ಆಗಮಿಸಿರುವ ಕ್ರೀಡಾಪಟುಗಳು ಎಲ್ಲರೂ ಸ್ಫೂರ್ತಿಯಿಂದ ಕ್ರೀಡೆಯಲ್ಲಿ ಭಾಗವಹಿಸಿ ಎಂದು ಕಿವಿ ಮಾತು ಹೇಳಿ ಶುಭ ಕೋರಿದರು.

ರಾಮನಗರ ನಗರಸಭೆ ಅಧ್ಯಕ್ಷೆ ವಿಜಯಕುಮಾರಿ ಅವರು ಕ್ರೀಡಾ ಧ್ವಜಾರೋಹಣ ನೆರವೇರಿಸಿ ಕ್ರೀಡಾಪಟುಗಳಿಗೆ ಶುಭ ಕೋರಿ ರಾಜ್ಯಮಟ್ಟದಲ್ಲಿ ವಿಜೇತರಾಗಿ ರಾಮನಗರ ಜಿಲ್ಲೆಗೆ ಒಳ್ಳೆಯ ಹೆಸರನ್ನು ತನ್ನಿ ಎಂದರು.

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ಅನಿತಾ, ಸರ್ಕಾರಿ ನೌಕರರ ಸಂಘದ ಗೌರವಾಧ್ಯಕ್ಷ ಕಾಂತರಾಜು, ಪ್ರಧಾನ ಕಾರ್ಯದರ್ಶಿ ಶಿವಸ್ವಾಮಿ, ಖಜಾಂಚಿ ರಾಜಶೇಖರ್, ಕಾರ್ಯಾಧ್ಯಕ್ಷರಾದ ರಾಜೇಗೌಡ, ರಮೇಶ್, ಪ್ರಚಾರ ಸಮಿತಿ ಅಧ್ಯಕ್ಷ ಸತೀಶ್ ಪಾದ್ರಳ್ಳಿ, ತಾಲೂಕು ಅಧ್ಯಕ್ಷರುಗಳಾದ ಚಂದ್ರಶೇಖರ್, ಪ್ರಕಾಶ್, ಶಿವಲಿಂಗೇಗೌಡ, ಜಿಲ್ಲಾ ದೈಹಿಕ ಶಿಕ್ಷಕರ ಸಂಘದ ಅಧ್ಯಕ್ಷ ರವೀಂದ್ರ, ಟಿಪಿಓಗಳಾದ ನೀಲಕಂಠಸ್ವಾಮಿ, ಭಾರತಿ, ಸತೀಶ್, ಸಾವಿತ್ರಿಬಾಯಿ ಪುಲೆ ಸಂಘದ ಜಿಲ್ಲಾಧ್ಯಕ್ಷೆ ರತ್ನಮ್ಮ, ಸಂಘದ ರೇಣುಕಯ್ಯ ಸೇರಿದಂತೆ ಜಿಲ್ಲಾ ಸಂಘದ ಪದಾಧಿಕಾರಿಗಳು ವೇದಿಕೆಯಲ್ಲಿ ಇದ್ದರು.

# ಭ್ರೂಣ ಹತ್ಯೆ ತಡೆಗಟ್ಟುವ ನಿಟ್ಟಿನಲ್ಲಿ ಅರಿವು ಮೂಡಿಸುವ ಕಾರ್ಯಕ್ರಮ ಅವಶ್ಯಕ

**ಮೈಸೂರು:** ಭ್ರೂಣ ಹತ್ಯೆ ಮಾಡುವುದು ಕೊಲೆ ಮಾಡಿದ್ದಕ್ಕೆ ಸಮನಾದ ಅಪರಾಧವಾಗಿದ್ದು ಭ್ರೂಣ ಹತ್ಯೆ ತಡೆಗಟ್ಟುವ ನಿಟ್ಟಿನಲ್ಲಿ ಅರಿವು ಮೂಡಿಸುವ ಕಾರ್ಯಕ್ರಮ ಅವಶ್ಯಕ ಎಂದು ಬೆಂಗಳೂರಿನ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಉಪ ನಿರ್ದೇಶಕ ಡಾ. ವಿವೇಕ್ ದೊರೈ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಇಲಾಖೆ ವತಿಯಿಂದ ಗರ್ಭಧಾರಣಾ ಪೂರ್ವ ಮತ್ತು ಪ್ರಸವ ಪೂರ್ವ ಪತ್ತೆ ತಂತ್ರವಿಧಾನಗಳ(ಲಿಂಗ ಆಯ್ಕೆಯ ನಿಷೇಧ) ಕುರಿತು ಮೈಸೂರು ವಿಭಾಗೀಯ ಮಟ್ಟದ ಕಾರ್ಯಾಗಾರದಲ್ಲಿ ಅವರು ಮಾತನಾಡಿದರು.



ದೇಶದಲ್ಲಿ ಮೊದಲ ಬಾರಿಗೆ ಮಹಾರಾಷ್ಟ್ರದಲ್ಲಿ 1988ರಲ್ಲಿ ಪಿಎನ್‌ಡಿಟಿ ಕಾಯ್ದೆ ಜಾರಿಗೆ ಬಂದಿತು. ನಂತರ 1994ರಲ್ಲಿ ಕೇಂದ್ರ ಸರ್ಕಾರ ದೇಶಾದ್ಯಂತ ಈ ಕಾಯ್ದೆಯನ್ನು ಜಾರಿಗೊಳಿಸಲಾಯಿತು. ಆದರೆ ಈ ಕಾಯ್ದೆ ಜಾರಿಯಾದರು ಪರಿಣಾಮಕಾರಿಯಾಗಿ ಅನುಷ್ಠಾನ ಆಗಿರಲಿಲ್ಲ. ಇದರ ಬಗ್ಗೆ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಲ್ಲಿಕೆಯಾದ ಬಳಿಕ 2001ರಲ್ಲಿ ಸುಪ್ರೀಂಕೋರ್ಟ್ ಈ ಕಾಯ್ದೆಯನ್ನು ಕಟ್ಟುನಿಟ್ಟಾಗಿ ಅನುಷ್ಠಾನ ಮಾಡುವಂತೆ ಆದೇಶ ನೀಡಿದ ನಂತರದಲ್ಲಿ ಕಾಯ್ದೆಯ ಅನುಷ್ಠಾನಕ್ಕೆ ಕ್ರಮವಹಿಸಲಾಯಿತು ಎಂದರು.

ಕಾಯ್ದೆ ಜಾರಿಯಾದರೂ ದೇಶದಲ್ಲಿ ಇಂದಿಗೂ ಹೆಣ್ಣುಭ್ರೂಣ ಹತ್ಯೆ ಪ್ರಮಾಣ ಕಡಿಮೆಯಾಗಿಲ್ಲ. ಅಂಕಿ ಅಂಶಗಳ ಪ್ರಕಾರ 2001 ರಿಂದ 4.6 ಲಕ್ಷ ಹೆಣ್ಣು ಭ್ರೂಣಹತ್ಯೆ ಮಾಡಲಾಗಿದೆ. ಇದು ದೇಶದ ಜನಸಂಖ್ಯೆಯ ಶೇ 5 ಕ್ಕಿಂತಲೂ ಹೆಚ್ಚಾಗಿದೆ ಎಂದು ಕಳವಳ ವ್ಯಕ್ತಪಡಿಸಿದ ಅವರು, ಇದೇ ರೀತಿಯಾಗಿ ಹೆಣ್ಣು ಭ್ರೂಣ ಹತ್ಯೆಗಳು ನಡೆಯುತ್ತಾ ಹೋದರೆ ಮುಂದಿನ ದಿನಗಳಲ್ಲಿ ಗಂಡು ಮಕ್ಕಳ ಸಂತತಿಯೇ ಹೆಚ್ಚಾಗಿ, ಹೆಣ್ಣು ಮಕ್ಕಳೇ ಇಲ್ಲದಂತಹ ಪರಿಸ್ಥಿತಿ ನಿರ್ಮಾಣವಾಗಲಿದೆ ಎಂದು ಲಿಂಗಾನುಪಾತ ಹಾಗೂ ಅದರಿಂದ ಉಂಟಾಗುವ ಸಮಸ್ಯೆಗಳ ಕುರಿತು ಪ್ರಾತ್ಯಕ್ಷಿಕೆ ಮೂಲಕ ಮಾಹಿತಿ ನೀಡಿದರು. ಕಾರ್ಯಾಗಾರದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಪಿ.ಸಿ. ಕುಮಾರಸ್ವಾಮಿ, ಮೈಸೂರು, ಹಾಸನ, ಕೊಡಗು, ಮಂಡ್ಯ, ಚಾಮರಾಜನಗರ, ಚಿಕ್ಕಮಗಳೂರು, ಉಡುಪಿ, ಮಂಗಳೂರು ಜಿಲ್ಲೆಯ ಕುಟುಂಬ ಕಲ್ಯಾಣಾಧಿಕಾರಿಗಳು, ತಾಲೂಕು ಆರೋಗ್ಯಾಧಿಕಾರಿಗಳು ಹಾಗೂ ವಿಷಯ ನಿರ್ವಹಕರು ಸೇರಿದಂತೆ ಇನ್ನಿತರ ಅಧಿಕಾರಿಗಳು ಹಾಜರಿದ್ದರು.

# ಪಲ್ಸ್‌ಪೋಲಿಯೋ ಜಾಗೃತಿ ಜಾಥಾ

**ರಾಮನಗರ:** ಭಾರತವು ಪೋಲಿಯೋ ಮುಕ್ತ ದೇಶವಾಗಿದೆ. ಆದರೆ ಕೆಲವು ದೇಶಗಳಲ್ಲಿ ಪೋಲಿಯೋ ಇನ್ನೂ ಭೀತಿಯನ್ನು ಉಂಟು ಮಾಡುತ್ತಿದ್ದು ನಮ್ಮ ದೇಶದಲ್ಲೂ ಮರುಕಳಿಸುವ ಸಾಧ್ಯತೆ ಇರುವುದರಿಂದ ಪ್ರತಿ ಬಾರಿಯೂ 2 ಹನಿ ಪೋಲಿಯೋ ಹನಿ ಹಾಕಿಸಿ ನಿಮ್ಮ ಮಗುವಿನ ಸಂಪೂರ್ಣ ರಕ್ಷಣೆಯನ್ನು ಪೋಷಕರು ಖಚಿತಪಡಿಸಿಕೊಳ್ಳಬೇಕೆಂದು ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ. ರಾಜು ಅವರು ತಿಳಿಸಿದರು.

ಅವರು ಫೆ. 29ರಂದು ಜಿಲ್ಲಾಡಳಿತ ಜಿಲ್ಲಾಪಂಚಾಯತ್, ರಾಮನಗರ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿ, ತಾಲ್ಲೂಕು ಆರೋಗ್ಯಾಧಿಕಾರಿಗಳ ಕಚೇರಿ, ರೋಟರಿ ಸಂಸ್ಥೆ, ರೋಟರಿ ಸಿಲ್ಕ್ ಸಿಟಿ, ಲಯನ್ಸ್ ಸಂಸ್ಥೆ, ರಾಮನಗರ ಸಿಲ್ಕ್ ಸಿಟಿ ಹಾಗೂ ವಿವಿಧ ಅಭಿವೃದ್ಧಿ ಇಲಾಖೆಗಳ ಸಹಯೋಗದೊಂದಿಗೆ ರಾಮನಗರ ಜಿಲ್ಲಾ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿದ್ದ ಜಿಲ್ಲಾ ಮಟ್ಟದ ಪಲ್ಸ್ ಪೋಲಿಯೋ ಜಾಗೃತಿ ಜಾಥಕ್ಕೆ ಚಾಲನೆ ನೀಡಿ ಮಾತನಾಡಿದರು.

ಸಮುದಾಯದಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ವಿವಿಧ ಸಂಘ-ಸಂಸ್ಥೆಗಳ ಸಹಕಾರದೊಂದಿಗೆ ಜಾಗೃತಿ ಜಾಥಾವನ್ನು



ರಾಮನಗರ ಟೌನ್ ಪ್ರಮುಖ ಬೀದಿಗಳಲ್ಲಿ ಹಮ್ಮಿಕೊಂಡಿದ್ದು ಪೋಷಕರು ಮತ್ತು ಸಾರ್ವಜನಿಕರು ಜಾಗೃತರಾಗಿ ಶಾಶ್ವತ ಅಂಗವಿಕಲತೆಯನ್ನು ತರಬಲ್ಲ ಪೋಲಿಯೋವನ್ನು ಲಸಿಕೆಯ ಮೂಲಕ ಪ್ರತಿರೋಧಿಸೋಣ ಜೊತೆಗೆ ಪೋಲಿಯೋ ಮುಕ್ತ ಸಮಾಜ ನಿರ್ಮಿಸಲು ಸಹಕರಿಸುವಂತೆ ತಿಳಿಸಿದರು.

ತಾಲ್ಲೂಕು ಆರೋಗ್ಯಾಧಿಕಾರಿ ಡಾ. ಉಮಾ ಅವರು ಮಾತನಾಡಿ, ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮ ಮಾರ್ಚ್-03 ರಿಂದ 06 ವರೆಗೆ ನಡೆಯುತ್ತಿದ್ದು 0-5 ವರ್ಷದೊಳಗಿನ ಎಲ್ಲಾ ಮಕ್ಕಳಿಗೂ ಪೋಲಿಯೋ ಹನಿ ಹಾಕುವ ಮೂಲಕ ಪೋಲಿಯೋ ನಿರ್ಮೂಲನೆ ಮಾಡುವ ಗುರಿಯನ್ನು ಹೊಂದಿದ್ದು 4 ದಿನಗಳವರೆಗೆ ನಡೆಯುವ ಪಲ್ಸ್ ಪೋಲಿಯೋ ಕಾರ್ಯಕ್ರಮಕ್ಕೆ ಸಂಘ ಸಂಸ್ಥೆಗಳು ಹಾಗೂ ಇತರೆ ಇಲಾಖೆಗಳು ಸಂಪೂರ್ಣ ಸಹಕಾರ ನೀಡುವಂತೆ ತಿಳಿಸಿದರು.

ಡಿ.ಎಂ.ಒ ಡಾ. ಶಶಿಧರ್, ಡಿ.ಟಿ.ಒ ಡಾ. ಕುಮಾರ್, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಎಸ್. ಗಂಗಾಧರ್, ಡಾ. ಹರ್ಷಿತ್, ರೋಟರಿ ಸಂಸ್ಥೆಯ ಅಧ್ಯಕ್ಷ ಕಾಂತರಾಜು, ರೋಟರಿ ಸಿಲ್ಕ್ ಸಿಟಿ ಅಧ್ಯಕ್ಷ ಇಶಾಂತ್, ಲಯನ್ ಸಂಸ್ಥೆ ರಾಮನಗರ ಸಿಲ್ಕ್ ಸಿಟಿ ನಿರ್ದೇಶಕರಾದ ಸುಧಾರಾಣಿ, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಅರ್ಪಿತ, ಆರೋಗ್ಯ ಮೇಲ್ವಿಚಾರಣಾಧಿಕಾರಿ ವಿನಯ್‌ಕುಮಾರ್, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ದಾಸಪ್ಪ, ಹಿರಿಯ ಪ್ರಾಥಮಿಕ ಆರೋಗ್ಯ ಸುರಕ್ಷತಾಧಿಕಾರಿ ಉಮಾದೇವಿ ಇದ್ದರು.

# ಜನ ಮೆಚ್ಚಿದ ನಾಯಕ ನರೇಂದ್ರ ಮೋದಿ

**ಪಿರಿಯಾಪಟ್ಟಣ:** ಪ್ರಧಾನಿ ನರೇಂದ್ರ ಮೋದಿ ಇಡೀ ವಿಶ್ವವೇ ಆಶ್ಚರ್ಯ ಪಡುವಂತ ರೀತಿಯಲ್ಲಿ ದೇಶವನ್ನು ಮಾದರಿಯಾಗಿ ಮುನ್ನಡೆಸಿದ್ದಾರೆ ಎಂದು ಮಾಜಿ ಡಿಸಿಎಂ ಅಶ್ವತ್ ನಾರಾಯಣ್ ತಿಳಿಸಿದರು.

ಮೈಸೂರು ಕೊಡಗು ಲೋಕಸಭಾ ಕ್ಷೇತ್ರದ ಉಸ್ತುವಾರಿಯಾಗಿ ನೇಮಕಗೊಂಡ ಬಳಿಕ ಮೊದಲ ಬಾರಿಗೆ ಪಿರಿಯಾಪಟ್ಟಣಕ್ಕೆ ಭೇಟಿ ನೀಡಿ ಬಿಜೆಪಿ ಕಚೇರಿಗೆ ಮಾತನಾಡಿದರು. ಕಳೆದ 10 ವರ್ಷಗಳ ಆಡಳಿತ ಅವಧಿಯಲ್ಲಿ ನರೇಂದ್ರ, ಮೋದಿ ಕೃಷಿ, ಆರೋಗ್ಯ, ಆಧುನಿಕತೆ, ವಿಜ್ಞಾನ, ತಂತ್ರಜ್ಞಾನ, ಶಿಕ್ಷಣ ಸೇರಿದಂತೆ ಎಲ್ಲಾ ಕ್ಷೇತ್ರಗಳಲ್ಲೂ ಪರಿಣಾಮಕಾರಿಯಾಗಿ ಅಭಿವೃದ್ಧಿ ಕೆಲಸಗಳನ್ನು ಮಾಡಿದ್ದಾರೆ. ಪ್ರತಿಯೊಂದು ಲೋಕಸಭಾ ಕ್ಷೇತ್ರಗಳಲ್ಲಿ ಆಯಾ ಕ್ಷೇತ್ರಕ್ಕೆ ಅನುಗುಣವಾಗಿ ಅಗತ್ಯವಿರುವ ಅಭಿವೃದ್ಧಿ ಕೆಲಸಗಳನ್ನು ಕೈಗೊಳ್ಳುವ ಸಂಸದರಲ್ಲಿ ಹೊಸ ಚೈತನ್ಯ ಮೂಡಿಸಿದ್ದಾರೆ ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಎನ್‌ಡಿಎ ಮೈತ್ರಿಕೂಟ 400 ಕ್ಕೂ ಹೆಚ್ಚು ಕ್ಷೇತ್ರಗಳನ್ನು ಗೆಲ್ಲುವ ವಿಶ್ವಾಸವಿದ್ದು ಬಿಜೆಪಿ ಅಭ್ಯರ್ಥಿಗಳು 380 ಕ್ಷೇತ್ರಗಳಲ್ಲಿ ವಿಜಯ ಸಾಧಿಸಲಿದ್ದಾರೆ ಎಂದು ತಿಳಿಸಿದರು. ಜೆಡಿಎಸ್ ಪಕ್ಷದೊಂದಿಗೆ ನಮ್ಮ ಬಿಜೆಪಿಯ ಮೈತ್ರಿಯಿಂದಾಗಿ ಹಳೆ ಮೈಸೂರು ಭಾಗದಲ್ಲಿ ಬಿಜೆಪಿಗೆ ಹೆಚ್ಚಿನ ಶಕ್ತಿ ಲಭಿಸಲಿದೆ ಎಂದು ಅಭಿಪ್ರಾಯ ಪಟ್ಟರು. ಜೆಡಿಎಸ್ ಮುಖಂಡರಾದ ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡ ಮತ್ತು ಮಾಜಿ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ನರೇಂದ್ರ, ಮೋದಿ ಮತ್ತೊಮ್ಮೆ ಪ್ರಧಾನಿಯಾದರೆ ದೇಶ ಹೆಚ್ಚಿನ ಅಭಿವೃದ್ಧಿಯಾಗಲಿದೆ ಎಂಬ ಹೇಳಿಕೆಗಳನ್ನು ನೀಡಿರುವುದು ಪರಸ್ಪರ ಗೌರವ ವೃದ್ಧಿಸಲು ಸಹಕಾರಿಯಾಗಿದೆ ಎಂದರು. ಮೈಸೂರು ಕೊಡಗು ಲೋಕಸಭಾ ಕ್ಷೇತ್ರದ ಸಂಸದ ಪ್ರತಾಪ್ ಸಿಂಹ ರವರು ಕಳೆದೆರಡು ಅವಧಿಗಳಲ್ಲಿ ಸತತವಾಗಿ ಜಯಗಳಿಸಿ ಕ್ಷೇತ್ರದಾದ್ಯಂತ ಹೆಚ್ಚಿನ ಅಭಿವೃದ್ಧಿ ಕೆಲಸಗಳನ್ನು ಮಾಡಿದ್ದಾರೆ. ಗ್ರಾಮ ಚಲೋ ಕಾರ್ಯಕ್ರಮದ ಮೂಲಕ ಕ್ಷೇತ್ರದಲ್ಲಿ ಸಂಸದರು ಕೈಗೊಂಡಿರುವ ಅಭಿವೃದ್ಧಿ ಕಾರ್ಯಕ್ರಮಗಳನ್ನು ಪ್ರತಿಯೊಂದು ಮನೆಮನೆಗೂ ತಲುಪಿಸಲಾಗುತ್ತಿದೆ ಪಕ್ಷವನ್ನು ಬೂತ್ ಮಟ್ಟದಲ್ಲಿ ಸಂಘಟಿಸುವ ಮೂಲಕ ಇನ್ನು ಹೆಚ್ಚಿನ ರೀತಿಯಲ್ಲಿ ಪ್ರಚಾರ ನಡೆಸಲಾಗುವುದು ಎಂದರು.

ಮೈಸೂರು ಕೊಡಗು ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಬಗ್ಗೆ ಜೆಡಿಎಸ್ ಮತ್ತು ಬಿಜೆಪಿ ಮುಖಂಡರು ಗೊಂದಲಕಾರಿ ಹೇಳಿಕೆ ನೀಡುತ್ತಿದ್ದಾರೆ ಎಂಬ ಪ್ರಶ್ನೆಗೆ ಉತ್ತರಿಸಿದ ಅಶ್ವತ್ ನಾರಾಯಣ್ ದೇಶದ ಯಾವುದೇ ಕ್ಷೇತ್ರದಲ್ಲೂ ಈವರೆಗೆ ಅಭ್ಯರ್ಥಿಯನ್ನು ಪ್ರಕಟಗೊಂಡಿಲ್ಲ, ಈ ಕ್ಷೇತ್ರಕ್ಕೆ ಸೂಕ್ತ ಅಭ್ಯರ್ಥಿಯ ಆಯ್ಕೆ ನಿರ್ಧಾರವನ್ನು ಹೈಕಮಾಂಡ್ ಕೈಗೊಳ್ಳಲಿದೆ, ಕಳೆದ ಹತ್ತು ವರ್ಷಗಳಿಂದ ಕ್ಷೇತ್ರದಲ್ಲಿ ಉತ್ತಮ ಅಭಿವೃದ್ಧಿ ಕಾರ್ಯಗಳನ್ನು ನಡೆಸಿರುವ ಪ್ರತಾಪ್ ಸಿಂಹ ರವರು ಮತ್ತೊಮ್ಮೆ ಅಭ್ಯರ್ಥಿಯಾಗುವುದರಲ್ಲಿ ಯಾವುದೇ ಸಂದೇಹ ಇಲ್ಲ ಎಂದು ಸ್ಪಷ್ಟನೆ ನೀಡಿದರು. ಸಾ.ರಾ.ಮಹೇಶ್ ಬಿಜೆಪಿ ಅಭ್ಯರ್ಥಿಯಾಗಿದ್ದಾರೆ ಎಂಬ ಹೇಳಿಕೆಗಳು ಮಾಧ್ಯಮಗಳು ಸೃಷ್ಟಿಸುತ್ತಿರುವ ಸುಳ್ಳು ಸುದ್ದಿಯಾಗಿದೆ ಎಂದರು. ಇದಕ್ಕೆ ಪ್ರತಿಕ್ರಿಸಿದ ಪ್ರತಾಪ್ ಸಿಂಹ ಸಾ.ರಾ.ಮಹೇಶ್ ರವರು ಅಭ್ಯರ್ಥಿಯಾಗುವುದಿಲ್ಲ ಎಂದು ಮೈಸೂರಿನಲ್ಲಿ ಇಂದು ತಿಳಿಸಿದ್ದಾರೆ ಎಂದು ಹೇಳಿದರು.

ರಾಜ್ಯಸಭಾ ಚುನಾವಣೆಯಲ್ಲಿ ಪಕ್ಷದ ಸೂಚನೆಯನ್ನು ತಿರಸ್ಕರಿಸಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಗೆ ಮತ ಚಲಾಯಿಸಿರುವ ಬಿಜೆಪಿ ಶಾಸಕ ಎಸ್.ಟಿ.ಸೋಮಶೇಖರ್ ವಿರುದ್ಧ ಪಕ್ಷದ ನಾಯಕರು ಶಿಸ್ತುಕ್ರಮ ಕೈಗೊಳ್ಳಲಿದ್ದಾರೆ ಎಂದರು. ಈಗಾಗಲೇ ರಾಜ್ಯ ನಾಯಕರು ಹೈಕಮಾಂಡ್ ಜೊತೆ ಚರ್ಚೆ ನಡೆಸಿದ್ದು ಕಾನೂನು ತಜ್ಞರೊಂದಿಗೆ ಸಲಹೆ ಪಡೆದು ಮುಂದಿನ ಕ್ರಮ ಕೈಗೊಳ್ಳಲಿದ್ದಾರೆ ಎಂದು ತಿಳಿಸಿದರು. ಇದೇ ಸಂದರ್ಭದಲ್ಲಿ ತಾಲೂಕು ಬಿಜೆಪಿ ಘಟಕದ ಅಧ್ಯಕ್ಷರಾಗಿ ನೂತನವಾಗಿ ನೇಮಕಗೊಂಡಿರುವ ಮಾಜಿ ಜಿಲ್ಲಾ ಪಂಚಾಯತ್ ಸದಸ್ಯ ಹಾಗೂ ಬಿಜೆಪಿ ಮುಖಂಡ ವಿ.ರಾಜೇಂದ್ರ, ರನ್ನು ಅಭಿನಂದಿಸಲಾಯಿತು. ಈ ಸಂದರ್ಭದಲ್ಲಿ ತಾಲೂಕು ಬಿಜೆಪಿ ಘಟಕದ ಅಧ್ಯಕ್ಷ ಎಂ.ಎಂ.ರಾಜೇಗೌಡ, ಮುಖಂಡರಾದ ಆರ್.ಟಿ.ಸತೀಶ್, ಪಿ.ಜೆ.ರವಿ, ರಮೇಶ್ ಬೆಟ್ಟದಪುರ, ಲೋಕಪಾಲಯ್ಯ, ಶುಭ ಗೌಡ, ಪಿ.ಕೆ.ರಾಘವೇಂದ್ರ, ಬೆಮ್ಮತ್ತಿ ಚಂದ್ರು, ರವಿ, ರಾಜೇಗೌಡ, ಕಿರಂಗೂರು ಮೋಹನ್, ಮನು ಮತ್ತಿತರರು ಉಪಸ್ಥಿತರಿದ್ದರು.

# ಸಂಜೆ ಟಿಪ್ಸ್



## ಮಹಿಳೆಯರಿಗೆ ಉಚಿತ ಕಣ್ಣಿನ ತಪಾಸಣೆ

ಮಾರ್ಚ್ 8 ರಂದು ವಿಶ್ವಾದ್ಯಂತ ಆಚರಿಸಲಾಗುವ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯ ನೆನಪಿಗಾಗಿ , ಭಾರತದ ಅತಿದೊಡ್ಡ ನೇತ್ರ ಆಸ್ಪತ್ರೆಗಳಲ್ಲಿ ಡಾ ಅಗರ್ವಾಲ್ಸ್ ಕಣ್ಣಿನ ಆಸ್ಪತ್ರೆಯು ಎಲ್ಲಾ ಶಾಖೆಗಳಲ್ಲಿ ಎಲ್ಲಾ ವಯೋಮಾನದ ಮಹಿಳೆಯರಿಗೆ ಉಚಿತ ನೇತ್ರ ತಪಾಸಣೆ ಶಿಬಿರವನ್ನು ನಡೆಸುತ್ತಿದೆ . ಕರ್ನಾಟಕದಲ್ಲಿ ಮಾರ್ಚ್ 15, 2024 ರವರೆಗೆ. ಗರ್ಭಾವಸ್ಥೆಯಿಂದ ಉಂಟಾಗುವ ಅಧಿಕ ರಕ್ತದೊತ್ತಡ, ಋತುಬಂಧ ಮತ್ತು ಪೆರಿಮೆನೋಪಾಸ್ ನಿಂದಾಗಿ ದೃಷ್ಟಿ ಆರೋಗ್ಯ ಸಮಸ್ಯೆಗಳು ಸೇರಿದಂತೆ ಮಹಿಳೆಯರಲ್ಲಿ ಸಾಮಾನ್ಯವಾಗಿ ಕಂಡುಬರುವ ಕಣ್ಣಿನ ಕಾಯಿಲೆಗಳು ಮತ್ತು ಅಸ್ವಸ್ಥತೆಗಳ ತಪಾಸಣೆಗಾಗಿ ಆಸ್ಪತ್ರೆಯು ವಿಶೇಷ ವ್ಯವಸ್ಥೆಗಳನ್ನು ಮಾಡಿದೆ. ಉಚಿತ ನೇತ್ರ ತಪಾಸಣೆಗೆ 95949ರಲ್ಲಿ ನೋಂದಣಿ ಮಾಡಿಕೊಳ್ಳಬಹುದು. ಅಗರ್ವಾಲ್ಸ್ ಕಣ್ಣಿನ ಆಸ್ಪತ್ರೆಯ ಪ್ರಾದೇಶಿಕ ಮುಖ್ಯಸ್ಥೆ - ಕ್ಲಿನಿಕಲ್ ಸರ್ವಿಸಸ್ ಡಾ. ಅರ್ಚನಾ ಎಸ್, ಪುರುಷರು ಮತ್ತು ಮಹಿಳೆಯರು ತಮ್ಮ ಕಣ್ಣುಗಳಲ್ಲಿ ವ್ಯತ್ಯಾಸಗಳನ್ನು ಹೊಂದಿದ್ದಾರೆ, ರಚನೆಯಿಂದ ಜೀನ್ ಅಭಿವ್ಯಕ್ತಿಗಳು ಮತ್ತು ಇತರ ಕಾರ್ಯಗಳವರೆಗೆ. ಜೀವಶಾಸ್ತ್ರ, ಹಾರ್ಮೋನುಗಳು ಮತ್ತು ಜೀವನದ ಹಂತಗಳು ಅಥವಾ ಘಟನೆಗಳಂತಹ ವಿವಿಧ ಅಂಶಗಳು ಮಹಿಳೆಯರು ಕೆಲವು ದೃಷ್ಟಿ ಸಮಸ್ಯೆಗಳಿಗೆ ಏಕೆ ಹೆಚ್ಚು ಒಳಗಾಗಬಹುದು ಎಂಬುದರ ಮೇಲೆ ಪರಿಣಾಮ ಬೀರಬಹುದು. ಉದಾಹರಣೆಗೆ, ಕೆಲವು ಸಂದರ್ಭಗಳಲ್ಲಿ, ಗರ್ಭಾವಸ್ಥೆಯ-ಪ್ರೇರಿತ ಅಧಿಕ ರಕ್ತದೊತ್ತಡ ಹೊಂದಿರುವ ಮಹಿಳೆಯರು ಮಸುಕಾದ ದೃಷ್ಟಿ, ಮರುಕಳಿಸುವ ದೃಷ್ಟಿ ನಷ್ಟ, ಡಬಲ್ ದೃಷ್ಟಿ ಮತ್ತು ದೃಷ್ಟಿಯ ಭಾಗಶಃ ನಷ್ಟ ಅಥವಾ ಸಾಮಾನ್ಯ ದೃಷ್ಟಿ ಕ್ಷೇತ್ರದಲ್ಲಿ ಕುರುಡುತನದ ದೂರು ಅಭಿವೃದ್ಧಿಪಡಿಸಬಹುದು. ಗರ್ಭಾವಸ್ಥೆಯು ಒಣ ಕಣ್ಣುಗಳು ಮತ್ತು ಬೆಳಕಿನ ಸೂಕ್ಷ್ಮತೆಗೆ ಕಾರಣವಾಗಬಹುದು. ಗರ್ಭಾವಸ್ಥೆಯಿಂದ ಉಂಟಾಗುವ ಅಧಿಕ ರಕ್ತದೊತ್ತಡವು ಸುಮಾರು 5-8% ಗರ್ಭಿಣಿ ಮಹಿಳೆಯರ ಮೇಲೆ ಪರಿಣಾಮ ಬೀರುತ್ತದೆ. ಅವರಿಗೆ ಪ್ರಸವಪೂರ್ವ ಸ್ಕ್ರೀನಿಂಗ್ ಅಗತ್ಯವಿರುತ್ತದೆ, ಗರ್ಭಾವಸ್ಥೆಯಲ್ಲಿ ಈ ಸ್ಥಿತಿಯ ಪ್ರಗತಿ ನಿರ್ವಹಣೆಯ ಕುರಿತು ಸಲಹೆ ಪಡೆಯಬೇಕು.

## ಬೀಟ್ರೂಟ್ ಮೊಮೊಸ್

### ಪಾಕ ಶಾಲೆ



### ಬೇಕಾಗಿರುವ ಪದಾರ್ಥ

ಗೋದಿ ಹಿಟ್ಟು- 1 ಬಟ್ಟಲುಟ, ಬೀಟ್ರೂಟ್-1, ವಿನೆಗರ್-1 ಚಮಚ, ಕ್ಯಾಬೇಜ್0-1 ಕಪ್, ಈರುಳ್ಳಿ-1, ಕೊತ್ತಂಬರಿ ಸೊಪ್ಪು-1/4 ಬಟ್ಟಲು, ಹಸಿಮೆಣಸಿನಕಾಯಿ ಪೇಸ್ಟ್-1 ಚಮಚ, ಶುಂಠಿ ಪೇಸ್ಟ್-1 ಚಮಚ, ಉಪ್ಪು-ರುಚಿಗೆ ತಕ್ಕಷ್ಟು, ಎಣ್ಣೆ-5 ಚಮಚ

### ಮಾಡುವ ವಿಧಾನ

ಮೊದಲು ಬೀಟ್ರೂಟ್ ಬೇಯಿಸಿ ಜಾಸ್ತಿ ನೀರು ಹಾಕದೇ ನುಣ್ಣಗೆ ರುಬ್ಬಿ ರಸ ತೆಗೆದಿಟ್ಟುಕೊಳ್ಳಿ. ಬೀಟ್ರೂಟ್ ಪ್ಯೂರಿಗೆ ವಿನೆಗರ್ ಬೆರೆಸಿ. ಗೋದಿ ಹಿಟ್ಟಿಗೆ ಬೀಟ್ರೂಟ್ ರಸ ಉಪ್ಪು, ಬಿಸಿ ನೀರು ಹಾಕಿ ಹಿಟ್ಟು ಕಲೆಸಿಕೊಂಡು ಎಣ್ಣೆ ಸವರಿ ಸಣ್ಣ ಸಣ್ಣ ಉಂಡೆ ಮಾಡಿಟ್ಟುಕೊಳ್ಳಿ. ಸ್ಟಫಿಂಗ್ ಗಾಗಿ ಹೆಚ್ಚಿದ ಕ್ಯಾಬೇಜ್, ಈರುಳ್ಳಿ, ಕೊತ್ತಂಬರಿ ಸೊಪ್ಪು ಮೆಣಸಿನ ಪೇಸ್ಟ್ ಶುಂಠಿ ಪೇಸ್ಟ್ ಉಪ್ಪು ಎಲ್ಲ ಸೇರಿಸಿ ತಯಾರಿಸಿದ ಗೋದಿ ಹಿಟ್ಟಿನ ಉಂಡೆಗಳನ್ನು ಸ್ವಲ್ಪ ಲಟ್ಟಿಸಿಕೊಂಡು ಸ್ಟಫಿಂಗ್ ಸೇರಿಸಿ ಇಷ್ಟವಾದ ಆಕಾರದಲ್ಲಿ ಮೊಮೊಸ್ ತಯಾರಿಸಿಕೊಳ್ಳಿ. ಸ್ಟೀಮರ್ ನಲ್ಲಿ ಹತ್ತು ನಿಮಿಷ ಬೇಯಿಸಿ. ಕೆಂಪನೆಯ ಮೊಮೊಸ್ ಗಳನ್ನು ಚಟ್ನಿ ಮತ್ತು ಸಾಸ್ ಜೊತೆಗೆ ಸರ್ವ್ ಮಾಡಿ.

## ವಿಘ್ನೇಶ್ ಶಿವನ್ ನಯನತಾರಾ ದಾಂಪತ್ಯದಲ್ಲಿ ಬಿರುಕು



ದಕ್ಷಿಣ ಭಾರತದ ಖ್ಯಾತ ನಟಿ ನಯನತಾರಾ ಮತ್ತು ಪತಿ ವಿಘ್ನೇಶ್ ಶಿವನ್ ನಡುವೆ ಎಲ್ಲವೂ ಸರಿಯಿಲ್ಲ, ದಂಪತಿ ಸದ್ಯದಲ್ಲೇ ವಿಚ್ಛೇದನ ಪಡೆಯಲಿದ್ದಾರೆ ಎಂಬ ಗಾಸಿಪ್ ಹುಟ್ಟಿಕೊಂಡಿತ್ತು. ಆದರೆ ನಂತರ ಆಗಿದ್ದೇ ಬೇರೆ.

ನಯನತಾರಾ ತಮ್ಮ ಸೋಷಿಯಲ್ ಮೀಡಿಯಾ ಪುಟದಲ್ಲಿ ವಿಘ್ನೇಶ್ ಶಿವನ್ ಅವರನ್ನು ಅನ್ ಫಾಲೋ ಮಾಡಿದರು.

ಬಳಿಕ ಬೇಸರದ ಸಂದೇಶವೊಂದನ್ನು ಬರೆದುಕೊಂಡರು. ಇದನ್ನು ನೋಡಿ ನಯನತಾರಾ ಮತ್ತು ವಿಘ್ನೇಶ್ ನಡುವೆ ಎಲ್ಲವೂ ಸರಿಯಿಲ್ಲ ಎಂದು ಎಲ್ಲಾ ಕಡೆ ಸುದ್ದಿ ಹಬ್ಬಲಾರಂಭಿಸಿತು.

ಇದರ ಬೆನ್ನಲ್ಲೇ ಎಚ್ಚೆತ್ತುಕೊಂಡ ನಯನತಾರಾ ಮತ್ತೆ ತಮ್ಮ ಇನ್ ಸ್ಟಾಗ್ರಾಂ ಪುಟದಲ್ಲಿ ವಿಘ್ನೇಶ್ ಶಿವನ್ ಅವರನ್ನು ಫಾಲೋ ಮಾಡಿದ್ದಾರೆ. ಅತ್ತ ವಿಘ್ನೇಶ್ ಕೂಡಾ ನಯನತಾರಾ ಫೋಟೋ ಸಮೇತ ಜಾಹೀರಾತೊಂದರ ಫೋಟೋ ಪ್ರಕಟಿಸುವ ಮೂಲಕ ಗಾಸಿಪ್ ಗಳಿಗೆ ತೆರೆ ಎಳೆಯುವ ಪ್ರಯತ್ನ ನಡೆಸಿದರು.

20222 ರಲ್ಲಿ ಈ ಜೋಡಿ ಬಹುಕಾಲ ಪ್ರೀತಿಸಿ ದಾಂಪತ್ಯ ಜೀವನಕ್ಕೆ ಕಾಲಿಟ್ಟಿದ್ದರು. ಕೆಲವೇ ತಿಂಗಳಲ್ಲಿ ಬಾಡಿಗೆ ತಾಯ್ತನದ ಮೂಲಕ ಇಬ್ಬರು ಅವಳಿ ಮಕ್ಕಳನ್ನು ಪಡೆದಿದ್ದಾರೆ. ಮದುವೆ ಬಳಿಕ ನಯನತಾರಾ ಬಾಲಿವುಡ್ ನಲ್ಲಿ ಶಾರುಖ್ ಖಾನ್ ಜೊತೆ ಸಿನಿಮಾ ಮಾಡಿದ್ದರು. ಇದರ ನಡುವೆಯೇ ಅವರ ಸಂಬಂಧದ ಬಗ್ಗೆ ಇಂತಹದ್ದೊಂದು ಗಾಸಿಪ್ ಕೇಳಿಬಂದಿದ್ದು ನಿಜಕ್ಕೂ ವಿಪರ್ಯಾಸ.

ನಯನತಾರಾ ನಟನೆ ಹಾಗೂ ಮಕ್ಕಳ ಜವಾಬ್ದಾರಿ ಎರಡನ್ನು ನಿಭಾಯಿಸುವುದು ಕಷ್ಟವಾದ ಹಿನ್ನೆಲೆ ಮಕ್ಕಳ ಜೊತೆ ಸಮಯ ಕಳೆಯಲು ಕೆಲ ಕಾಲ ನಟಿ ಬ್ರೇಕ್ ತೆಗೆದುಕೊಳ್ಳುತ್ತಾರೆ ಎನ್ನುವ ಮಾತು ಕಾಲಿವುಡ್ ಅಂಗಳದಲ್ಲಿ ಕೇಳಿ ಹರಿದಾಡಿತ್ತು. ಆದರೆ ನಟಿ ಜವಾನ್ ಸಿನಿಮಾ ಮೂಲಕ ಮತ್ತೆ ಕಮ್ ಬ್ಯಾಕ್ ಆದರು.

ಇತ್ತೀಚೆಗೆ ಥಿಯೇಟರ್ಗಳಲ್ಲಿ ತೆರೆಕಂಡ ಲೇಡಿ ಸೂಪರ್ ಸ್ಟಾರ್ ನಯನತಾರಾ ಅಭಿನಯದ ?ಅನ್ನಪೂರ್ಣಿ? ಚಿತ್ರ ಒಟಿಟಿಯಲ್ಲಿ ಸ್ಟ್ರೀಮಿಂಗ್ ಆಗಿತ್ತು. ಸಿನಿಮಾ ಹಿಂದೂಗಳ ಧಾರ್ಮಿಕ ಭಾವನೆಗೆ ಧಕ್ಕೆ ತರುತ್ತಿದೆ ಎಂದು ಶಿವಸೇನೆಯ ಮಾಜಿ ನಾಯಕ ರಮೇಶ್ ಸೋಲಂಕಿ ಕೇಸ್ ಕೂಡ ದಾಖಲಿಸಿದ್ದರು. ಇದಾದ ಬಳಿಕ ನೆಟ್ಫ್ಲಿಕ್ಸ್ ಎಚ್ಚೆತ್ತುಕೊಂಡಿದ್ದು, ಸಿನಿಮಾವನ್ನು ಡಿಲೀಟ್ ಮಾಡಿತ್ತು. ಇನ್ಸ್ಟಾ ಮೂಲಕ ನಟಿ ಕ್ಷಮೆ ಕೂಡ ಕೇಳಿದ್ದರು.

ವಿಘ್ನೇಶ್ ಶಿವನ್ ಪ್ರಸ್ತುತ ಲವ್ ಇನ್ಶುರೆನ್ಸ್ ಕಾರ್ಪೊರೇಶನ್ ಸಿನಿಮಾ ಚಿತ್ರೀಕರಣದಲ್ಲಿ ಬ್ಯುಸಿಯಾಗಿದ್ದಾರೆ. ಪ್ರದೀಪ್ ರಂಗನಾಥನ್, ಎಸ್.ಜೆ.ಸೂರ್ಯ ಮತ್ತು ಕೃತಿ ಶೆಟ್ಟಿ ಮನರಂಜನಾ ಪಾತ್ರದಲ್ಲಿ ಪ್ರಮುಖ ಪಾತ್ರಗಳನ್ನು ನಿರ್ವಹಿಸಿದ್ದಾರೆ.

## ಹಾಗಲಕಾಯಿ ಜ್ಯೂಸ್ ತುಂಬಾ ಪ್ರಯೋಜನಕಾರಿ



### ಹೆಲ್ತ್ ಟಿಪ್ಸ್

ಪ್ರತಿದಿನ ಹಾಗಲಕಾಯಿ ಜ್ಯೂಸ್ ಕುಡಿಯುವುದರಿಂದ ಆರೋಗ್ಯಕ್ಕೆ ತುಂಬಾ ಪ್ರಯೋಜನಕಾರಿ. ಇದು ದೇಹದ ಅನೇಕ ಕಾಯಿಲೆಗಳಿಗೆ ಪರಿಹಾರ ನೀಡುತ್ತದೆ. ಮಧುಮೇಹಿಗಳಲ್ಲಿ ಸಕ್ಕರೆ ಮಟ್ಟವನ್ನು ನಿಯಂತ್ರಿಲು ಹಾಗಲಕಾಯಿ ತುಂಬಾ ಸಹಕಾರಿ. ಮಧುಮೇಹಿಗಳು ಪ್ರತಿದಿನ ಹಾಗಲಕಾಯಿ ಸೇವಿಸಬಹುದು.

ಹಾಗಲಕಾಯಿಯಲ್ಲಿ ಹೆಚ್ಚು ನಾರಿನಂಶ ಇರುವ ಕಾರಣ, ಇದು ಜೀರ್ಣಕ್ರಿಯೆಯನ್ನು ಸುಧಾರಿಸುತ್ತದೆ.

ಹಾಗಲಕಾಯಿಯಲ್ಲಿ ವಿಟಮಿನ್ ಸಿ ಸಮೃದ್ಧವಾಗಿದೆ. ಇದು ರೋಗನಿರೋಧಕ ಶಕ್ತಿಯನ್ನು ಹೆಚ್ಚಿಸಲು ಸಹಾಯ ಮಾಡುತ್ತದೆ. ಕ್ಯಾನ್ಸರ್ ತಡೆಗಟ್ಟುವಲ್ಲಿ ಸಹಾಯ ಮಾಡುತ್ತದೆ. ಹಾಗಲಕಾಯಿ ಉತ್ಕರ್ಷಣ ನಿರೋಧಕಗಳಲ್ಲಿ ಸಮೃದ್ಧವಾಗಿದೆ. ಹಾಗಲಕಾಯಿಯಲ್ಲಿ ವಿಟಮಿನ್ ಎ ಇದ್ದು, ಕಣ್ಣುಗಳ ಆರೋಗ್ಯಕ್ಕೆ ಸಹಕಾರಿಯಾಗಿದೆ.

ಹಾಗಲಕಾಯಿಯಲ್ಲಿರುವ ವಿಟಮಿನ್ ಸಿ ಚರ್ಮವನ್ನು ಆರೋಗ್ಯಕರವಾಗಿಡಲು ಸಹಾಯ ಮಾಡುತ್ತದೆ. ಇದನ್ನು ವಯಸ್ಕರು ಮತ್ತು ಮಕ್ಕಳು ಸೇವಿಸುವುದರಿಂದ ಆರೋಗ್ಯಕ್ಕೆ ತುಂಬಾ ಪ್ರಯೋಜನಕಾರಿ.

ಹಾಗಲಕಾಯಿ ದೇಹದಲ್ಲಿನ ಕೆಟ್ಟ ಕೊಲೆಸ್ಟ್ರಾಲ್ ಅನ್ನು ಕಡಿಮೆ ಮಾಡುತ್ತದೆ. ಅಧಿಕ ಕೊಲೆಸ್ಟ್ರಾಲ್ನಿಂದ ಬಳಲುತ್ತಿದ್ದರೆ ಹಾಗಲಕಾಯಿ ಜ್ಯೂಸ್ ಕುಡಿಯಬಹುದು. ಇದರಿಂದ ಕೊಲೆಸ್ಟ್ರಾಲ್ ನಿಯಂತ್ರಣಕ್ಕೆ ಬರುತ್ತದೆ. ಅ ಹಾಗಲಕಾಯಿ ರುಚಿಯಲ್ಲಿ ತುಂಬಾ ಕಹಿ ಆಗಿರುತ್ತದೆ. ಹಾಗಲಕಾಯಿ ಜ್ಯೂಸ್ ಕಹಿ ಕಡಿಮೆಯಾಗಲು ಜೇನುತುಪ್ಪದೊಂದಿಗೆ ಬೆರೆಸಿ ಕುಡಿಯಬಹುದು. ಹಾಗಲಕಾಯಿ ಜ್ಯೂಸ್ ಅನ್ನು ಬೆಳಗ್ಗೆ ಖಾಲಿ ಹೊಟ್ಟೆಯಲ್ಲಿ ಕುಡಿದರೆ ಹೆಚ್ಚು ಪರಿಣಾಮಕಾರಿಯಾಗಿದೆ.

## ಸುಂದರ ಉಗುರಿಗೆ ಟಿಪ್ಸ್

### ಬ್ಯೂಟಿ ಟಿಪ್ಸ್



ಸುಂದರವಾದ, ಉದ್ದ ಕೂದಲು ಮಾತ್ರವಲ್ಲ ಆಕರ್ಷಕ ಉಗುರು ಇರಬೇಕೆಂದು ಹುಡುಗಿಯರು ಬಯಸ್ತಾರೆ. ಉದ್ದ ಉಗುರಿಗೆ ಸುಂದರ ನೇಲ್ ಪಾಲಿಶ್ ಹಚ್ಚಿಕೊಳ್ಳುವುದನ್ನು ಹುಡುಗಿಯರು ಇಷ್ಟಪಡ್ತಾರೆ. ಆದ್ರೆ, ಕೆಲವರ ಉಗುರು ಉದ್ದವಾಗಿ ಬೆಳೆಯುವುದಿಲ್ಲ. ಉಗುರಿನ ಸೌಂದರ್ಯಕ್ಕೆ ಕೆಲ ಆರೈಕೆಯ ಅಗತ್ಯವಿದೆ.

**ಉಗುರು ಕತ್ತರಿಸುವುದು:** ಆಗಾಗ ಉಗುರನ್ನು ಕತ್ತರಿಸುತ್ತಿರಬೇಕು. ಅಡ್ಡಾದಿಡ್ಡಿ ಬೆಳೆದ ಉಗುರುಗಳು, ಕೈ ಸೌಂದರ್ಯವನ್ನು ಹಾಳು ಮಾಡುತ್ತವೆ. 15 ದಿನಕ್ಕೆ ಒಮ್ಮೆಯಾದ್ರೂ ಉಗುರನ್ನು ಕತ್ತರಿಸಿ ಅದಕ್ಕೊಂದು ಆಕಾರ ನೀಡಬೇಕು.

**ಮೆನಿಕ್ಯೂರ್:** ಕೈ ಹಾಗೂ ಉಗುರಿನ ಸೌಂದರ್ಯ ಬಯಸುವವರು ಮೆನಿಕ್ಯೂರ್ ಮಾಡುವ ಅಗತ್ಯವಿದೆ. ಇದ್ರಿಂದ ಉಗುರಿನ ಸುತ್ತಲಿರುವ ಡೆಡ್ ಸ್ಕಿನ್ ಹೋಗುತ್ತದೆ.

**ಕೈ ಸ್ವಚ್ಛತೆ :** ಉಗುರಿನ ಸೌಂದರ್ಯ ಬಯಸುವವರು ಆಗಾಗ ಕೈಗಳನ್ನು ಸ್ವಚ್ಛಗೊಳಿಸಬೇಕು. ಇದಕ್ಕೆ ಉಗುರ ಬೆಚ್ಚಗಿನ ನೀರು ಬಳಸಬೇಕು.

**ಪ್ರತಿನಿತ್ಯದ ಆಹಾರ:** ಆಹಾರದಲ್ಲಿ ಪೋಷಕಾಂಶಗಳ ಕೊರತೆಯಿಂದಾಗಿ ಉಗುರುಗಳು ಹೆಚ್ಚಾಗಿ ಮುರಿಯುತ್ತವೆ. ದೈನಂದಿನ ಆಹಾರದಲ್ಲಿ ಹಸಿರು ತರಕಾರಿಗಳು, ತಾಜಾ ಹಣ್ಣುಗಳು, ಬೇಯಿಸಿದ ಮೊಟ್ಟೆಗಳು, ಓಟ್ ಮೀಲ್, ಒಣ ಹಣ್ಣುಗಳು ಇತ್ಯಾದಿಗಳನ್ನು ಸೇರಿಸಿ.

ಉಗುರನ್ನು ಉದ್ದವಾಗಿ ಬೆಳೆಸಲು ಬಯಸುವವರು ಉಗುರಿಗೆ ತೈಲದ ಮಸಾಜ್ ಮಾಡಬೇಕು. ತೆಂಗಿನ ಎಣ್ಣೆ, ಆಲಿವ್, ಬಾದಾಮಿ ಇತ್ಯಾದಿಗಳನ್ನು ಸ್ವಲ್ಪ ಬಿಸಿ ಮಾಡಿ ನಂತ್ರ ಉಗುರಗಳಿಗೆ ಹಚ್ಚಿ, 5-10 ನಿಮಿಷ ಮಸಾಜ್ ಮಾಡಬೇಕು. ಇದು ಉಗುರುಗಳನ್ನು ಬಲಪಡಿಸುತ್ತದೆ. ಉಗುರು ಬೆಳವಣಿಗೆಗೆ ಬೆಳ್ಳುಳ್ಳಿಯನ್ನೂ ಬಳಸಬಹುದು. 1-2 ಬೆಳ್ಳುಳ್ಳಿ ತೆಗೆದುಕೊಂಡು ಅದ್ರ ಸಿಪ್ಪೆ ತೆಗೆದು, ಬೆಳ್ಳುಳ್ಳಿಯನ್ನು ಉಗುರಿನ ಮೇಲೆ ಉಜ್ಜಬೇಕು. ಕೆಲ ಸಮಯ ಬಿಟ್ಟು ಕೈಗಳನ್ನು ಸೋಪಿನಿಂದ ಸ್ವಚ್ಛಗೊಳಿಸಬೇಕು.

## ಬೆಂಗಳೂರಿನ ರಂಗ ಶಂಕರದ ಸಮ್ಮರ್ ಎಕ್ಸ್ಪ್ರೆಸ್ ಕಾರ್ಯಾಗಾರ



ಬಹು ನಿರೀಕ್ಷಿತ ಸಮ್ಮರ್ ಎಕ್ಸ್ಪ್ರೆಸ್ ರಂಗಭೂಮಿ ಕಾರ್ಯಾಗಾರವು ಏಪ್ರಿಲ್ ಮತ್ತು ಮೇ ತಿಂಗಳಾದ್ಯಂತ ಬೆಂಗಳೂರಿನ 100 ಕ್ಕೂ ಹೆಚ್ಚು ಮಕ್ಕಳ ಹೃದಯವನ್ನು ಸೂರೆಗೊಳ್ಳಲು ಸಜ್ಜಾಗಿದೆ. 2007 ರಲ್ಲಿ ಪ್ರಾರಂಭವಾದ ಈ ಪರಿವರ್ತಕ ಕಾರ್ಯಕ್ರಮವು ಸಾಂಪ್ರದಾಯಿಕ ರಂಗಭೂಮಿಗಿಂತ ಹೆಚ್ಚಿನದನ್ನು ನೀಡುತ್ತದೆ. ನಟನೆ, ಬರವಣಿಗೆ, ದೃಶ್ಯ ಕಲೆಗಳು ಮತ್ತು ಹೆಚ್ಚಿನವುಗಳಲ್ಲಿ ಕಾರ್ಯಾಗಾರಗಳನ್ನು ಒದಗಿಸುತ್ತದೆ. ಉತ್ತಮ ಉಪನ್ಯಾಸಕರ ಮಾರ್ಗದರ್ಶನದಲ್ಲಿ, ಕಾರ್ಯಾಗಾರಗಳು ಆತ್ಮ ವಿಶ್ವಾಸವನ್ನು ಹುಟ್ಟುಹಾಕಲು ಮತ್ತು ಸೃಜನಶೀಲತೆಯನ್ನು ಬೆಳೆಸುವ ಗುರಿಯನ್ನು ಹೊಂದಿವೆ. ಸಮ್ಮರ್ ಎಕ್ಸ್ಪ್ರೆಸ್ ನಲ್ಲಿ ಪಾಲ್ಗೊಳ್ಳುವ ಮಕ್ಕಳು ತಮ್ಮ ಸಾಮರ್ಥ್ಯವನ್ನು ಅನ್ವೇಷಿಸಲು ಮತ್ತು ಅವರ ಬೇಸಿಗೆ ರಜೆಯ ಸಮಯದಲ್ಲಿ ಒಳ್ಳೆಯ ನೆನಪುಗಳನ್ನು ಸೃಷ್ಟಿಸಲು ಒಂದು ವೇದಿಕೆಯಾಗಿ ಮುಂದುವರೆಯುತ್ತಾ ಬಂದಿದೆ.ಎರಡು ವಾರಗಳ ಕಾಲ ನಡೆಯುವ ಸಮ್ಮರ್ ಎಕ್ಸ್ಪ್ರೆಸ್ ಕಾರ್ಯಾಗಾರ, ರಂಗಭೂಮಿಯೊಂದಿಗೆ ಮಕ್ಕಳಿಗೆ ದೃಢವಾದ ಸಂಪರ್ಕವನ್ನು ರೂಪಿಸುತ್ತದೆ. 14 ದಿನಗಳ ಕಾಲ ಮಕ್ಕಳೊಂದಿಗೆ ಸೃಜನಶೀಲ ಪ್ರಕ್ರಿಯೆಯಲ್ಲಿ ತಮ್ಮನ್ನು ತಾವು ತೊಡಗಿಸಿಕೊಳ್ಳಲು ಅನುಭವವನ್ನು ಹೊಂದಿರುವ ಉಪನ್ಯಾಸಕರನ್ನು ನಾವು ಆಹ್ವಾನಿಸುತ್ತೇವೆ, ಪ್ರತಿ ದಿನ 6ಗಂಟೆಗಳ ಕಾಲ ತರಬೇತಿಗಾಗಿ ಮೀಸಲಿಡುತ್ತೇವೆ.

ಈ 14-ದಿನದ ಕಾರ್ಯಾಗಾರದಲ್ಲಿ ತರಬೇತಿ ಪಡೆದ ಮಕ್ಕಳಿಂದ ಅಂತಿಮ ದಿನದಂದು ತಮ್ಮ ಅನುಭವ ಮತ್ತು ಕಲಿತ ಕೌಶಲ್ಯಗಳನ್ನು15 ನಿಮಿಷಗಳ ಪ್ರದರ್ಶನದ ಮೂಲಕ ತಮ್ಮ ಪೋಷಕರೊಂದಿಗೆ ಹಂಚಿಕೊಳ್ಳುತ್ತಾರೆ. ಪ್ರತಿ ಕಾರ್ಯಾಗಾರವನ್ನು 20 ಮಕ್ಕಳಿಗಾಗಿ ವಿನ್ಯಾಸಗೊಳಿಸಲಾಗಿದೆ.

ಏಪ್ರಿಲ್ 8 ರಿಂದ ಏಪ್ರಿಲ್ 21 ರವರೆಗೆ ಅನೀಶ್ ವಿಕ್ಟರ್ ಪ್ಲೇಯಿಂಗ್ ವಿಥ್ ಷಾಡೋಸ್ 10 -12 ವರ್ಷದವರಿಗೆ, ಪ್ರಸಾದ್ ಚೇರ್ಕಾಡಿ ಡಿಸ್ಕವರಿಂಗ್ ಯಕ್ಷಗಾನ 10 -12 ವರ್ಷದವರಿಗೆ ಕಾವ್ಯ ಶ್ರೀನಿವಾಸನ್ ಓದುವುದು, ಬರೆಯುವುದು, ಉಸಿರಾಡುವುದು

8-10 ವರ್ಷದವರಿಗೆ ಏಪ್ರಿಲ್ 8 ರಿಂದ ಏಪ್ರಿಲ್ 10 ರವರೆಗೆ ಅಂಜು ಟೈನಿ ಟೇಸ್ಟ್ ಮೇಕರ್ಸ್ 5 -7 ವರ್ಷದವರಿಗೆ ಏಪ್ರಿಲ್ 15 ರಿಂದ ಏಪ್ರಿಲ್ 17 ರವರೆಗೆ ಅಂಜು ಯಂಗ್ ಶೆಫ್ಸ್ ಚಾಯ್ಸ್ 8 -11 ವರ್ಷದವರಿಗೆ

ಏಪ್ರಿಲ್ 22 ರಿಂದ ಮೇ 5 ರವರೆಗೆ ಪ್ರೀತೇಶ್ ಭಂಡಾರಿ, ಸಾಚಿ ಪಿಂಪ್ರಿಕರ್ ಲಾಫ್ಟರ್ ಲ್ಯಾಬೋರೇಟರಿ 10 -12 ವರ್ಷದವರಿಗೆ ಲೇಖ ನಾಯ್ಡು ಪ್ಲೇಯಿಂಗ್, ಥಿಂಕಿಂಗ್, ಆಸ್ಕಿಂಗ್ ಅಂಡ್ ಬೀಯಿಂಗ್? ಥ್ರೂ ಥಿಯೇಟರ್

8-10 ವರ್ಷದವರಿಗೆಸಮಯ: ಸೋಮ - ಶುಕ್ರ: ಬೆಳಿಗ್ಗೆ 10:00 - ಸಂಜೆ 4:00 ಶನಿ: ಬೆಳಿಗ್ಗೆ 10:00 - ಸಂಜೆ 1:00 ಮೊದಲ ಭಾನುವಾರ: ರಜೆ

ಗುಂಪುಗಳು:ಮೊದಲನೇ ಗುಂಪು: 8ನೇ ಏಪ್ರಿಲ್ - 21ನೇ ಏಪ್ರಿಲ್ (ಪ್ರದರ್ಶನ: 21ನೇ ಏಪ್ರಿಲ್) ಎರಡನೇ ಗುಂಪು: 22ನೇ ಏಪ್ರಿಲ್ - 5ನೇ ಮೇ (ಪ್ರದರ್ಶನ: 5 ನೇ ಮೇ) ಸಮ್ಮರ್ ಎಕ್ಸ್ಪ್ರೆಸ್ ಕಾರ್ಯಾಗಾರಗಳ ನೋಂದಣಿಗಾಗಿ, ದಯವಿಟ್ಟು ರಂಗ ಶಂಕರದಲ್ಲಿ ಇದೇ ಮಾರ್ಚ್ 10, ಭಾನುವಾರ ದಿಂದ ಬೆಳಿಗ್ಗೆ 10 ಗಂಟೆಯಿಂದ ಸಂಜೆ 5 ಘಂಟೆಯವರೆಗೆ ಭೇಟಿ ನೀಡಿ ಅಥವಾ ಬುಕ್ ಮೈ ಶೋ ನಲ್ಲಿ ಬುಕ್ ಮಾಡಿ.

ಬುಕ್ ಮೈ ಶೋ ನಿಯಮಗಳು ಮತ್ತು ನಿಬಂಧನೆಗಳು: ವಯಸ್ಸಿನ ಪುರಾವೆಯನ್ನು ಒದಗಿಸಬೇಕು; ಮಗುವು ನಿಗದಿತ ವಯಸ್ಸಿನೊಳಗೆ ಬರದಿದ್ದರೆ, ಅರ್ಜಿಯನ್ನು ತಿರಸ್ಕರಿಸಲಾಗುತ್ತದೆ ಮತ್ತು ಹಣವನ್ನು ಹಿಂತಿರುಗಿಸಲಾಗುತ್ತದೆ. ಹೆಚ್ಚಿನ ಮಾಹಿತಿಗಾಗಿ: programming@rangashankara.in

## ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

**ಮೇಷ:** ಅನಿರೀಕ್ಷಿತ ದೂರ ಪ್ರಯಾಣ, ಸಮಾಜದಲ್ಲಿ ಗೌರವ, ದಾನ ಧರ್ಮದಲ್ಲಿ ಆಸಕ್ತಿ, ವಾಹನ ಖರೀದಿ.

**ವೃಷಭ:** ಮನಸ್ತಾಪ, ವ್ಯರ್ಥ ಧನಹಾನಿ,ಶತ್ರು ಭಾದೆ, ಮಿತ್ರರಿಂದ ಸಹಾಯ, ಅಕಾಲ ಭೋಜನ, ಪರಸ್ಥಳವಾಸ.

**ಮಿಥುನ:** ದ್ರವ್ಯ ಲಾಭ, ಮಾತಾಪಿತರ ಸೇವೆ, ಸ್ವಲ್ಪ ವ್ಯಾಪಾರದಲ್ಲಿ ಮಂದಗತಿ, ದಾಂಪತ್ಯದಲ್ಲಿ ಪ್ರೀತಿ.

**ಕಟಕ:** ಮನಸ್ಸಿನಲ್ಲಿ ಭಯ ಭೀತಿ, ಯಾರನ್ನು ಹೆಚ್ಚಾಗಿ ನಂಬಬೇಡಿ, ಚಂಚಲ ಮನಸ್ಸು, ಹಿತ ಶತ್ರುಗಳಿಂದ ತೊಂದರೆ.

**ಸಿಂಹ:** ಬಂಧುಗಳಲ್ಲಿ ನಿಷ್ಠುರ, ಆರೋಗ್ಯದಲ್ಲಿ ಏರುಪೇರು, ಉದ್ಯೋಗದಲ್ಲಿ ಬಡ್ತಿ, ಧನ ಲಾಭ.

**ಕನ್ಯಾ:** ವಿದ್ಯಾಭ್ಯಾಸದಲ್ಲಿ ಅಡಚಣೆ, ಪರರ ಧನ ಪ್ರಾಪ್ತಿ, ಗುರು ಹಿರಿಯರಲ್ಲಿ ಭಕ್ತಿ, ವಿವಾಹ ಯೋಗ.

**ತುಲಾ:** ಯತ್ನ ಕಾರ್ಯಗಳಲ್ಲಿ ಅಡೆ ತಡೆ, ಮಿತ್ರರಿಂದ ಮೋಸ, ಅಧಿಕ ಧನವ್ಯಯ, ಮಹಿಳೆಯರಿಗೆ ತೊಂದರೆ.

**ವೃಶ್ಚಿಕ:** ಕುಟುಂಬ ಸೌಖ್ಯ, ಬಂಧು ಮಿತ್ರರ ಸಮಾಗಮ, ಮನಸ್ತಾಪ, ಆಂತರಿಕ ಕಲಹ, ಪರರಿಂದ ಮೋಸ.

**ಧನಸ್ಸು:** ವ್ಯಾಪಾರದಲ್ಲಿ ಅಭಿವೃದ್ಧಿ, ಸಾರ್ವಜನಿಕ ಕ್ಷೇತ್ರದಲ್ಲಿ ಮನ್ನಣೆ, ಸ್ಥಿರಾಸ್ತಿ ಮಾರಾಟ, ಸ್ತ್ರೀ ಸೌಖ್ಯ, ನಾನಾ ರೀತಿಯ ಚಿಂತೆ.

**ಮಕರ:** ದೇವತಾ ಕಾರ್ಯಗಳಲ್ಲಿ ಭಾಗಿ, ವಿರೋಧಿಗಳಿಂದ ತೊಂದರೆ, ರೋಗಭಾದೆ, ಮನೋವ್ಯಥೆ, ಶ್ರಮಕ್ಕೆ ತಕ್ಕ ಫಲ,

**ಕುಂಭ:** ದಾಂಪತ್ಯದಲ್ಲಿ ಪ್ರೀತಿ, ಸಾಲದಿಂದ ಮುಕ್ತಿ, ಚಂಚಲ ಮನಸ್ಸು, ಕೃಷಿಯಲ್ಲಿ ಅಲ್ಪ ಲಾಭ

**ಮೀನ:** ಮಾಡುವ ಕೆಲಸಗಳಲ್ಲಿ ವಿಘ್ನ, ಹಣಕಾಸಿನ ತೊಂದರೆ, ಷೇರು ವ್ಯವಹಾರಗಳಲ್ಲಿ ಎಚ್ಚರ, ವಾಹನದಿಂದ ತೊಂದರೆ.

## ಇಂದು ವಿಶ್ವ ದೋಸೆ ದಿನ



ಮಾರ್ಚ್ 3 ವಿಶ್ವ ದೋಸೆ ದಿನ. ವಿಶ್ವಾದ್ಯಂತ ಪ್ರತಿ ದಿನ ಲಕ್ಷಾಂತರ ದೋಸೆ ಮಾರಾಟವಾಗುತ್ತದೆ. ಬೆಳಗಿನ ಉಪಹಾರಕ್ಕೆ, ಸಂಜೆ ಸ್ನಾಕ್ಸ್ಗೆ ಹೆಚ್ಚಿನ ಜನರು ದೋಸೆಯನ್ನೇ ಆರ್ಡರ್ ಮಾಡುತ್ತಾರೆ. ಖ್ಯಾತ ಫುಡ್ ಡೆಲಿವರಿ ಸಂಸ್ಥೆ ಬಹಿರಂಗಪಡಿಸಿದ ಮಾಹಿತಿಯೊಂದರ ಪ್ರಕಾರ ಸ್ವಿಗ್ಗಿ, ಕಳೆದ ವರ್ಷ ಬರೋಬ್ಬರಿ 25 ಮಿಲಿಯನ್ ದೋಸೆಯನ್ನು ಡೆಲಿವರಿ ಕೊಟ್ಟಿದೆಯಂತೆ.

ಸ್ವಿಗ್ಗಿ, ಪ್ರತಿ ವರ್ಷ ಮಾರ್ಚ್ 3 ರಂದು ದೋಸೆ ದಿನದಂದು ಸಮೀಕ್ಷೆ ನಡೆಸುತ್ತದೆ. ಇದರ ಪ್ರಕಾರ, ಕಳೆದ ವರ್ಷ ಫೆಬ್ರವರಿ 25 ರಿಂದ ಈ ವರ್ಷದ ಫೆಬ್ರವರಿ 25 ರವರೆಗೆ ಒಟ್ಟು 29 ಮಿಲಿಯನ್ ದೋಸೆಗಳನ್ನು ವಿತರಿಸಲಾಗಿದೆಯಂತೆ. ದೇಶಾದ್ಯಂತ ಬೆಳಗಿನ ಉಪಾಹಾರಕ್ಕೆ ಪ್ರತಿ ನಿಮಿಷಕ್ಕೆ ಸರಾಸರಿ 122 ದೋಸೆಗಳನ್ನು ಆರ್ಡರ್ ಮಾಡಲಾಗುತ್ತದೆ. ಇದರಲ್ಲಿ ಬೆಂಗಳೂರು ಅಗ್ರಸ್ಥಾನದಲ್ಲಿದ್ದರೆ, ಹೈದರಾಬಾದ್ ಮತ್ತು ಚೆನ್ನೈ ನಂತರದ ಸ್ಥಾನಗಳಲ್ಲಿವೆ. ದಕ್ಷಿಣ ಭಾರತದ ಹೆಮ್ಮೆಯ ದೋಸೆ ಇಂದು ವಿಶ್ವದ ನೆಚ್ಚಿನ ಉಪಾಹಾರವಾಗಿದೆ. ದೋಸೆ ಮೊದಲೆಲ್ಲಾ ಉಪಾಹಾರದ ರೂಪದಲ್ಲಿಯೇ ಸೇವಿಸಲಾಗುತ್ತಿತ್ತು. ಇಂದು ದೋಸೆಯ ಸೇವನೆಗೆ ಸಮಯದ ಮಿತಿ ಇಲ್ಲ. ಹೋಟೆಲುಗಳಲ್ಲಂದೂ ಇಡಿಯ ದಿನ ದೋಸೆ ಲಭ್ಯವಿದೆ. ತೆಳುವಾದ ತಟ್ಟೆಯಂತಿರುವ ದೋಸೆಯಲ್ಲಿ ಸಾವಿರಾರು ತೂತುಗಳಿವೆ.

ಇದನ್ನೇ ಎಲ್ಲರ ಮನೆ ದೋಸೆಯೂ ತೂತೇ ಎಂದು ಕನ್ನಡದ ಗಾದೆ ಮಾತಿನಲ್ಲಿಯೂ ಬಳಸಿಕೊಳ್ಳಲಾಗಿದೆ. ಇಂಡಿಯನ್ ಪ್ಯಾನ್ ಕೇಕ್ ಎಂಬ ಹೆಸರಿನಲ್ಲಿ ವಿದೇಶಗಳಲ್ಲಿಯೂ ದೋಸೆ ಪ್ರಸಿದ್ಧವಾಗಿದೆ. ಇಡ್ಲಿಯಲ್ಲಿ ಎಣ್ಣೆಯಂಶವಿಲ್ಲದ ಕಾರಣ ಇದನ್ನು ಅತ್ಯಂತ ಆರೋಗ್ಯಕರ ಆಹಾರ ಎಂದು ವೈದ್ಯರೂ ರೋಗಿಗಳ ಸೇವನೆಗೆ ಶಿಫಾರಸ್ಸು ಮಾಡುತ್ತಾರೆ.

# UAEಯ ಹಿಂದು ದೇವಾಲಯ ಸಾರ್ವಜನಿಕರ ದರ್ಶನಕ್ಕೆ ಮುಕ್ತ



**ಅಬುಧಾಬಿ:** ಫೆಬ್ರವರಿ 14 ರಂದು ಪ್ರಧಾನಿ ನರೇಂದ್ರ ಮೋದಿ ಅವರು ಉದ್ಘಾಟಿಸಿದ ಗಣಿಯ ಮೊದಲ ಹಿಂದು ದೇವಾಲಯ ಶುಕ್ರವಾರ ಭಕ್ತರು ಮತ್ತು ಸಾರ್ವಜನಿಕರಿಗೆ ದರುಶನಕ್ಕೆ ತೆರೆಯಲಾಗಿದೆ.

ಇದೀಗ ಭಕ್ತರಿಗೆ ಡ್ರೆಸ್ ಕೋಡ್ ಮಾಡಲಾಗಿದ್ದು, ದರುಶನಕ್ಕೆ ಸಮಯ ಕೂಡ ನಿಗದಿಪಡಿಸಲಾಗಿದೆ.

ಈ ಸಂಬಂಧ ಃಂಕಖ ಹಿಂದು ಮಂದಿರದ ಎಕ್ಸ್ ಖಾತೆಯಲ್ಲಿ ವಿವರ ನೀಡಲಾಗಿದೆ. ಅಬುಧಾಬಿ ಮಂದಿರ ಈಗ ಸಾರ್ವಜನಿಕರ ದರ್ಶನಕ್ಕೆ ತೆರೆದಿರುತ್ತದೆ ಎಂಬ ಪೋಸ್ಟ್ ಜೊತೆಗೆ ಭವ್ಯ ದೇಗುಲದ ಅದ್ಭುತ ವೀಡಿಯೋವನ್ನು ಸಹ ಹಂಚಿಕೊಂಡಿದೆ.

ಸೋಮವಾರ ಹೊರತುಪಡಿಸಿ ಎಲ್ಲಾ ದಿನಗಳಲ್ಲಿ ದೇವಾಲಯವು ಬೆಳಗ್ಗೆ 9 ರಿಂದ ರಾತ್ರಿ 8 ರವರೆಗೆ ತೆರೆದಿರುತ್ತದೆ ಎಂದು ಪೋಸ್ಟ್ ನಲ್ಲಿ ಉಲ್ಲೇಖಿಸಲಾಗಿದೆ.

ಅಬುಧಾಬಿ ದೇವಸ್ಥಾನಕ್ಕೆ ಭೇಟಿ ನೀಡಲು ಡ್ರೆಸ್ ಕೋಡ್ ಮಾಡಲಾಗಿದೆ. ದೇವಾಲಯದ ವೆಬ್ಸೈಟ್ನಲ್ಲಿ ಭಕ್ತರು ಯಾವ ರೀತಿಯ ಬಟ್ಟೆಗೆ ಆದ್ಯತೆ ನೀಡಬೇಕು ಮತ್ತು ಯಾವುದನ್ನು ನಿಷೇಧಿಸಲಾಗಿದೆ. ಹಾಗೆಯೇ ಫೋಟೋಗ್ರಫಿ ನಿಯಮಗಳು ಇತ್ಯಾದಿಗಳ ಬಗ್ಗೆ ಸವಿವರವಾಗಿ ಉಲ್ಲೇಖಿಸಲಾಗಿದೆ.

## ಮುಂಬೈ ದಾಳಿ ಮಾಸ್ಟರ್ ಮೈಂಡ್ ಚೀಮಾ ನಿಧನ



**ಮುಂಬೈ:** ಲಷ್ಕರ್-ಎ-ತೊಯ್ಬಾದ ಕಮಾಂಡರ್, ಮುಂಬೈ ದಾಳಿಯ ಮಾಸ್ಟರ್ ಮೈಂಡ್ ಅಝಂ ಚೀಮಾ ಪಾಕಿಸ್ತಾನದ ಫೈಸಲಾಬಾದ್ನಲ್ಲಿ ಹೃದಯಾಘಾತದಿಂದ ಮೃತಪಟ್ಟಿದ್ದಾನೆ. 2008,2006 ರ ಮುಂಬೈ ದಾಳಿಯ ಮಾಸ್ಟರ್ ಮೈಂಡ್ ಆಗಿದ್ದ ಈತನನ್ನು ಭಾರತ ಸರ್ಕಾರ ಹುಡುಕುತ್ತಿತ್ತು.ಮುಂಬೈ ಟ್ರೇನ್ ಸ್ಫೋಟದಿಂದಾಗಿ ಒಟ್ಟಾರೆ 209 ಪ್ರಯಾಣಿಕರು ಪ್ರಾಣ ಬಿಟ್ಟಿದ್ದರು. 800 ಕ್ಕೂ ಹೆಚ್ಚು ಮಂದಿ ಗಾಯಗೊಂಡಿದ್ದರು. ಇನ್ನು 2008ರ ಮುಂಬೈ ದಾಳಿಗೆ ತರಬೇತಿ ಕೊಟ್ಟಿದ್ದು ಈತನೇ ಎಂದು ಅಮೆರಿಕ ಮಾಹಿತಿ ನೀಡಿದೆ. ಈ ಬ್ಲಾಸ್ಟ್ನಲ್ಲಿಯೂ 166 ಮಂದಿ ಮೃತಪಟ್ಟಿದ್ದರು.

## ಅಫ್ಘಾನಿಸ್ತಾನದಲ್ಲಿ ಹಿಮಪಾತ; 15 ಸಾವು



**ಕಾಬೂಲ್:** ಕಳೆದ ಮೂರು ದಿನಗಳಿಂದ ಅಫ್ಘಾನಿಸ್ತಾನದ ಹಲವು ಪ್ರಾಂತ್ಯಗಳಲ್ಲಿ ಹಿಮಪಾತ ಹೆಚ್ಚಿದ್ದು 15 ಜನರನ್ನು ಬಲಿ ತೆಗೆದುಕೊಂಡಿದೆ ಹಾಗೂ 30 ಜನರಿಗೆ ಗಾಯವಾಗಿದೆ. ಅಲ್ಲದೆ ಬಾಲ್ಖ್ ಮತ್ತು ಫರಿಯಾಬ್ ಪ್ರಾಂತ್ಯಗಳಲ್ಲಿ ಪ್ರಾಣಿಗಳು ಕೂಡ ಸಾವನ್ನಪ್ಪಿದ್ದು, ಸುಮಾರು ಹತ್ತು ಸಾವಿರ ಪ್ರಾಣಿಗಳು ಸಾವನ್ನಪ್ಪಿದೆ ಎಂದು ವರದಿಯಲ್ಲಿ ಹೇಳಲಾಗಿದೆ. ಈ ಬಗ್ಗೆ ಸಾರ್-ಇ-ಪುಲ್ ನಿವಾಸಿ ಅಬ್ದುಲ್ ಖಾದಿರ್ ಅವರು ಮಾಹಿತಿ ನೀಡಿದ್ದು ಜನಸಂಖ್ಯೆ ಹೆಚ್ಚಿರುವ ಪ್ರದೇಶದಲ್ಲಿ ಆತಂಕ ಹೆಚ್ಚಾಗಿದೆ. ಮೂರು ದಿನದಿಂದ ಹಿಮಪಾತ ಹೆಚ್ಚಾಗಿದೆ. ಜಾನುವಾರುಗಳು ಕೂಡ ಸಾವನ್ನಪ್ಪುತ್ತಿದೆ. ಇದರಿಂದ ಇಲ್ಲಿನ ಜನರಲ್ಲಿ ಆತಂಕ ಹೆಚ್ಚಾಗಿದೆ. ಅನೇಕ ರಸ್ತೆಗಳನ್ನು ನಿರ್ಬಂಧಿಸಲಾಗಿದೆ. ಇದರಿಂದ ಯಾವುದೇ ಸಂಪರ್ಕವನ್ನು ಸಾಧಿಸಲು ಸಾಧ್ಯವಾಗುತ್ತಿಲ್ಲ ಎಂದು ಹೇಳಿದ್ದಾರೆ. ಸರ್ಕಾರದ ತುರ್ತು ಸಹಾಯ ಬೇಕಿದೆ, ಇಲ್ಲಿಯ ಜನರಿಗೆ ಸಹಾಯ ಮಾಡಬೇಕು ಎಂದು ಮತ್ತೊಬ್ಬ ಅಲ್ಲಿಯ ನಿವಾಸಿ ಮನವಿ ಮಾಡಿಕೊಂಡಿದ್ದಾರೆ. ಈಗಾಗಲೇ ಅಫ್ಘಾನಿಸ್ತಾನವು ವಿಶೇಷವಾಗಿ ಜಾನುವಾರು ಮಾಲೀಕರಿಗೆ ಪರಿಹಾರವನ್ನು ನೀಡಲು ವಿವಿಧ ಸಚಿವಾಲಯಗಳನ್ನು ಒಳಗೊಂಡ ಸಮಿತಿಯ ರಚನೆ ಮಾಡುವಂತೆ ಹೇಳಿದೆ. ಬಾಲ್ಖ್, ಜಾವ್ಜಾನ್, ಬದ್ಘಿಸ್, ಫರಿಯಾಬ್ ಮತ್ತು ಹೆರಾತ್ ಪ್ರಾಂತ್ಯಗಳಲ್ಲಿ ಜಾನುವಾರು ಮಾಲೀಕರ ಸಾಹಯ ಐವತ್ತು ಮಿಲಿಯನ್ ಅಫ್ಘಾನಿ ಅಧಿಕಾರಿಗಳನ್ನು ನಿಯೋಜಿಸಲಾಗಿದೆ.

## ಮುಂದಿನ ದಿನಗಳ ಹವಾಮಾನದ ಬಗ್ಗೆ ಅಲರ್ಟ್ ಜಾರಿ



**ದೆಹಲಿ:** 2024 ರಲ್ಲಿ ವಿಶ್ವದ ಹೆಚ್ಚಿನ ಭಾಗದಲ್ಲಿ ತೀವ್ರ ಬಿಸಿಲಿನ ವಾತಾವರಣ ಇರಲಿದೆ. ಮುಂಬರುವ ಎಲ್ ನಿನೊದಿಂದಾಗಿ ಜಾಗತಿಕ ತಾಪಮಾನವು ತೀವ್ರಗೊಳ್ಳುವ ನಿರೀಕ್ಷೆಯಿದೆ. ಇದು 2024 ರಲ್ಲಿ ಅಮೆಜಾನ್ನಿಂದ ಅಲಾಸ್ಕಾವರೆಗೆ ದಾಖಲೆಯ ತಾಪಮಾನ ಏರಿಕೆಗೆ ಕಾರಣವಾಗುತ್ತದೆ ಎನ್ನಲಾಗಿದೆ.

ಬಂಗಾಳಕೊಲ್ಲಿ, ದಕ್ಷಿಣ ಚೀನಾ ಸಮುದ್ರ, ಭಾರತ, ಫಿಲಿಪೈನ್ಸ್ ಮತ್ತು ಕೆರಿಬಿಯನ್ ಕರಾವಳಿ ಪ್ರದೇಶಗಳಲ್ಲಿ ಜೂನ್ ವರೆಗೆಅಸಾಧಾರಣ ಬಿಸಿಲುಇರಲಿದೆ ಎಂದು ವಿಜ್ಞಾನಿಗಳು ಭವಿಷ್ಯ ನುಡಿದಿದ್ದಾರೆ. ನಂತರ ಎಲ್ ನಿನೋ ಪ್ರಭಾವ ಕಡಿಮೆಯಾಗುವ ಸಾಧ್ಯತೆಯಿದೆ.

ಪಶ್ಚಿಮ ಪೆಸಿಫಿಕ್ ಮಹಾಸಾಗರದಿಂದ ಶಾಖ ಬಿಡುಗಡೆ ಮಾಡುವ ಎಲ್ ನಿನೊ ಐತಿಹಾಸಿಕವಾಗಿ ಜಾಗತಿಕ ಮೇಲ್ಮೈ ತಾಪಮಾನವನ್ನು ಹೆಚ್ಚಿಸಿದೆ ಎಂಬುದು ಗಮನಾರ್ಹವಾಗಿದೆ. ಇದೇ ಕಾರಣದಿಂದ 2023 ಅತ್ಯಂತ ಹೆಚ್ಚು ಬಿಸಿಲು ಇದ್ದ ವರ್ಷ ಎನಿಸಿತ್ತು.

2023ರ ಉತ್ತರಾರ್ಧದಲ್ಲಿಎಲ್ ನಿನೊದಿಂದಉಂಟಾದ ಹೆಚ್ಚಿದ ತಾಪಮಾನವು ಉತ್ತರ ಅಮೆರಿಕಾ, ಯುರೋಪ್, ಚೀನಾ, ದಕ್ಷಿಣ ಅಮೇರಿಕಾ ಮತ್ತು ಮಡಗಾಸ್ಕರ್ನಲ್ಲಿ ತೀವ್ರ ಪರಿಣಾಮಗಳನ್ನು ಬೀರಿತ್ತು. ಇದು ಅಸ್ತಿತ್ವದಲ್ಲಿರುವ ಹವಾಮಾನ ಬಿಕ್ಕಟ್ಟಿನ ಪರಿಣಾಮವನ್ನು ಹೆಚ್ಚಿಸಿತ್ತು.



## ಲೋಕಸಭಾ ಚುನಾವಣೆ: 16 ರಾಜ್ಯಗಳ 195 ಕ್ಷೇತ್ರಗಳಿಗೆ ಬಿಜೆಪಿ ಮೊದಲ ಪಟ್ಟಿ ಬಿಡುಗಡೆ

**ದೆಹಲಿ:** ಬಿಜೆಪಿ ಲೋಕಸಭಾ ಚುನಾವಣೆಗೆ ತನ್ನ ಮೊದಲ ಪಟ್ಟಿ ರಿಲೀಸ್ ಮಾಡಿದ್ದು, 16 ರಾಜ್ಯಗಳ 195 ಕ್ಷೇತ್ರಗಳಿಗೆ ಅಭ್ಯರ್ಥಿಯ ಮೊದಲ ಪಟ್ಟಿಯನ್ನು ಬಿಡುಗಡೆ ಮಾಡಿದ್ದಾರೆ.

ವಾರಣಾಸಿಯಿಂದ ಪ್ರಧಾನಿ ನರೇಂದ್ರ ಮೋದಿ ಸ್ಪರ್ಧೆ ಮಾಡಲಿದ್ದಾರೆ ಎಂದು ಘೋಷಣೆಯಾಗಿದೆ.

ಮೊದಲ ಪಟ್ಟಿಯಲ್ಲಿ ಕೇಂದ್ರ ಸಚಿವ ಸಂಪುಟದ 34 ಸಚಿವರಿಗೆ ಟಿಕೆಟ್ ಘೋಷಣೆ ಮಾಡಲಾಗಿದೆ. ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಅವರಿಗೂ ಟಿಕೆಟ್ ಘೋಷಿಸಲಾಗಿದೆ ಎಂದು ಬಿಜೆಪಿ ರಾಷ್ಟ್ರೀಯ ಪ್ರಧಾನಿ ಕಾರ್ಯದರ್ಶಿ ವಿನೋದ್ ತಾವ್ಡೆ ಸುದ್ದಿಗೋಷ್ಠಿಯಲ್ಲಿ ತಿಳಿಸಿದ್ದಾರೆ.

ಮೊದಲ ಪಟ್ಟಿಯಲ್ಲಿ ಕರ್ನಾಟಕದ ಯಾವುದೇ ಅಭ್ಯರ್ಥಿಯ ಹೆಸರನ್ನು ಘೋಷಣೆ ಮಾಡಲಾಗಿಲ್ಲ.

16 ರಾಜ್ಯ ಹಾಗೂ ಎರಡು ಕೇಂದ್ರಾಡಳಿತ ಪ್ರದೇಶಕ್ಕೆ ಟಿಕೆಟ್ ಘೋಷಣೆ ಮಾಡಲಾಗಿದೆ. 34 ಕೇಂದ್ರ ಸಚಿವರೊಂದಿಗೆ, 28 ಮಹಿಳಾ ಅಭ್ಯರ್ಥಿಗಳಿಗೂ ಟಿಕೆಟ್ ಘೋಷಿಸಲಾಗಿದೆ. 47 ಯುವಕರು, 27 ಎಸ್ಸಿ, 18 ಎಸ್ಸಿ ಹಾಗೂ 57 ಹಿಂದುಳಿದ ವರ್ಗಗಳ ವ್ಯಕ್ತಿಗೆ ಟಿಕೆಟ್ ಘೋಷಿಸಲಾಗಿದೆ. ರಾಜ್ಯವಾರು ಪ್ರಕಾರ ಉತ್ತರ ಪ್ರದೇಶದಲ್ಲಿ 51, ಪಶ್ಚಿಮ ಬಂಗಾಳ 20, ಮಧ್ಯಪ್ರದೇಶ 24, ಗುಜರಾತ್, ರಾಜಸ್ಥಾನ 15, ಕೇರಳ 12, ತೆಲಂಗಾಣ 9, ಜಾರ್ಖಂಡ್ 11, ದೆಹಲಿ 5, ಉತ್ತರಾಖಂಡ 3 ಹಾಗೂ ಗೋವಾದ 1 ಕ್ಷೇತ್ರಗಳಿಗೆ ಟಿಕೆಟ್ ಘೋಷಿಸಲಾಗಿದೆ

ದೆಹಲಿ ಕ್ಷೇತ್ರದಲ್ಲಿ ಕೇಂದ್ರ ಸಚಿವೆ ಮೀನಾಕ್ಷಿ ಲೇಖಿಗೆ ಟಿಕೆಟ್ ನಿರಾಕರಿಸಲಾಗಿದೆ. ಸುಷ್ಮಾ ಸ್ವರಾಜ್ ಪುತ್ರಿಗೆ ಟಿಕೆಟ್ ನೀಡಲಾಗಿದ್ದು, ಭಾನ್ಸುರಿ ಸ್ವರಾಜ್ ಈ ಬಾರಿ ಲೋಕಸಭೆ ಚುನಾವಣೆಗೆ ಸ್ಪರ್ಧೆ ಮಾಡಲಿದ್ದಾರೆ. ಇನ್ನು ಕೇಂದ್ರ ಗೃಹ ಸಚಿವ ಅಮಿತ್ ಶಾ ಗುಜರಾತ್ನ ಗಾಂಧಿನಗರದಿಂದ ಸ್ಪರ್ಧೆ ಮಾಡಲಿದ್ದಾರೆ.

ರಾಜ್ಯಸಭಾ ಅವಧಿ ಮುಗಿಸಿರುವ ಮಾಜಿ ಕೇಂದ್ರ ಸಚಿವ ರಾಜೀವ್ ಚಂದ್ರಶೇಖರ್ ಅವರಿಗೆ ಕೇರಳದ ತಿರುವನಂತಪುರದಿಂದ ಟಿಕೆಟ್ ನೀಡಲಾಗಿದೆ.

## ರಷ್ಯಾದ ವಜ್ರಗಳ ಆಮದಿಗೆ ನಿಷೇಧ ಘೋಷಿಸಿದ ಕೆನಡಾ



**ಒಟ್ಟಾವಾ:** ರಷ್ಯಾದ ವಜ್ರಗಳ ಮೇಲೆ ಕೆನಡಾ ಹೆಚ್ಚುವರಿ ಆಮದು ನಿರ್ಬಂಧಗಳನ್ನು ವಿಧಿಸುತ್ತಿದೆ ಎಂದು ಕೆನಡಾದ ವಿದೇಶಾಂಗ ವ್ಯವಹಾರಗಳ ಸಚಿವೆ ಮೆಲಾನಿ ಜೋಲಿ ಹೇಳಿದ್ದಾರೆ.

ಈ ನಿಷೇಧವು 1 ಕ್ಯಾರೆಟ್ ಮತ್ತು ಅದಕ್ಕಿಂತ ಹೆಚ್ಚಿನ ತೂಕದ ರಷ್ಯಾದ ವಜ್ರಗಳ ಪರೋಕ್ಷ ಆಮದನ್ನು ಗುರಿಯಾಗಿಸುವ ಮೂಲಕ ರಷ್ಯಾದಿಂದ ವಜ್ರಗಳು ಮತ್ತು ವಜ್ರ-ಆಭರಣ ಸಂಬಂಧಿತ ಉತ್ಪನ್ನಗಳ ಮೇಲೆ ಕೆನಡಾದ ಡಿಸೆಂಬರ್ 2023 ರ ಆಮದು ನಿರ್ಬಂಧಗಳನ್ನು ಮತ್ತಷ್ಟು ಹೆಚ್ಚಿಸುತ್ತದೆ ಎಂದು ಜೋಲಿ ಶುಕ್ರವಾರ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ರಷ್ಯಾದಿಂದ ಕೈಗಾರಿಕೆಯೇತರ ವಜ್ರಗಳ ರಫ್ತಿನಿಂದ ಬರುವ ಆದಾಯವನ್ನು ಕಡಿಮೆ ಮಾಡಲು ಜಿ 7 ನಾಯಕರು 2023 ರ ಫೆಬ್ರವರಿ, ಮೇ ಮತ್ತು ಡಿಸೆಂಬರ್ನಲ್ಲಿ ನೀಡಿದ ಬದ್ಧತೆಗಳಿಗೆ ಇದು ಅನುಗುಣವಾಗಿದೆ ಎಂದು ಅವರು ಕ್ಸಿನ್ಹುವಾ ಸುದ್ದಿ ಸಂಸ್ಥೆ ವರದಿಯನ್ನು ಉಲ್ಲೇಖಿಸಿದ್ದಾರೆ.

ಹೇಳಿಕೆಯ ಪ್ರಕಾರ, ರಷ್ಯಾ ವಿಶ್ವದ ಅತಿದೊಡ್ಡ ಒರಟು ವಜ್ರ ಉತ್ಪಾದಕ ಮತ್ತು ವಜ್ರಗಳು ಮತ್ತು ವಜ್ರ ಉತ್ಪನ್ನಗಳ ಗಮನಾರ್ಹ ಜಾಗತಿಕ ರಫ್ತುದಾರ. ರಷ್ಯಾದ ಒಟ್ಟು ರಫ್ತುಗಳ ಮೌಲ್ಯವು 2022 ರಲ್ಲಿ ಸುಮಾರು 5.2 ಬಿಲಿಯನ್ ಕೆನಡಿಯನ್ ಡಾಲರ್ (3.8 ಬಿಲಿಯನ್ ಡಾಲರ್) ಮೀರಿದೆ.

## ಸುಷ್ಮಾ ಸ್ವರಾಜ್ ಪುತ್ರಿ ಬಾನ್ಸುರಿ ಸ್ವರಾಜ್ ನವದೆಹಲಿಯಿಂದ ಸ್ಪರ್ಧೆ



ನವದೆಹಲಿ: ಕೇಂದ್ರ ಮಾಜಿ ಸಚಿವೆ ಸುಷ್ಮಾ ಸ್ವರಾಜ್ ಅವರ ಪುತ್ರಿ, ಹೆಸರಾಂತ ವಕೀಲರಾದ ಬಾನ್ಸುರಿ ಸ್ವರಾಜ್ ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಸ್ಪರ್ಧೆಗೆ ಬಿಜೆಪಿ ಟಿಕೆಟ್ ನೀಡಿದೆ. ಬಾನ್ಸುರಿ ಸ್ವರಾಜ್ ಅವರು ನವದೆಹಲಿ ಲೋಕಸಭಾ ಕ್ಷೇತ್ರದಿಂದ ಸ್ಪರ್ಧಿಸಲಿದ್ದಾರೆ. ಇಂದು ಬಿಡುಗಡೆ ಮಾಡಿದ ಬಿಜೆಪಿ ಅಭ್ಯರ್ಥಿಗಳ ಮೊದಲ ಪಟ್ಟಿಯಲ್ಲಿ, ತಮ್ಮ ಹೆಸರು ಘೋಷಣೆಯಾಗಿದ್ದಕ್ಕೆ ಸಂಸತ ವ್ಯಕ್ತಪಡಿಸಿರುವ ಬಾನ್ಸುರಿ ಸ್ವರಾಜ್, ನನ್ನ ತಾಯಿ ಸ್ಥಾಪಿಸಿದ ಪರಂಪರೆಗೆ ತಕ್ಕಂತೆ ಬದುಕಲು ಪ್ರಯತ್ನಿಸುತ್ತೇನೆ. ಅವರು ಸ್ವರ್ಗದಿಂದ ನನಗೆ ಆಶೀರ್ವಾದ ಮಾಡುತ್ತಾರೆ ಎಂದು ಪ್ರತಿಕ್ರಿಯಿಸಿದ್ದಾರೆ. ನನಗೆ ಅಮ್ಮನ ಆಶೀರ್ವಾದವಿದೆ. ಆದರೆ ಈ ಸಾಧನೆಯು ಬಾನ್ಸುರಿ ಸ್ವರಾಜ್ ಅವರದ್ದಲ್ಲ. ದೆಹಲಿ ಬಿಜೆಪಿಯ ಪ್ರತಿಯೊಬ್ಬ ಕಾರ್ಯಕರ್ತರದ್ದು ಎಂದು ಬಾನ್ಸುರಿ ಮಾತನಾಡಿದ್ದಾರೆ. ನನಗೆ ಈ ಅವಕಾಶ ನೀಡಿದ ಪ್ರಧಾನಿ ಮೋದಿ, ಎಚ್ಎಂ ಅಮಿತ್ ಶಾ ಜಿ, ಜೆಪಿ ನಡ್ಡಾ ಜಿ ಮತ್ತು ಪ್ರತಿಯೊಬ್ಬ ಬಿಜೆಪಿ ಕಾರ್ಯಕರ್ತರಿಗೆ ನಾನು ಕೃತಜ್ಞತೆ ಸಲ್ಲಿಸುತ್ತೇನೆ.'ಅಬ್ ಕಿ ಬಾರ್ 400 ಪಾರ್' ನಿರ್ಣಯದೊಂದಿಗೆ, ಪ್ರತಿಯೊಬ್ಬ ಬಿಜೆಪಿ ಕಾರ್ಯಕರ್ತರು ನರೇಂದ್ರ ಮೋದಿಯವರನ್ನು ಮೂರನೇ ಬಾರಿಗೆ 'ಪ್ರಧಾನ ಸೇವಕ' ಮಾಡಲು ಕೆಲಸ ಮಾಡುತ್ತಾರೆ ಎಂದು ಹೇಳಿದ್ದಾರೆ. ತನ್ನ ವೃತ್ತಿಪರ ವೃತ್ತಿಜೀವನದುದ್ದಕ್ಕೂ, ಬಾನ್ಸುರಿ ಕಾನೂನು ಕ್ಷೇತ್ರದಲ್ಲಿ ತನ್ನದೇ ಛಾಪು ಮೂಡಿಸಿದ್ದಾರೆ.

## ಜಾಸ್ತಿ ಮಕ್ಕಳು ಮಾಡ್ಕೊಳಿ: ಪುಟಿನ್ ಸಲಹೆ



**ರಷ್ಯಾ:** ಆಲ್ಕೋಹಾಲ್ ಸೇವನೆಯನ್ನು ಕಡಿಮೆ ಮಾಡುವುದರ ಮೂಲಕ ಆರೋಗ್ಯಕರ ಆಯ್ಕೆಗಳನ್ನು ತೆಗೆದುಕೊಳ್ಳುವಂತೆ ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ರಾಷ್ಟ್ರದ ಜನತೆಗೆ ಕರೆ ನೀಡಿದ್ದಾರೆ. ಮದ್ಯ ಸೇವನೆಯು ರಾಷ್ಟ್ರದ ಆರೋಗ್ಯದ ಮೇಲೆ ಪರಿಣಾಮ ಬೀರುತ್ತಿದ್ದು, ಬದಲಿಗೆ ದೊಡ್ಡ ಕುಟುಂಬಗಳನ್ನು ಹೊಂದಲು ಮಕ್ಕಳನ್ನು ಮಾಡಿಕೊಳ್ಳಬೇಕು. ರಷ್ಯಾದಲ್ಲಿ ದೊಡ್ಡ ಕುಟುಂಬಗಳು ಸಾಮಾನ್ಯವಾಗಬೇಕು ಎಂದು ಪುಟಿನ್ ಹೇಳಿದ್ದಾರೆ. ಕುಟುಂಬದ ಮುಖ್ಯ ಉದ್ದೇಶವು ಮಕ್ಕಳನ್ನು ಹೊಂದುವುದು.. ನಮ್ಮ ಬಹು ಜನಾಂಗೀಯ ರಾಷ್ಟ್ರದ ಉಳಿವನ್ನು ಖಚಿತಪಡಿಸುವುದು. ದೇಶದಲ್ಲಿ ಬಡತನವು ಇನ್ನೂ ತೀವ್ರವಾದ ಸಮಸ್ಯೆಯಾಗಿದ್ದು, ಜನಸಂಖ್ಯೆಯ 9% ಕ್ಕಿಂತ ಹೆಚ್ಚು ಪರಿಣಾಮ ಬೀರುತ್ತಿದೆ. ಅದಕ್ಕಾಗಿ ಮುಂದಿನ ವರ್ಷದಿಂದ ನಿಯಮಿತವಾಗಿ ವೈದ್ಯಕೀಯ ಪರೀಕ್ಷೆಗಳನ್ನು ತೆಗೆದುಕೊಳ್ಳಲು ಪೋಷಕರು ಮತ್ತು ಜನರಿಗೆ ತೆರಿಗೆ ವಿನಾಯಿತಿಯನ್ನು ನೀಡಲಾಗುವುದು ಎಂದು ಘೋಷಿಸಿದರು. 90ರ ದಶಕದಿಂದಲೂ ರಷ್ಯಾದ ಜನನ ಪ್ರಮಾಣವು ಸ್ಥಿರವಾಗಿ ಕುಸಿಯುತ್ತಿದೆ ಮತ್ತು ಉಕ್ರೇನ್ ಸಂಘರ್ಷದ ಪ್ರಾರಂಭದಿಂದಲೂ ದೇಶವು 300,000 ಕ್ಕೂ ಹೆಚ್ಚು ಸಾವುನೋವುಗಳನ್ನು ಅನುಭವಿಸಿದೆ ಎಂದು ರಷ್ಯಾ ಹೇಳುತ್ತಿದೆ.

## ಸಾವಿರಾರು ಜನರ ಅಶ್ರುತರ್ಪಣದ ನಡುವೆ ನವಾಲ್ನಿ ಅಂತ್ಯಕ್ರಿಯೆ





ಮಾಸ್ಕೊ: ರಶ್ಯಅಧ್ಯಕ್ಷ ಪುಟಿನ್ ರ ಕಡುವಿರೋಧಿ, ಪ್ರತಿಪಕ್ಷ ರಾಜಕಾರಣಿ ಅಲೆಕ್ಸಿ ನವಾಲ್ನಿ ಅವರ ಪಾರ್ಥಿವ ಶರೀರದ ಅಂತ್ಯಕ್ರಿಯೆ ಶುಕ್ರವಾರ ಸಾವಿರಾರು ಜನರ ಉಪಸ್ಥಿತಿಯಲ್ಲಿ, ಪೊಲೀಸ್ ಪಡೆಗಳ ಕಣ್ಗಾವಲಿನನಡುವೆ ಮಾಸ್ಕೊದ ಚರ್ಚೊಂದ ಆವರಣದಲ್ಲಿ ನಡೆಯಿತು. ಮಾಸ್ಕೊ ಕ್ರೈಸ್ತ ಆರ್ಥೋಡಕ್ಸ್ ಚರ್ಚ್ ನಲ್ಲಿ ಧರ್ಮಗುರುವೊಬ್ಬರು ಪ್ರಾರ್ಥನಾ ವಿಧಿವಿಧಾನಗಳನ್ನು ಸಂಕ್ಷಿಪ್ತವಾಗಿ ನೆರವೇರಿಸಿದರು. ಆಗ ಹೊರಭಾಗದಲ್ಲಿ ಜಮಾಯಿಸಿದ್ದ ಜನರು ನವಾಲ್ನಿ ಹೆಸರಿನಲ್ಲಿ ಘೋಷಣೆಗಳನ್ನು ಕೂಗಿದರು. ಆನಂತರ ನವೊಲ್ನಿ ಅವರ ಪಾರ್ಥಿವ ಶರೀರದ ಅಂತ್ಯಸಂಸ್ಕಾರವನ್ನು ಚರ್ಚ್ ಆವರಣದಲ್ಲಿರುವ ಸ್ಮಶಾನದಲ್ಲಿ ನೆರವೇರಿಸಲಾಯಿತು. ಪುಷ್ಪಗಳಿಂದ ಆವೃತವಾದ ಶವದಪೆಟ್ಟಿಗೆಯಲ್ಲಿ ನವಾಲ್ನಿ ಅವರ ಪಾರ್ಥಿವಶರೀರವಿರುವ ದೃಶ್ಯದ ಛಾಯಾಚಿತ್ರವೊಂದು ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡಿವೆ. ಅಂತ್ಯಸಂಸ್ಕಾರದ ಆನಂತರವೂ ಕೆಲವು ಜನರು 'ರಶ್ಯವು ಸ್ವತಂತ್ರವಾಗಲಿದೆ' ಹಾಗೂ ' ಪುಟಿನ್ ಕೊಲೆಗಡುಕ'' ಎಂಬ ಘೋಷಣೆಗಳನ್ನು ಕೂಡಾ ಕೂಗಿದರು. ಅಧ್ಯಕ್ಷ ವ್ಲಾದಿಮಿರ್ ಪುಟಿನ್ ಅವರ ಕಟುಟೀಕಾಕಾರರಾದ 47 ವರ್ಷದ ನವಾಲ್ನಿ ಆರ್ಕ್ಟಿಕ್ನಲ್ಲಿ ಕಾರಾಗೃಹದಲ್ಲಿ ನಿಧರಾಗಿದ್ದರು.

ರಶ್ಯ ಆಡಳಿತವು ನವೊಲ್ನಿಯವರನ್ನು ಬಂಧನದಲ್ಲಿ ಕೊಲೆಗೈಯಲಾಗಿದೆಯೆಂದು ಅವರ ಬೆಂಬಲಿಗರು ಆಪಾದಿಸಿದ್ದಾರೆ.ಆದರೆ ಪುಟಿನ್ ಸರಕಾರವು ನವೊಲ್ನಿ ಹತ್ಯೆಯನ್ನು ತನ್ನ ಪಾತ್ರವನ್ನು ನಿರಾಕರಿಸಿದೆ.

## ಪಾಕ್ ನೂತನ ಪ್ರಧಾನಿಯಾಗಿ 'ಶೆಹಬಾಜ್ ಷರೀಫ್' ಪ್ರಮಾಣ ವಚನ ಸ್ವೀಕಾರ ಸಾಧ್ಯತೆ!



**ನವದೆಹಲಿ:** ಪಾಕಿಸ್ತಾನ್ ಮುಸ್ಲಿಂ ಲೀಗ್-ನವಾಜ್ (ಪಿಎಂಎಲ್-ಎನ್) ಹಿರಿಯ ಮುಖಂಡ ಮತ್ತು ಪಾಕಿಸ್ತಾನದ ಮಾಜಿ ಪ್ರಧಾನಿ ನವಾಜ್ ಷರೀಫ್ ಅವರ ಕಿರಿಯ ಸಹೋದರ ಶೆಹಬಾಜ್ ಷರೀಫ್ ಭಾನುವಾರ ಪಾಕಿಸ್ತಾನದ ಪ್ರಧಾನಿಯಾಗಲಿದ್ದಾರೆ.

ಇದರೊಂದಿಗೆ ಅವರು ಮತ್ತೊಮ್ಮೆ ಸಮ್ಮಿಶ್ರ ಸರ್ಕಾರವನ್ನು ಮುನ್ನಡೆಸುವ ದೇಶದ 33 ನೇ ಪ್ರಧಾನಿಯಾಗಲಿದ್ದಾರೆ.

ಚುನಾವಣೆಯಲ್ಲಿ ಅಕ್ರಮ ನಡೆದಿದೆ ಮತ್ತು ಆರ್ಥಿಕ ಮತ್ತು ಭದ್ರತಾ ಸವಾಲುಗಳನ್ನು ಎದುರಿಸುತ್ತಿದೆ ಎಂಬ ಆರೋಪಗಳ ಮಧ್ಯೆ ಶೆಹಬಾಜ್ ಷರೀಫ್ ಅವರ ಅಧಿಕಾರ ಸ್ವೀಕಾರ ಬಂದಿದೆ.

ಸಮ್ಮಿಶ್ರ ಸರ್ಕಾರದಲ್ಲಿ ಪಿಎಂಎಲ್-ಎನ್ ಮತ್ತು ಪಾಕಿಸ್ತಾನ್ ಪೀಪಲ್ಸ್ ಪಾರ್ಟಿ (ಪಿಪಿಪಿ) ಇದ್ದು, ಶೆಹಬಾಜ್ ಷರೀಫ್ ಜಂಟಿ ಅಭ್ಯರ್ಥಿಯಾಗಿದ್ದಾರೆ. ಅವರು ಈಗಾಗಲೇ ನಾಮಪತ್ರ ಸಲ್ಲಿಸಿದ್ದಾರೆ. ಇಮ್ರಾನ್ ಖಾನ್ ಅವರ ಪಾಕಿಸ್ತಾನ್ ತೆಹ್ರೀಕ್ -ಇ-ಇನ್ಸಾಫ್ (ಪಿಟಿಐ) ಪಕ್ಷದ ಪ್ರಮುಖ ಪ್ರತಿಸ್ಪರ್ಧಿ ಒಮರ್ ಅಯೂಬ್ ಖಾನ್ ಕೂಡ ನಾಮಪತ್ರ ಸಲ್ಲಿಸಿದ್ದಾರೆ.

ಹೊಸ ಪ್ರಧಾನಿಯನ್ನು ಆಯ್ಕೆ ಮಾಡಲು ರಾಷ್ಟ್ರೀಯ ಅಸೆಂಬ್ಲಿಯಲ್ಲಿ ಮತದಾನ ಭಾನುವಾರ ನಡೆಯಲಿದ್ದು, ಯಶಸ್ವಿ ಅಭ್ಯರ್ಥಿಗೆ ಸೋಮವಾರ ಅಧ್ಯಕ್ಷರ ಭವನ ಐವಾನ್-ಇ-ಸದರ್ನಲ್ಲಿ ಪ್ರಮಾಣವಚನ ಬೋಧಿಸಲಾಗುವುದು ಎಂದು ರಾಷ್ಟ್ರೀಯ ಅಸೆಂಬ್ಲಿ ಸಚಿವಾಲಯ ತಿಳಿಸಿದೆ.



## ಚೀನಾದಿಂದ ಪಾಕ್‌ಗೆ ತೆರಳುತ್ತಿದ್ದ ಹಡಗಿಗೆ ತಡೆ

**ಮುಂಬೈ:** ಚೀನಾದಿಂದ ಪಾಕಿಸ್ತಾನದ ಕರಾಚಿಗೆ ತೆರಳುತ್ತಿದ್ದ ಹಡಗನ್ನ ಪಾಕಿಸ್ತಾನದ ಪರಮಾಣು ಮತ್ತು ಬ್ಯಾಲಿಸ್ಟಿಕ್ ಕ್ಷಿಪಣಿ ಕಾರ್ಯಕ್ರಮಕ್ಕೆ ಬಳಸಬಹುದಾದ ದ್ವಿ-ಬಳಕೆಯ ಸರಕನ್ನ ಒಳಗೊಂಡಿದೆ ಎಂಬ ಅನುಮಾನದ ಮೇಲೆ ಭಾರತೀಯ ಭದ್ರತಾ ಸಂಸ್ಥೆಗಳು ಮುಂಬೈನ ನವಾ ಶೇವಾ ಬಂದರಿನಲ್ಲಿ ನಿಲ್ಲಿಸಿವೆ ಎಂದು ಅಧಿಕಾರಿಗಳು ಶನಿವಾರ ತಿಳಿಸಿದ್ದಾರೆ.

ಗುಪ್ತಚರ ಮಾಹಿತಿಯ ಆಧಾರದ ಮೇಲೆ, ಕಸ್ಟಮ್ಸ್ ಅಧಿಕಾರಿಗಳು ಕರಾಚಿಗೆ ತೆರಳುತ್ತಿದ್ದ ಮಾಲ್ಟಾ ಧ್ವಜ ಹೊಂದಿರುವ ವ್ಯಾಪಾರಿ ಹಡಗು - ಸಿಎಂಎ ಸಿಜಿಎಂ ಅಟ್ಟಿಲಾವನ್ನ ತಡೆದರು. ಆ ಹಡಗಿನಲ್ಲಿ ಕಂಪ್ಯೂಟರ್ ನ್ಯೂಮರಿಕಲ್ ಕಂಟ್ರೋಲ್ (ಅಓಅ) ಇತ್ತು, ಇದನ್ನು ಮೂಲತಃ ಇಟಾಲಿಯನ್ ಕಂಪನಿ ತಯಾರಿಸಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಅಓಅ ಯಂತ್ರಗಳು ಮೂಲತಃ ಕಂಪ್ಯೂಟರ್'ನಿಂದ ನಿಯಂತ್ರಿಸಲ್ಪಡುತ್ತವೆ ಮತ್ತು ದ್ವಿ ನಾಗರಿಕ ಮತ್ತು ಮಿಲಿಟರಿ ಅಪ್ಲಿಕೇಶನ್'ಗಳೊಂದಿಗೆ ವಸ್ತುಗಳ ಹರಡುವಿಕೆಯನ್ನ ತಡೆಯುವ ಗುರಿಯನ್ನ ಹೊಂದಿರುವ ಅಂತರರಾಷ್ಟ್ರೀಯ ಶಸ್ತ್ರಾಸ್ತ್ರ ನಿಯಂತ್ರಣ ಆಡಳಿತವಾದ ವಾಸ್ಸೆನಾರ್ ವ್ಯವಸ್ಥೆ ಅಡಿಯಲ್ಲಿ ಬರುತ್ತವೆ, ಇದರಲ್ಲಿ ಭಾರತವು ಸಕ್ರಿಯವಾಗಿ ಭಾಗವಹಿಸುತ್ತದೆ.

## ಕ್ಯಾಲಿಫೋರ್ನಿಯಾ ನೆವಾಡದಲ್ಲಿ ಬಿರುಗಾಳಿ

**ರೆನೊ:** ಅಮೆರಿಕದ ಸಿಯೆರಾ ನೆವಡಾದಲ್ಲಿ ಶುಕ್ರವಾರ ತಡರಾತ್ರಿ ಹಿಮಪಾತ ಸಹಿತ ಭಾರಿ ಬಿರುಗಾಳಿ ಅಪ್ಪಳಿಸಿದೆ. ಪರಿಣಾಮವಾಗಿ ಕ್ಯಾಲಿಫೋರ್ನಿಯಾದಲ್ಲಿ ಅಂತರರಾಜ್ಯ ಹೆದ್ದಾರಿಯನ್ನು ಬಂದ್ ಮಾಡಲಾಗಿದೆ. ಗುಡುಗುಸಹಿತ ಭಾರಿ ಮಳೆ ಸುರಿಯುತ್ತಿರುವ ಕಾರಣ ವಿದ್ಯುತ್ ಸೇವೆಯಲ್ಲಿಯೂ ವ್ಯತ್ಯಯವಾಗಿದೆ. ಕೆಲವು ಪ್ರದೇಶಗಳಲ್ಲಿ 10 ಅಡಿಗಳ ವರೆಗೆ ಹಿಮ ಬಿದ್ದಿದೆ. 'ಕೇಂದ್ರ ಸಿಯೆರಾದಲ್ಲಿ ಭಾನುವಾರದ ವರೆಗೆ ಭಾರಿ ಹಿಮಪಾತವಾಗುವ ಸಾಧ್ಯತೆ ಇದೆ' ಎಂದು ರೆನೊದಲ್ಲಿರುವ ರಾಷ್ಟ್ರೀಯ ಹವಾಮಾನ ಮುನ್ಸೂಚನಾ ಸಂಸ್ಥೆ ತಿಳಿಸಿದೆ. ಬಿರುಗಾಳಿ ಮತ್ತು ಕಡಿಮೆ ಗೋಚರತೆಯ ಕಾರಣದಿಂದಾಗಿ 100 ಮೈಲಿ ಹೆದ್ದಾರಿಯನ್ನು ಶುಕ್ರವಾರ ಕ್ಯಾಲಿಫೋರ್ನಿಯಾ ಅಧಿಕಾರಿಗಳು ಬಂದ್ ಮಾಡಿದ್ದಾರೆ. ರಸ್ತೆಯು ವಾಹನಗಳ ಸಂಚಾರಕ್ಕೆ ಯಾವಾಗ ಮುಕ್ತವಾಗುವುದೆಂಬ ಬಗ್ಗೆ ಅವರು ಯಾವುದೇ ಮಾಹಿತಿ ನೀಡಿಲ್ಲ. ಮದೇರಾ ಕೌಂಟಿಯಲ್ಲಿಯೂ ಹಿಮಪಾತ ಸಹಿತ ಬಿರುಗಾಳಿ ತನ್ನ ಕಬಂಧಬಾಹುವನ್ನು ಚಾಚಿದ್ದು, ಕೆಲ ಪ್ರಾಥಮಿಕ ಶಾಲೆಗಳಿಗೆ ಹಾನಿಯಾಗಿದೆ. ಕೆಲ ಸ್ಕಿ ರೆಸಾರ್ಟ್ಗಳನ್ನು ಈಗಾಗಲೇ ಮುಚ್ಚಲಾಗಿದೆ.



Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಪ್ರಶಾಂತ್ ನೀಲ್ ಮನೆಯಲ್ಲಿ ಒಟ್ಟಾದ ಜ್ಯೂ.ಎನ್‌ಟಿಆರ್, ರಿಷಬ್ ಶೆಟ್ಟಿ

ಸ್ಟಾರ್ ಡೈರೆಕ್ಟರ್ ಪ್ರಶಾಂತ್ ನೀಲ್ ಮನೆಯಲ್ಲಿ ಸಂಭ್ರಮ ಮನೆ ಮಾಡಿದೆ. ಪ್ರಶಾಂತ್ ನೀಲ್ ಮನೆಗೆ ಕಾಂತಾರ ಸ್ಟಾರ್ ರಿಷಬ್ ಶೆಟ್ಟಿ ದಂಪತಿ ಮತ್ತು ಜ್ಯೂ.ಎನ್‌ಟಿಆರ್ ಭೇಟಿ ನೀಡಿದ್ದಾರೆ. ಈ ಫೋಟೋಗಳು ಸಾಮಾಜಿಕ ಜಾಲತಾಣದಲ್ಲಿ ಸದ್ದು ಮಾಡುತ್ತಿದೆ.

ಕೆಜಿಎಫ್ 2 ಸ್ಟಾರ್ ಡೈರೆಕ್ಟರ್ ಪ್ರಶಾಂತ್ ನೀಲ್ ಅವರು ಮನೆಯ ಕಾರ್ಯಕ್ರಮಕ್ಕಾಗಿ ಜ್ಯೂ.ಎನ್‌ಟಿಆರ್ ದಂಪತಿ ಬೆಂಗಳೂರಿಗೆ ಬಂದಿದ್ದಾರೆ. ಖುಷಿ ಖುಷಿಯಾಗಿ ಪ್ರಶಾಂತ್ ನೀಲ್ ಮನೆಯ ಸಮಯ ಕಳೆದಿದ್ದಾರೆ. ಈ ಇಬ್ಬರ ಲೆಜೆಂಡ್‌ಗಳ ಜೊತೆ ಕಾಂತಾರ ಸ್ಟಾರ್ ರಿಷಬ್ ಮತ್ತು ಪತ್ನಿ ಪ್ರಗತಿ ಶೆಟ್ಟಿ ಕೂಡ ಸಾಥ್ ನೀಡಿದ್ದಾರೆ.

ಪ್ರಶಾಂತ್ ನೀಲ್ ಮನೆಯಲ್ಲಿ ವಿಶೇಷ ಕಾರ್ಯಕ್ರಮ ಮಾಡಿದ್ದಾರೆ. ಏನು ಕಾರ್ಯಕ್ರಮ ಎಂಬುದರ ಬಗ್ಗೆ ಮಾಹಿತಿ ಬಿಟ್ಟುಕೊಟ್ಟಿಲ್ಲ. ಮೂವರು ಜೊತೆಯಾಗಿರುವ ಫೋಟೋ ವೈರಲ್ ಆಗಿರೋದು ಅಭಿಮಾನಿಗಳಿಗೆ ಕುತೂಹಲ ಮೂಡಿಸಿದೆ. ಅದಷ್ಟೇ ಅಲ್ಲ, ಇವರ ಜೊತೆ ಹೊಂಬಾಳೆ ಸಂಸ್ಥೆ ರೂವಾರಿ ವಿಜಯ್ ಕಿರಗಂದೂರು ಕೂಡ ಭಾಗಿಯಾಗಿದ್ದಾರೆ.

ಕಾಂತಾರ, 'ಕೆಜಿಎಫ್' ಸಿನಿಮಾವನ್ನು ಹೊಂಬಾಳೆ



ಸಂಸ್ಥೆಯೇ ನಿರ್ಮಾಣ ಮಾಡಿರೋದ್ರಿಂದ ಪ್ರಶಾಂತ್ ನೀಲ್ ಮತ್ತು ರಿಷಬ್‌ಗೆ ಉತ್ತಮ ಬಾಂಧವ್ಯವಿದೆ. ಜ್ಯೂ.ಎನ್‌ಟಿಆರ್ ಜೊತೆ ಸಿನಿಮಾ ಮಾಡೋದಾಗಿ ಈಗಾಗಲೇ ಪ್ರಶಾಂತ್ ನೀಲ್ ಘೋಷಿಸಿದ್ದಾರೆ.

ರಿಷಬ್ ಶೆಟ್ಟಿ ಅವರು ಕಾಂತಾರ 2 ಸಿನಿಮಾ ಕೆಲಸದಲ್ಲಿ ಬ್ಯುಸಿಯಾದ್ರೆ, ಜ್ಯೂ.ಎನ್‌ಟಿಆರ್ ದೇವರ ಚಿತ್ರದ ನಂತರ ನೀಲ್ ಜೊತೆ ಹೊಸ ಪ್ರಾಜೆಕ್ಟ್ ಮಾಡ್ತಾರೆ.





# ಕಾಶಿ ವಿಶ್ವನಾಥನ ದರ್ಶನ ಪಡೆದ ತಮನ್ನಾ ಭಾಟಿಯಾ

ಮಿಲ್ಕಿ ಬ್ಯೂಟಿ ತಮನ್ನಾ ಭಾಟಿಯಾ ವಾರಣಾಸಿಯ ಕಾಶಿ ವಿಶ್ವನಾಥನ ದರ್ಶನ ಪಡೆದಿದ್ದಾರೆ. ಶಿವರಾತ್ರಿಗೂ ಮುನ್ನ ಶಿವನ ದರ್ಶನ ಪಡೆದು ನಟಿ ವಿಶೇಷ ಪೂಜೆ ಸಲ್ಲಿಸಿದ್ದಾರೆ. ಕಾಶಿಗೆ ಭೇಟಿ ಕೊಟ್ಟಿರುವ ಫೋಟೋಗಳನ್ನು ನಟಿ ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡಿದ್ದಾರೆ.

ಸಿನಿಮಾ ಶೂಟಿಂಗ್‌ಗೆ ಬ್ರೇಕ್ ಹಾಕಿ ತಮನ್ನಾ ಟೆಂಪಲ್ ರನ್ ಮಾಡಿದ್ದಾರೆ. ಜ್ಯೋತಿರ್ಲಿಂಗಕ್ಕೆ ನಟಿ ಪೂಜೆ ಸಲ್ಲಿಸಿದ್ದಾರೆ. ಸದ್ಯದಲ್ಲೇ ವಿಜಯ್ ವರ್ಮಾ ಜೊತೆ ತಮನ್ನಾ ಮದುವೆಯಾಗಲು ನಿರ್ಧರಿಸಿದ್ದಾರೆ. ಶುಭಕಾರ್ಯಕ್ಕೆ ಚಾಲನೆ ನೀಡುವ ಮುನ್ನ ದೇವರ ಸನ್ನಿಧಿಗೆ ನಟಿ ಭೇಟಿ ನೀಡಿದ್ದಾರೆ. ಕಳೆದ 2 ವರ್ಷಗಳಿಂದ ಬಾಲಿವುಡ್ ನಟ ವಿಜಯ್ ವರ್ಮಾ ಜೊತೆ ತಮನ್ನಾ ಭಾಟಿಯಾ ಎಂಗೇಜ್ ಆಗಿದ್ದಾರೆ. ಇತ್ತೀಚಿನ ಸಂದರ್ಶನಗಳಲ್ಲಿ ಡೇಟಿಂಗ್ ಬಗ್ಗೆ ತಮನ್ನಾ ರಿವೀಲ್ ಮಾಡಿದ್ದರು. ಮದುವೆ ಪ್ಲ್ಯಾನಿಂಗ್ ಬಗ್ಗೆ ಇಬ್ಬರು ಮುಕ್ತವಾಗಿ ಸಂದರ್ಶನಗಳಲ್ಲಿ ಅಭಿಪ್ರಾಯ ಹಂಚಿಕೊಂಡಿದ್ದರು.

'ಲಸ್ಟ್ ಸ್ಟೋರಿಸ್ 2'ನಲ್ಲಿ ತಮನ್ನಾ-ವಿಜಯ್ ವರ್ಮಾ ಬೋಲ್ಡ್ ಆಗಿ ನಟಿಸಿದ್ದರು. ವೆಬ್ ಸಿರೀಸ್‌ನಲ್ಲಿ ವಿಜಯ್ ಜೊತೆ ಹಸಿಬಿಸಿ ದೃಶ್ಯಗಳಲ್ಲಿ ಕಾಣಿಸಿಕೊಂಡಿದ್ದರು. ಚಿತ್ರೀಕರಣದ ವೇಳೆ ಪರಿಚಯವಾದ ಸ್ನೇಹ, ಪ್ರೀತಿಗೆ ತಿರುಗಿತ್ತು. ಇನ್ನೂ ಮದುವೆ ಯಾವಾಗ ಎಂದು ಈ ಜೋಡಿ ಅಧಿಕೃತ ಡೇಟ್ ಅನೌನ್ಸ್ ಮಾಡುವವರೆಗೂ ಕಾಯಬೇಕಿದೆ.

'ಜೈಲರ್' ಚಿತ್ರದ ಹಾಡಿಗೆ ತಮನ್ನಾ ಹೆಜ್ಜೆ ಹಾಕಿದ ಮೇಲೆ ಅವರಿಗೆ ಬೇಡಿಕೆ ಹೆಚ್ಚಾಗಿದೆ. ತೆಲುಗಿನ ಜೊತೆಗೆ ಹೆಚ್ಚೆಚ್ಚು ಬಾಲಿವುಡ್



ಸಿನಿಮಾಗಳಲ್ಲಿ ಕಾಣಿಸಿಕೊಳ್ತಿದ್ದಾರೆ. ಉತ್ತಮ ಕಥೆಗೆ ಗ್ರೀನ್ ಸಿಗ್ನಲ್ ಕೊಡುತ್ತಿದ್ದಾರೆ.

ಸದ್ಯ ಬಾಲಿವುಡ್‌ನ ಬಿಗ್ ಬಜೆಟ್ ಸಿನಿಮಾ ಸ್ತ್ರೀ ಚಿತ್ರದ ಪಾರ್ಟ್ 2ನಲ್ಲಿ ತಮನ್ನಾ ಭಾಟಿಯಾ ಅವರು ಸ್ಪೆಷಲ್ ಸಾಂಗ್‌ಗೆ ಹೆಜ್ಜೆ ಹಾಕ್ತಿದ್ದಾರೆ. ಈ ಚಿತ್ರದಲ್ಲಿ ರಾಜ್‌ಕುಮಾರ್ ರಾವ್- ಶ್ರದ್ಧಾ ಕಪೂರ್ ಮುಖ್ಯ ಪಾತ್ರದಲ್ಲಿ ನಟಿಸುತ್ತಿದ್ದಾರೆ.

# ಅದ್ದೂರಿಯಾಗಿ ಬಿಡುಗಡೆ ಆಯ್ತು 'ಪರವಶ'

ನೂತನ ಪ್ರತಿಭೆ ರಘು ಭಟ್ ಪ್ರಮುಖಪಾತ್ರದಲ್ಲಿ ನಟಿಸಿರುವ ಹೊಸ ಸಿನಿಮಾ 'ಪರವಶ' ಚಿತ್ರೀಕರಣ ಮುಕ್ತಾಯ ಹಂತದಲ್ಲಿದ್ದು, ಇತ್ತೀಚೆಗಷ್ಟೆ ಈ ಚಿತ್ರದ ಹೆಸರು ಹಾಗೂ ಪೋಸ್ಟರ್ ಅನ್ನು ನೆಲಮಂಗಲದ ಬಳಿ ಆಯೋಜಿಸಲಾಗಿದ್ದ ಅದ್ದೂರಿ ಸಮಾರಂಭದಲ್ಲಿ ಬಿಡುಗಡೆ ಮಾಡಲಾಯ್ತು. ಸಿನಿಮಾಕ್ಕೆ 'ಪರವಶ' ಎಂದು ಹೆಸರಿಡಲಾಗಿದ್ದು, ಸಿನಿಮಾದಲ್ಲಿ ನಟ ರವಿಚಂದ್ರನ್ ಸಹ ಪ್ರಮುಖ ಪಾತ್ರದಲ್ಲಿ ನಟಿಸಿದ್ದಾರೆ. ಅವ್ಯಕ್ತ ಸಿನಿಮಾಸ್ ಲಾಂಛನದಲ್ಲಿ ಹರೀಶ್ ಗೌಡ ಈ ಸಿನಿಮಾಕ್ಕೆ ಬಂಡವಾಳ ಹೂಡಿದ್ದು, ಸುಧೀಂದ್ರ ನಾಡಿಗರ್ ನಿರ್ದೇಶನ ಮಾಡಿದ್ದಾರೆ.

'ಹೊಸತಂಡದ ಜೊತೆಗೆ ಕೆಲಸ ಮಾಡಿರುವುದು ಖುಷಿಯಾಗಿದೆ. ನಾನು ಈತನಕ ಮಾಡಿರದ ಪಾತ್ರದಲ್ಲಿ ಕಾಣಿಸಿಕೊಂಡಿದ್ದೀನಿ. ನನ್ನ ಭಾಗದ ಚಿತ್ರೀಕರಣ ಮುಕ್ತಾಯವಾಗಿದೆ. ಹಲವರು ಹಲವು ರೀತಿಯ ಪಾತ್ರಗಳನ್ನು ನನಗೆ ನೀಡಿದ್ದಾರೆ. ಈ ಸಿನಿಮಾದಲ್ಲಿ ನನಗೆ 'ಘೋಸ್ಟ್ ಡಾಕ್ಟರ್' ಪಾತ್ರ ಕೊಟ್ಟಿದ್ದಾರೆ. ನಿರ್ದೇಶಕ ಸುಧೀಂದ್ರ ನಾಡಿಗರ್ ಅವರ ನಿರ್ದೇಶನದ ಶೈಲಿ ಭಿನ್ನವಾಗಿದೆ. ನಿರ್ಮಾಪಕರಿಗೆ ಹಾಗೂ ಇಡೀ ತಂಡಕ್ಕೆ ಒಳ್ಳೆಯದಾಗಲಿ' ಎಂದರು ಕ್ರೇಜಿಸ್ಟಾರ್ ರವಿಚಂದ್ರನ್.

'ವಿಭಿನ್ನ ಕಥಾಹಂದರ ಹೊಂದಿರುವ ಈ ಚಿತ್ರಕ್ಕೆ ಈಗಾಗಲೇ ನಲವತ್ತು ದಿನಗಳ ಚಿತ್ರೀಕರಣ ಮುಕ್ತಾಯವಾಗಿದೆ. ಕೆಲವು ದಿನಗಳ ಚಿತ್ರೀಕರಣ ಮಾತ್ರ ಬಾಕಿಯಿದೆ. ಮಂಗಳೂರು,





ಉಡುಪಿ, ಮಣಿಪಾಲ ಹಾಗೂ ಕುಂದಾಪುರದಲ್ಲಿ ಚಿತ್ರೀಕರಣವಾಗಿದೆ. ರವಿಚಂದ್ರನ್, ರಘು ಭಟ್, ಸೋನಾಲ್ ಮೊಂಟೆರೊ, ಪವಿತ್ರ ಲೋಕೇಶ್, ರಾಜೇಶ್ ನಟರಂಗ, ಸುಜಯ್ ಶಾಸ್ತ್ರಿ, ಅನನ್ಯ ಮುಂತಾದವರು ತಾರಾಬಳಗದಲ್ಲಿದ್ದಾರೆ. ನಾಯಕ ರಘು ಭಟ್ ''ಪರವಶ'' ಚಿತ್ರಕ್ಕೆ ಕಥೆ ಬರೆದಿದ್ದಾರೆ. ಸಚಿನ್ ಬಸ್ರೂರ್ ಸಂಗೀತ ನಿರ್ದೇಶನ, ಆನಂದ್ ಮೀನಾಕ್ಷಿ ಛಾಯಾಗ್ರಹಣ ಹಾಗೂ ಪ್ರತೀಕ್ ಶೆಟ್ಟಿ ಅವರ ಸಂಕಲನವಿರುವ ಈ ಚಿತ್ರದ ಹಾಡುಗಳನ್ನು ಪ್ರಮೋದ್ ಮರವಂತೆ ರಚಿಸಿದ್ದಾರೆ. ಸಂಭಾಷಣೆಯನ್ನು ರಘು ನಿಡವಳ್ಳಿ ಬರೆದಿದ್ದಾರೆ' ಎಂದು ನಿರ್ದೇಶಕ ಸುಧೀಂದ್ರ ನಾಡಿಗರ್ ತಿಳಿಸಿದರು.

'ನಾನು ನಿರ್ಮಾಣ ಮಾಡುತ್ತಿರುವ 'ಪರವಶ' ಸಿನಿಮಾದ ಶೀರ್ಷಿಕೆ ನಮ್ಮೂರಿನಲ್ಲಿ ಬಿಡುಗಡೆ ಆಗಿರುವುದು ಖುಷಿಯಾಗಿದೆ. ಹೊಸತಂಡಕ್ಕೆ ಪ್ರೋತ್ಸಾಹ ನೀಡುತ್ತಿರುವ ರವಿಚಂದ್ರನ್ ಅವರಿಗೆ ಹಾಗೂ ಇಡೀ ಚಿತ್ರತಂಡಕ್ಕೆ ನನ್ನ ಧನ್ಯವಾದ ಎಂದರು ನಿರ್ಮಾಪಕ ಹರೀಶ್ ಗೌಡ. 'ಥ್ರಿಲ್ಲರ್, ಕೌಟುಂಬಿಕ ಹಾಗೂ ಪ್ರೇಮ ಕಥಾಹಂದರವುಳ್ಳ ''ಪರವಶ'' ಚಿತ್ರದಲ್ಲಿ ಜನರಿಗೆ ಬೇಕಾದ ಎಲ್ಲಾ ಅಂಶಗಳು ಇದೆ. ಒಟ್ಟಿನಲ್ಲಿ ಪ್ರೇಕ್ಷಕ ಕೊಟ್ಟ ದುಡ್ಡಿಗೆ ದುಪ್ಪಟ್ಟು ಮನೋರಂಜನೆ ನೀಡುವ ಚಿತ್ರವಿದು. ಸಚಿನ್ ಬಸ್ರೂರ್ ಸಂಗೀತ ನೀಡಿರುವ ಚಿತ್ರದ ಹಾಡುಗಳು ಕೂಡ ಮುದ ನೀಡುತ್ತದೆ ಎಂದು ನಾಯಕ ಹಾಗೂ ಕಥೆಗಾರ ಸಹ ಆಗಿರುವ ರಘು ಭಟ್ ತಿಳಿಸಿದರು.

ಚಿತ್ರದಲ್ಲಿ ನನ್ನ ಪಾತ್ರ ಕೂಡ ಚೆನ್ನಾಗಿದೆ. ಈ ತಂಡದ ಜೊತೆಗೆ ಕೆಲಸ ಮಾಡಿದ್ದು ಸಂತೋಷವಾಗಿದೆ ಎಂದರು ನಾಯಕಿ ಸೋನಾಲ್ ಮೊಂಟೆರೊ. ಕಲಾವಿದರಾದ ರಾಜೇಶ್ ನಟರಂಗ, ಸುಜಯ್ ಶಾಸ್ತ್ರಿ ಅನನ್ಯ, ಹಾಗೂ ಛಾಯಾಗ್ರಾಹಕ ಆನಂದ್ ಮೀನಾಕ್ಷಿ ಚಿತ್ರತಂಡದ ಅನೇಕ ಸದಸ್ಯರು ಶೀರ್ಷಿಕೆ ಬಿಡುಗಡೆ ಸಮಾರಂಭದಲ್ಲಿ ಉಪಸ್ಥಿತರಿದ್ದರು.

# ಐಪಿಎಲ್‌ನಿಂದ ಮೂವರು ಔಟ್

ಇಂಡಿಯನ್ ಪ್ರೀಮಿಯರ್ ಲೀಗ್ ಸೀಸನ್ 17 ಆರಂಭಕ್ಕೆ ದಿನಗಣನೆ ಶುರುವಾಗಿದೆ. ಮಾರ್ಚ್ 22 ರಿಂದ ಆರಂಭವಾಗಲಿರುವ ವಿಶ್ವದ ಶ್ರೀಮಂತ ಲೀಗ್‌ನಿಂದ ಈಗಾಗಲೇ ಮೂವರು ಆಟಗಾರರು ಹೊರಬಿದ್ದಿದ್ದಾರೆ. ಇನ್ನೂ ಕೆಲ ಆಟಗಾರರು ಗಾಯದಿಂದ ಬಳಲುತ್ತಿದ್ದು, ಅವರ ಪಾಲ್ಗೊಳ್ಳುವಿಕೆಯ ಬಗ್ಗೆ ಖಚಿತತೆಯಿಲ್ಲ. ಹಾಗಿದ್ರೆ ಐಪಿಎಲ್‌ನಿಂದ ಹೊರಬಿದ್ದಿರುವ ಆಟಗಾರರು ಯಾರೆಲ್ಲಾ ಎಂದು ನೋಡೋಣ...

ಮಾರ್ಕ್ ವುಡ್: ಲಕ್ನೋ ಸೂಪರ್ ಜೈಂಟ್ಸ್ ತಂಡದ ವೇಗಿ ಮಾರ್ಕ್ ವುಡ್ ಐಪಿಎಲ್‌ನಿಂದ ಹೊರಗುಳಿದಿದ್ದಾರೆ. ವೈಯುಕ್ತಿಕ ಕಾರಣಗಳಿಂದಾಗಿ ಇಂಗ್ಲೆಂಡ್ ವೇಗಿ ಐಪಿಎಲ್‌ನಿಂದ ಹಿಂದೆ ಸರಿದಿದ್ದಾರೆ. ಹೀಗಾಗಿ ಅವರ ಬದಲಿ ಆಟಗಾರನಾಗಿ ವೆಸ್ಟ್ ಇಂಡೀಸ್‌ನ ಶಮರ್ ಜೋಸೆಫ್ ಆಯ್ಕೆಯಾಗಿದ್ದಾರೆ.

**ಗಸ್ ಅಟ್ಕಿನ್ಸನ್:** ಈ ಬಾರಿಯ ಐಪಿಎಲ್ ಹರಾಜಿನಲ್ಲಿ ಇಂಗ್ಲೆಂಡ್ ವೇಗಿ ಗಸ್ ಅಟ್ಕಿನ್ಸನ್ ಅವರನ್ನು ಕೊಲ್ಕತ್ತಾ ನೈಟ್ ರೈಡರ್ಸ್ ಆಯ್ಕೆ ಮಾಡಿಕೊಂಡಿತ್ತು. ಆದರೀಗ ಕೆಲಸದ ಒತ್ತಡದ ಕಾರಣ ಅಟ್ಕಿನ್ಸನ್ ಕೂಡ ಐಪಿಎಲ್‌ನಿಂದ ಹಿಂದೆ ಸರಿದಿದ್ದಾರೆ. ಹೀಗಾಗಿ ಬದಲಿ ಆಟಗಾರನಾಗಿ ಶ್ರೀಲಂಕಾ ತಂಡದ ವೇಗಿ ದುಷ್ಮಂತ ಚಮೀರಾರನ್ನು ಕೆಕೆಆರ್ ಆಯ್ಕೆ ಮಾಡಿದೆ.

ಮೊಹಮ್ಮದ್ ಶಮಿ: ಟೀಮ್ ಇಂಡಿಯಾ ವೇಗಿ



ಮೊಹಮ್ಮದ್ ಶಮಿ ಈ ಬಾರಿಯ ಐಪಿಎಲ್‌ನಲ್ಲಿ ಕಣಕ್ಕಿಳಿಸುವುದಿಲ್ಲ. ಗುಜರಾತ್ ಟೈಟಾನ್ಸ್ ತಂಡದ ಪ್ರಮುಖ ಬೌಲರ್ ಆಗಿರುವ ಶಮಿ ಹಿಮ್ಮಡಿ ಪಾದದ ಶಸ್ತ್ರಚಿಕಿತ್ಸೆಗೆ ಒಳಗಾಗಿದ್ದಾರೆ. ಹೀಗಾಗಿ ಅವರು ಕೂಡ ಐಪಿಎಲ್‌ನಿಂದ ಹೊರಗುಳಿದಿದ್ದಾರೆ. ಇದಾಗ್ಯೂ, ಗುಜರಾತ್ ಟೈಟಾನ್ಸ್ ಬದಲಿ ಆಟಗಾರನನ್ನು ಹೆಸರಿಸಿಲ್ಲ.

ಟಾಮ್ ಕರನ್: ಆರ್‌ಸಿಬಿ ತಂಡದಲ್ಲಿರುವ ಇಂಗ್ಲೆಂಡ್ ಆಲ್‌ರೌಂಡರ್ ಟಾಮ್ ಕರನ್ ಕೂಡ ಈ ಬಾರಿಯ ಐಪಿಎಲ್‌ನಲ್ಲಿ ಕಾಣಿಸಿಕೊಳ್ಳುವುದು ಅನುಮಾನ ಎನ್ನಲಾಗಿದೆ. ಮೊಣಕಾಲಿನ ಗಾಯಕ್ಕೆ ತುತ್ತಾಗಿರುವ ಕರನ್ ಇನ್ನೂ ಕೂಡ ಚೇತರಿಸಿಕೊಂಡಿಲ್ಲ. ಹೀಗಾಗಿ ಐಪಿಎಲ್‌ನಿಂದ ಹಿಂದೆ ಸರಿಯುವ ಸಾಧ್ಯತೆಯಿದೆ.

ಇನ್ನು ರಶೀದ್ ಖಾನ್ ಹಾಗೂ ಸೂರ್ಯಕುಮಾರ್ ಯಾದವ್ ಕೂಡ ಫಿಟ್‌ನೆಸ್ ಸಮಸ್ಯೆಯನ್ನು ಎದುರಿಸುತ್ತಿದ್ದಾರೆ. ಇದಾಗ್ಯೂ ಸೂರ್ಯಕುಮಾರ್ ಇದೀಗ ಅಭ್ಯಾಸವನ್ನು ಶುರು ಮಾಡಿಕೊಂಡಿದ್ದು, ಹೀಗಾಗಿ ಐಪಿಎಲ್‌ಗೆ ವೇಳೆಗೆ ಸಂಪೂರ್ಣ ಫಿಟ್‌ನೆಸ್ ಸಾಧಿಸುವ ನಿರೀಕ್ಷೆಯಿದೆ.

# ರಾಮೇಶ್ವರಂ ಕೆಫೆ ಸ್ಫೋಟವನ್ನು ಭಜರಂಗದಳದ ಮೇಲೆ ಹಾಕುವವರಿದ್ದರು

**ವಿಜಯಪುರ:** ಬೆಂಗಳೂರು ರಾಮೇಶ್ವರಂ ಕೆಫೆ ಸ್ಫೋಟದ ಪ್ರಕರಣವನ್ನು ಭಜರಂಗದಳದ ಮೇಲೆ ಹಾಕುವವರಿದ್ದರು ಅಯೋಗ್ಯ ನನ್ಮಕ್ಕಳು ಎಂದು ವಿಜಯಪುರ ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಪರೋಕ್ಷವಾಗಿ ರಾಜ್ಯ ಸರ್ಕಾರದ ವಿರುದ್ಧ ಕಿಡಿಕಾರಿದ್ದಾರೆ. ವಿಜಯಪುರ ನಗರದ ರಾಣಿ ಬಗೀಚ್ ಪ್ರದೇಶಗಳಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ಉದ್ದೇಶ ಪೂರ್ವಕವಾಗಿ ಸ್ಫೋಟ ಮಾಡಿದ್ದಾರೆ. ಬ್ರ್ಯಾಂಡ್ ಬೆಂಗಳೂರು ಅಲ್ಲ ಬಾಂಬ್ ಬೆಂಗಳೂರು ಆಗಿದೆ. ಮಂಗಳೂರು ಕುಕ್ಕರ್ ಬಾಂಬ್ ಸ್ಫೋಟದಲ್ಲೂ ಕಾಂಗ್ರೆಸ್‌ನವರು ಹೀಗೆ ಹೇಳಿದ್ದರು. ಸಿಎಂ ಸಿದ್ದರಾಮಯ್ಯ ಅವರಿಗೆ ಇವೆಲ್ಲ ನಿಭಾಯಿಸಲು ಆಗದಿದ್ದರೆ ರಾಜೀನಾಮೆ ನೀಡಲಿ ಎಂದು ಒತ್ತಾಯಿಸಿದರು.

ಭಯೋತ್ಪಾದನಾ ಕೃತ್ಯಗಳಿಗೆ ಕರ್ನಾಟಕ ಸಂರಕ್ಷಿತ ತಾಣವಾದಂತಾಗಿದೆ. ರಾಜ್ಯ ಪ್ರಯೋಗ ಶಾಲೆಯಾಗಿದೆ. ಜನನಿಬಿಡ ಮಾರುಕಟ್ಟೆ, ಚಿತ್ರಮಂದಿರಗಳಲ್ಲಿ ಆಗಿದ್ದರೆ ಅನಾಹುತವಾಗುತ್ತಿತ್ತು. ಇವೆಲ್ಲ ನಿಭಾಯಿಸಲು ಆಗದಿದ್ದರೆ ಮನೆಗೆ ಹೋಗಿ. ರಾಮೇಶ್ವರಂ ಕೆಫೆಯಲ್ಲಿ ಶುಕ್ರವಾರ ದಿನವೇ ಬ್ಲಾಸ್ಟ್ ಮಾಡಿದ್ದಾರೆ. ಉದ್ದೇಶ ಪೂರ್ವಕವಾಗಿ ಮಾಡಿದ್ದಾರೆ.



ಅಯೋಧ್ಯಾ ರಾಮ ಮಂದಿರ ನಿರ್ಮಾಣ ಸಹಿಸಲಾಗದೆ ಬ್ಲಾಸ್ಟ್ ಮಾಡಿದ್ದಾರೆ. ಇವರೆಲ್ಲ ನಾಶವಾಗುವ ಕಾಲ ಬಂದಿದೆ ಎಂದರು.

ವಿಧಾನಸೌಧದಲ್ಲಿ ಪಾಕಿಸ್ತಾನ ಜಿಂದಾಬಾದ್ ಘೋಷಣೆ ವಿಚಾರವಾಗಿ ಮಾತನಾಡಿದ ಅವರು, ಎಫ್‌ಎಸ್‌ಎಲ್ ವರದಿಯಲ್ಲಿ ಘೋಷಣೆ ಕೂಗಿದ್ದು ಸಾಬೀತಾಗಿದೆ. ಪಾಕಿಸ್ತಾನ ಜಿಂದಾಬಾದ್ ಎಂದು ಕೂಗಿದ್ದು ನಿಜ. ಇದನ್ನು ಎಫ್‌ಎಸ್‌ಎಲ್ ಪರೀಕ್ಷೆಗೆ ಒಳಪಡಿಸುವುದು ಬೇಡ, ಪರೀಕ್ಷೆ ಅನವಶ್ಯಕ ಎಂದಿದ್ದೆ. ಆದರೂ ಕೂಡ ಸಚಿವರಾದ ಪ್ರಿಯಾಂಕ್ ಖರ್ಗೆ ಹಾಗೂ ಜಿ. ಪರಮೇಶ್ವರ ಸಮರ್ಥನೆ ಮಾಡಿಕೊಂಡು, ಪ್ರಯೋಗಾಲಯಕ್ಕೆ ಕಳುಹಿಸಿದ್ದಾರೆ.

ಪಾಕಿಸ್ತಾನ ಜಿಂದಾಬಾದ್ ಘೋಷಣೆ ವಿಚಾರದಲ್ಲಿ ರಾಜ್ಯಸಭಾ ಸದಸ್ಯ ಸಯ್ಯದ್ ನಾಸೀರ್ ಹುಸೇನ್ ಮೇಲೆ ಕ್ರಮ ತೆಗೆದುಕೊಂಡಿಲ್ಲ. ಇಂಥಹ ಘಟನೆಗಳು ರಾಜ್ಯದಲ್ಲಿ ಭಯೋತ್ಪಾದನೆಗೆ ಇಂಬು ಕೊಡುತ್ತಿವೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಮುಂದಿನ ಲೋಕಸಭಾ ಚುನಾವಣೆಯಲ್ಲಿ ನಾವೆ ಅಧಿಕಾರಕ್ಕೆ ಬರುತ್ತೇವೆ. ಸಮಾನ ನಾಗರಿಕ ಕಾಯ್ದೆ ಜಾರಿ ಮಾಡುತ್ತೇವೆ. ಒಂದು ಕುಟುಂಬಕ್ಕೆ ಎರಡೇ ಮಕ್ಕಳು ಅಂತ ಕಾನೂನು ಜಾರಿ ಮಾಡುತ್ತೇವೆ. ಯಾರಿಗೆ ಪಾಕಿಸ್ತಾನದ ಮೇಲೆ ಪ್ರೀತಿ ಇದೆ ಅವರು ಪಾಕಿಸ್ತಾನಕ್ಕೆ ಹೋಗಲಿ. ಪಾಕಿಸ್ತಾನಕ್ಕೆ ಜಿಂದಾಬಾದ್ ಎನ್ನುವವರು ಅಲ್ಲಿ ಹೋಗಿ. ಮಾಯನ್ಮಾರ್‌ನಲ್ಲಿ ರೋಹಿಂಗ್ಯಾಗಳನ್ನು ಹೊಡೆದು ಹೊರ ಹಾಕಿದಂತೆ ಇಲ್ಲಿಯೂ ದೇಶ ದ್ರೋಹಿಗಳಿಗೆ ಹೊಡೆದು ಹೊರ ಹಾಕಬೇಕಾಗುತ್ತದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

# ವಿಶೇಷ ಮೈಲಿಗಲ್ಲು ದಾಟಿದ ಪ್ಯಾಟ್ ಕಮಿನ್ಸ್

ವೆಲ್ಲಿಂಗ್ಟನ್‌ನಲ್ಲಿ ನಡೆಯುತ್ತಿರುವ ನ್ಯೂಝಿಲೆಂಡ್ ವಿರುದ್ಧದ ಟೆಸ್ಟ್ ಪಂದ್ಯದಲ್ಲಿ 1 ವಿಕೆಟ್ ಕಬಳಿಸುವುದರೊಂದಿಗೆ ಆಸ್ಟ್ರೇಲಿಯಾ ತಂಡದ ನಾಯಕ ಪ್ಯಾಟ್ ಕಮಿನ್ಸ್ ವಿಶೇಷ ದಾಖಲೆ ಬರೆದಿದ್ದಾರೆ. ಅಲ್ಲದೆ ಈ ಸಾಧನೆ ಮಾಡಿದ ವಿಶ್ವದ 10ನೇ ನಾಯಕ ಎನಿಸಿಕೊಂಡಿದ್ದಾರೆ.

ಈ ಪಂದ್ಯದ ಮೊದಲ ಇನಿಂಗ್ಸ್‌ನಲ್ಲಿ 10 ಓವರ್‌ಗಳನ್ನು ಎಸೆದ ಕಮಿನ್ಸ್ 33 ರನ್ ನೀಡಿ 1 ವಿಕೆಟ್ ಕಬಳಿಸಿದರು. ಇದರೊಂದಿಗೆ ಟೆಸ್ಟ್ ಕ್ರಿಕೆಟ್‌ನಲ್ಲಿ 100 ವಿಕೆಟ್ ಕಬಳಿಸಿದ ವಿಶ್ವದ 10ನೇ ಕ್ಯಾಪ್ಟನ್ ಎನಿಸಿಕೊಂಡರು. ಹಾಗೆಯೇ ಈ ಸಾಧನೆ ಮಾಡಿದ ಆಸ್ಟ್ರೇಲಿಯಾದ 2ನೇ ನಾಯಕ ಎಂಬ ಹಿರಿಮೆಗೆ ಪಾತ್ರರಾದರು. ಇದಕ್ಕೂ ಮುನ್ನ ಆಸ್ಟ್ರೇಲಿಯಾ ತಂಡದ ಮಾಜಿ ನಾಯಕ ರಿಚಿ ಬೆನಾಡ್ ಈ ಸಾಧನೆ ಮಾಡಿದ್ದರು. ಇದೀಗ 100 ವಿಕೆಟ್‌ಗಳನ್ನು ಪೂರೈಸುವ ಮೂಲಕ ಪ್ಯಾಟ್ ಕಮಿನ್ಸ್ ವಿಶೇಷ ಸಾಧಕರ ಪಟ್ಟಿಗೆ ಸೇರ್ಪಡೆಯಾಗಿದ್ದಾರೆ.

ಇನ್ನು ಟೆಸ್ಟ್ ಕ್ರಿಕೆಟ್‌ನಲ್ಲಿ ಅತ್ಯಧಿಕ ವಿಕೆಟ್ ಪಡೆದ ನಾಯಕ ಎಂಬ ದಾಖಲೆ ಪಾಕಿಸ್ತಾನದ ಇಮ್ರಾನ್ ಖಾನ್ ಹೆಸರಿನಲ್ಲಿದೆ. ಪಾಕ್ ತಂಡದ ಮಾಜಿ ನಾಯಕ ಇಮ್ರಾನ್ ಖಾನ್ ಒಟ್ಟು 187 ವಿಕೆಟ್‌ಗಳನ್ನು ಕಬಳಿಸಿ ವಿಶ್ವ ದಾಖಲೆ ನಿರ್ಮಿಸಿದ್ದಾರೆ.



ಇಮ್ರಾನ್ ಖಾನ್ ಅಲ್ಲದೆ ರಿಚಿ ಬೆನಾಡ್ (138 ವಿಕೆಟ್ಸ್), ಗ್ಯಾರಿ ಸೋಬರ್ಸ್ (117), ಡೇನಿಯಲ್ ವೆಟ್ಟೋರಿ (116), ಕಪಿಲ್ ದೇವ್ (111), ವಾಸಿಂ ಅಕ್ರಮ್ (107), ಬಿಷನ್ ಸಿಂಗ್ ಬೇಡಿ (106), ಶಾನ್ ಪೊಲಾಕ್ (103), ಜೇಸನ್ ಹೋಲ್ಡರ್ (100) ಈ ಸಾಧನೆ ಮಾಡಿದ್ದಾರೆ. ಇದೀಗ ಟೆಸ್ಟ್ ಕ್ರಿಕೆಟ್‌ನಲ್ಲಿ 100 ವಿಕೆಟ್‌ಗಳನ್ನು ಕಬಳಿಸುವ ಮೂಲಕ ಈ ಸಾಧನೆ ಮಾಡಿದ ವಿಶ್ವದ 10ನೇ ಕ್ಯಾಪ್ಟನ್ ಎಂಬ ವಿಶ್ವ ದಾಖಲೆಯನ್ನು ಪ್ಯಾಟ್ ಕಮಿನ್ಸ್ ತಮ್ಮದಾಗಿಸಿಕೊಂಡಿದ್ದಾರೆ.

# ಬಿಜೆಪಿ ಸೇರ್ಪಡೆಯಾದ ಕಾಂಗ್ರೆಸ್ ಮುಖಂಡ!

**ಬೆಂಗಳೂರು:** ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಸಮ್ಮುಖದಲ್ಲಿ ಕಾಂಗ್ರೆಸ್ ಮುಖಂಡ ಮನೋಹರ್ ತಹಶೀಲ್ದಾರ್ ಶನಿವಾರ ಬಿಜೆಪಿ ಸೇರ್ಪಡೆ ಆಗಿದ್ದಾರೆ. ಮಲ್ಲೇಶ್ವರಂನಲ್ಲಿರುವ ಬಿಜೆಪಿ ಕಚೇರಿಯಲ್ಲಿ ಪಕ್ಷದ ಬಾವುಟ ನೀಡಿ ಬರಮಾಡಿಕೊಂಡಿದ್ದಾರೆ. 50 ವರ್ಷಗಳಿಂದ ಕಾಂಗ್ರೆಸ್‌ನಲ್ಲಿದ್ದ ಅವರು ಕಳೆದ ಚುನಾವಣೆಯಲ್ಲಿ ಟಿಕೆಟ್ ಕೈತಪ್ಪಿದ್ದರಿಂದ ಜೆಡಿಎಸ್ ಸೇರ್ಪಡೆಕೊಂಡಿದ್ದರು. ಇದೀಗ ಬಿಜೆಪಿ ಸೇರ್ಪಡೆ ಆಗಿದ್ದಾರೆ. ಈಗಾಗಲೇ ಲೋಕಸಭಾ ಚುನಾವಣಾ ಸಿದ್ಧತೆಯಲ್ಲಿರುವ ಬಿಜೆಪಿ ಆ ಮೂಲಕ ಹಾವೇರಿ ಕ್ಷೇತ್ರವನ್ನು ಮತ್ತಷ್ಟು ಬಲಗೊಳಿಸಲು ಮುಂದಾಗಿದೆ. ವಿಪಕ್ಷ ನಾಯಕ ಆರ್.ಅಶೋಕ್, ಮಾಜಿ ಸಿಎಂ ಬೊಮ್ಮಾಯಿ ಉಪಸ್ಥಿತರಿದ್ದರು.

ಮಾಜಿ ಸಿಎಂ ಬಸವರಾಜ ಬೊಮ್ಮಾಯಿಯವರೊಂದಿಗೆ ಮಾತುಕತೆ ಬಳಿಕ ಮನೋಹರ್ ತಹಸೀಲ್ದಾರ್ ಅವರು ಜೆಡಿಎಸ್ ತೊರೆದು ಬಿಜೆಪಿ ಸೇರ್ಪಡೆ ಆಗಿದ್ದಾರೆ ಎನ್ನಲಾಗುತ್ತಿದೆ. ಮನೋಹರ್ ತಹಸೀಲ್ದಾರ್ ಅವರು ನಾಗರಿಕ ಸ್ನೇಹಿ ನಾಯಕರಾಗಿದ್ದಲ್ಲದೆ, ಸಾಕಷ್ಟು ಜನಪ್ರಿಯತೆಯನ್ನು ಹೊಂದಿದ್ದಾರೆ. ಜೊತೆಗೆ ಅವರದ್ದೇ ಆದ ವೋಟ್ ಬ್ಯಾಂಕ್ ಹೊಂದಿದ್ದಾರೆ. ಹಾಗಾಗಿ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿಗೆ ಕರೆತರಲಾಗಿದೆ.



ಬಿಜೆಪಿ ಸೇರ್ಪಡೆ ಬಳಿಕ ಮಾತನಾಡಿದ ಮನೋಹರ್ ತಹಶೀಲ್ದಾರ್, ಹಾವೇರಿಗೆ ಒಳ್ಳೆ ಅಭ್ಯರ್ಥಿ ಬೇಕು ಎನ್ನುವ ಮಾತು ಇದೆ. ಹೀಗಾಗಿ ಬಸವರಾಜ ಬೊಮ್ಮಾಯಿ ಅವರು ಒಳ್ಳೆ ಕೆಲಸ ಮಾಡಿದಾರೆ. ಅವರು ಹಾವೇರಿಯ ಬಿಜೆಪಿ ಅಭ್ಯರ್ಥಿ ಆಗಬೇಕು. ಇದು ಜನರ ಅಭಿಪ್ರಾಯ ನಮ್ಮ ಅಭಿಪ್ರಾಯವೂ ಹೌದು. ನಾವು ಬೊಮ್ಮಾಯಿ ಅವರನ್ನ ಲೋಕಸಭಾ ಸದಸ್ಯರನ್ನಾಗಿ ಮಾಡಿ ಕಳಿಸುತ್ತೇವೆ ಎಂದು ಹೇಳಿದ್ದಾರೆ.

ಎಲ್ಲರೂ ಒಪ್ಪಿದ್ದಕ್ಕೆ ಬಿಜೆಪಿಗೆ ಬಂದಿದ್ದೇನೆ. ಬಸವರಾಜ ಬೊಮ್ಮಾಯಿ ಅವರು ಇರುವಷ್ಟು ಕಾಲ ಅವರೊಂದಿಗೆ ಇರೋಣ ಅಂತ ಬಂದಿದ್ದೇನೆ. ಯಾವುದೇ ಟಿಕೆಟ್‌ಗೆ ಬೇಡಿಕೆ ಇಟ್ಟಿಲ್ಲ. ಪಕ್ಷದಲ್ಲಿ ಗೌರವ ಕೊಡಿ ಅಂತ ಅಷ್ಟೇ ಕೇಳಿದ್ದೇನೆ ಎಂದರು.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com